11 September 2025 Thursday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಕತ್ತಲೆಯನ್ನು ದಾಟಿ ಬೆಳಕು
ನೀಡುವುದರಿಂದಲೇ ದೀಪಕ್ಕೊಂದು ಬೆಲೆ!
ಕಷ್ಟಗಳನ್ನು ಮೀರಿ ಬೆಳೆದು ನಿಂತಾಗಲೇ
ಬದುಕಿಗೊಂದು ಬೆಲೆ!
ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಕತ್ತಲೆಯಲ್ಲಿ ನೆರಳು
ಮರೆಯಾಗುವ ರೀತಿ
ಕಷ್ಟದ ಸಮಯದಲ್ಲಿ
ಸಂಬಂಧಿಕರು
ಮಾಯವಾಗುತ್ತಾರೆ
ಮೈಲಾರ ಸಾವಿತ್ರಿಬಾಯಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 50 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# 57 ಸಾವಿರ ಸೈಬರ್ ಅಪರಾಧ

## 5,475 ಕೋಟಿ ರೂ. ನಷ್ಟ | ಗೃಹ ಸಚಿವ ಪರಮೇಶ್ವರ್

**ಬೆಳಗಾವಿ:** ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ 57,733 ಸೈಬರ್ ಅಪರಾಧಗಳು ನಡೆದಿವೆ. ಇದರಿಂದ ಜನರು 5,475 ಕೋಟಿ ರೂಪಾಯಿ ಕಳೆದುಕೊಂಡಿದ್ದಾರೆ ಎಂಬ ಆಘಾತಕಾರಿ ಮಾಹಿತಿಯನ್ನು ಸದನದಲ್ಲಿ ಬುಧವಾರ ಗೃಹಸಚಿವರು ನೀಡಿದರು.

ಇದರಲ್ಲಿ ಪೊಲೀಸರು ಕೇವಲ 10,717 ಪ್ರಕರಣಗಳನ್ನು ಪತ್ತೆಹಚ್ಚುವಲ್ಲಿ ಮತ್ತು ಕೇವಲ 627 ಕೋಟಿ ರೂಪಾಯಿ ವಸೂಲಿ ಮಾಡುವಲ್ಲಿ ಮಾತ್ರ ಯಶಸ್ವಿಯಾಗಿದ್ದಾರೆ. ಆದರೆ ಈ ವರ್ಷ ಸರ್ಕಾರ ತೆಗೆದುಕೊಂಡ ಕ್ರಮಗಳಿಂದ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದರು.

ಶಾಸಕ ಸಿಮೆಂಟ್ ಮಂಜು ಪ್ರಶ್ನೆಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಸದನದಲ್ಲಿ ಸೈಬರ್ ಅಪರಾಧಗಳ ಕುರಿತು ವಿವರವಾದ ಅಂಕಿ-ಅಂಶ ಮಂಡಿಸಿದರು. ಸೈಬರ್ ಅಪರಾಧಗಳನ್ನು ನಿಗ್ರಹಿಸಲು ಮತ್ತು ಪತ್ತೆ ಹಚ್ಚಲು ಪೊಲೀಸರಿಗೆ ಅಧಿಕಾರ



ನೀಡಲು ಪೊಲೀಸ್ ಕಾಯ್ದೆಯಲ್ಲಿ ಬದಲಾವಣೆಗಳನ್ನು ತರಲಾಗಿದೆ ಎಂದು ಹೇಳಿದರು.

ಸರ್ಕಾರ ತೆಗೆದುಕೊಂಡ ಕ್ರಮಗಳ ಹೊರತಾಗಿಯೂ, ಅಂತಹ ಅಪರಾಧಗಳಲ್ಲಿ ಭಾಗಿಯಾಗಿರುವ ವ್ಯಕ್ತಿಗಳು ಸುಧಾರಿತ ತಂತ್ರಜ್ಞಾನವನ್ನು ಬಳಸಿಕೊಂಡು ಅಮಾಯಕ ಜನರನ್ನು ವಂಚಿಸುತ್ತಿದ್ದಾರೆ. 2023 ರಲ್ಲಿ ವರದಿಯಾದ ಸೈಬರ್ ಅಪರಾಧಗಳ ಸಂಖ್ಯೆ 22,255. 873.29 ಕೋಟಿ ಹಣ ವಂಚನೆ ಮಾಡಲಾಗಿದೆ. ಪೊಲೀಸರು 6,159 ಪ್ರಕರಣಗಳನ್ನು ಪತ್ತೆಹಚ್ಚಿ 177 ಕೋಟಿ ರೂಪಾಯಿ ವಸೂಲಿ ಮಾಡಿದ್ದಾರೆ. ಈ ವರ್ಷ ಪ್ರಕರಣಗಳ ಸಂಖ್ಯೆ ಕಡಿಮೆಯಿದ್ದರೂ ಕಳವಾದ ಹಣ 2,039 ಕೋಟಿ ರೂಪಾಯಿಗೆ ಏರಿಕೆಯಾಗಿದೆ. ಒಟ್ಟಾರೆಯಾಗಿ, 1,009 ಪ್ರಕರಣಗಳು ಪತ್ತೆಯಾಗಿವೆ. 127 ಕೋಟಿ ರೂಪಾಯಿ ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯಾದ್ಯಂತ 43 ಸೈಬರ್ ಅಪರಾಧ, ಆರ್ಥಿಕ ಅಪರಾಧಗಳು ಮತ್ತು ಮಾದಕ ದ್ರವ್ಯ ಪೊಲೀಸ್ ಠಾಣೆಗಳನ್ನು ಸ್ಥಾಪಿಸುವುದು ಸೇರಿದಂತೆ ಗೃಹ ಇಲಾಖೆ ತೆಗೆದುಕೊಂಡ ಹಲವಾರು ಉಪಕ್ರಮಗಳಿಂದಾಗಿ ಈ ಸಂಖ್ಯೆಯಲ್ಲಿ ಇಳಿಕೆ ಕಂಡುಬಂದಿದೆ ಎಂದು ಗೃಹಸಚಿವರು ಹೇಳಿದರು.

ಆನ್‌ಲೈನ್ ಬೆಟ್ಟಿಂಗ್ ಮತ್ತು ಗೇಮ್‌ಗಳನ್ನು ನಿಯಂತ್ರಿಸುವ

ಪುಟ 2ಕ್ಕೆ

# ದ್ವೇಷ ಭಾಷಣ: 10 ವರ್ಷ ಜೈಲು

## ವಿಧಾನಸಭೆಯಲ್ಲಿ ಮಸೂದೆ ಮಂಡನೆ | ಪ್ರತಿಪಕ್ಷಗಳ ತೀವ್ರ ವಿರೋಧ

**ಬೆಳಗಾವಿ:** ರಾಜ್ಯದಲ್ಲಿ ದ್ವೇಷಭಾಷಣಗಳಿಗೆ ಕಡಿವಾಣ ಹಾಕಲು ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕವನ್ನು ರಾಜ್ಯ ಸರ್ಕಾರ ಬುಧವಾರ ವಿಧಾನಸಭೆಯಲ್ಲಿ ಮಂಡಿಸಿದೆ.

ಈ ಮಸೂದೆಯು ಒಂದು ಲಕ್ಷ ರೂ.ಗಳ ವರೆಗೆ ದಂಡ ಮತ್ತು ಗರಿಷ್ಠ 10 ವರ್ಷಗಳವರೆಗೆ ಜೈಲು ಶಿಕ್ಷೆಗೆ ಅವಕಾಶ ನೀಡುತ್ತದೆ. ಮಸೂದೆಯನ್ನು ಡಿಸೆಂಬರ್ 4ರಂದು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಅಂಗೀಕರಿಸಲಾಗಿತ್ತು. ಪ್ರಶ್ನೋತ್ತರ ಕಲಾಪದ ನಂತರ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು, ದ್ವೇಷ ಭಾಷಣ ಪ್ರತಿಬಂಧಕ ಮಸೂದೆ ಮಂಡಿಸಿದರು. ಇದಕ್ಕೆ ಬಿಜೆಪಿ ಸದಸ್ಯರು ತೀವ್ರ ವಿರೋಧ ವ್ಯಕ್ತಪಡಿಸಿದರು.

ದ್ವೇಷ ಭಾಷಣ ಪ್ರಸಾರ, ಪ್ರಕಟಣೆ, ಪ್ರಚಾರ ತಡೆಯುವ ವಿಧೇಯಕ ಇದಾಗಿದೆ. ಯಾವುದೇ ಪೂರ್ವಾಗ್ರಹ ಪೀಡಿತ ಹಿತಾಸಕ್ತಿಯನ್ನು ಪೂರೈಸಲು, ಜೀವಂತ ಅಥವಾ ಸತ್ತ ವ್ಯಕ್ತಿ, ಅಥವಾ ವ್ಯಕ್ತಿಗಳ ಗುಂಪಿನ ವಿರುದ್ಧ ದ್ವೇಷ ಅಥವಾ ದ್ವೇಷದ ಭಾವನೆಗಳನ್ನು ಉಂಟುಮಾಡುವ ಉದ್ದೇಶದಿಂದ ಮಾಡಿದ ಭಾಷಣ, ಪ್ರಕಟಿಸಿದ ಅಥವಾ ಪ್ರಸಾರ ಮಾಡಿದ ಯಾವುದೇ ಅಭಿವ್ಯಕ್ತಿಯನ್ನು ದ್ವೇಷ ಭಾಷಣ ಎಂದು ವರ್ಗೀಕರಿಸಲಾಗಿದೆ.

ಯಾವುದೇ ಧರ್ಮ, ಜನಾಂಗ, ಜಾತಿ ಅಥವಾ ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನ್ಮಸ್ಥಳ, ವಾಸಸ್ಥಳ, ಭಾಷೆ, ಅಂಗವೈಕಲ್ಯ ಅಥವಾ ಬುಡಕಟ್ಟು ಆಧಾರದ ಮೇಲೆ ಯಾವುದೇ ಪಕ್ಷಪಾತವನ್ನು ದ್ವೇಷ



ಭಾಷಣ ಎಂದು ವರ್ಗೀಕರಿಸಲಾಗಿದೆ.

ಮೊದಲ ಬಾರಿಗೆ ದ್ವೇಷ ಭಾಷಣ, ದ್ವೇಷ ಅಪರಾಧಗಳಿಗೆ ಕನಿಷ್ಠ 1 ವರ್ಷ ಮತ್ತು ಗರಿಷ್ಠ 7 ವರ್ಷದವರೆಗೆ ಜೈಲು ಹಾಗೂ 50 ಸಾವಿರ ರೂ ದಂಡ ವಿಧಿಸಲು ಅವಕಾಶ ನೀಡಲಾಗಿದೆ. ಅಪರಾಧ ಪುನರಾವರ್ತನೆ ಆದರೆ ಕನಿಷ್ಠ 2 ವರ್ಷದಿಂದ ಗರಿಷ್ಠ 10 ವರ್ಷದ ವರೆಗೆ ಜೈಲು ಶಿಕ್ಷೆ ಹಾಗೂ 1 ಲಕ್ಷ ರೂ ದಂಡ ವಿಧಿಸಬಹುದಾಗಿದೆ.

ದ್ವೇಷ ಭಾಷಣ ಮಾಡಿದವರು ವಿರುದ್ಧ ಕೇಸ್ ದಾಖಲಿಸಿದರೆ ಅದು ಜಾಮೀನು ರಹಿತ ಪ್ರಕರಣವಾಗಿದೆ. ಪ್ರಥಮ ದರ್ಜೆ ನ್ಯಾಯಿಕ ಮ್ಯಾಜಿಸ್ಟ್ರೇಟರ್ ಮೂಲಕ ದ್ವೇಷ ಭಾಷಣಗಳ ವಿಚಾರಣೆ ಮಾಡಬೇಕು. ದ್ವೇಷ ಭಾಷಣಗಳ ಪ್ರಕರಣಗಳನ್ನು ಕಾರ್ಯ ನಿರ್ವಾಹಕ ಮ್ಯಾಜಿಸ್ಟ್ರೇಟ್ ಅಥವಾ ಉಪ ಪೊಲೀಸ್ ವರಿಷ್ಠಾಧಿಕಾರಿ ದರ್ಜೆಗಿಂತ ಕಡಿಮೆ ಇಲ್ಲದ ಯಾರೇ ಪೊಲೀಸ್ ಅಧಿಕಾರಿ ಮಾಹಿತಿ ಸ್ವೀಕರಿಸಿದರೆ ವಿಚಾರಣೆ ಮಾಡಿ ಕಾಯ್ದೆಯಡಿ ಕ್ರಮ ಕೈಗೊಳ್ಳಲು ಅವಕಾಶ ನೀಡಲಾಗಿದೆ.

## ಉತ್ತರದ ಸಮಸ್ಯೆ: ಶ್ವೇತಪತ್ರ ಬಿಡುಗಡೆಗೆ ಬಿಜೆಪಿ ಆಗ್ರಹ

**ಬೆಳಗಾವಿ:** ರೈತರಿಗೆ ಕಾಂಗ್ರೆಸ್ ಸರ್ಕಾರ ಪರಿಹಾರ ನೀಡಿಲ್ಲ. ಮನೆ ಕಳೆದುಕೊಂಡವರಿಗೆ ಪರಿಹಾರ ನೀಡಿಲ್ಲ. ಉತ್ತರ ಕರ್ನಾಟಕದ ಯಾವ ಭರವಸೆಗಳನ್ನು ಸರ್ಕಾರ ಈಡೇರಿಸಿದೆ ಎಂದು ತಿಳಿಸಲು ಶ್ವೇತಪತ್ರ ಬಿಡುಗಡೆ ಮಾಡಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದರು.



ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಸದನದಲ್ಲಿ ಬುಧವಾರ ಮಾತನಾಡಿದ ಅವರು, ಪ್ರವಾಹದ ಸಂದರ್ಭದಲ್ಲಿ ಜನರು ಗಂಜಿ ಕೇಂದ್ರದಲ್ಲಿರುತ್ತಾರೆ. ಆಗ ಸರ್ಕಾರ ಕೂಡಲೇ ಪರಿಹಾರ ನೀಡಬೇಕು. ಸರ್ಕಾರ ಇಷ್ಟು ವಿಳಂಬ ಮಾಡಿ ಪರಿಹಾರ ನೀಡಬಾರದು ಎಂದರು.

ಕಲಬುರ್ಗಿ, ಬೀದರ್, ವಿಜಯಪುರ, ಯಾದಗಿರಿ ಮೊದಲಾದ ಜಿಲ್ಲೆಗಳಲ್ಲಿ ಅತಿವೃಷ್ಟಿ ಆದಾಗ ನಾವೆಲ್ಲರೂ ಕಾರಿನಲ್ಲಿ ಹೋಗಿ ಭೇಟಿ ಮಾಡಿದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ವೈಮಾನಿಕ ಸಮೀಕ್ಷೆ ಮಾಡಿದರು. ಅದರ ಬದಲು ಕಾರಿನಲ್ಲೇ

ಪುಟ 2ಕ್ಕೆ

## ನಾಲ್ಕು ಹುಲಿ ಮರಿಗಳು ಸಾವು



**ಮೈಸೂರು:** ಜಿಲ್ಲೆಯ ಹುಣಸೂರು ತಾಲೂಕಿನ ಗೌಡನಕಟ್ಟೆ ಬಳಿ ಸೆರೆಸಿಕ್ಕಿದ್ದ ನಾಲ್ಕು ಹುಲಿ ಮರಿಗಳು ಸಾವನ್ನಪ್ಪಿವೆ. ತಾಯಿ ಯಿಂದ ದೂರವಾಗಿ 2 ದಿನ ಆಹಾರವಿಲ್ಲದೇ ಬಳಲಿದ್ದ ಮರಿಗಳು ನಿತ್ರಾಣಗೊಂಡು ಸಾವನ್ನಪ್ಪಿವೆ ಎನ್ನಲಾಗಿದೆ.

ಸೆರೆ ಹಿಡಿದಿದ್ದ ಹುಲಿ ಮರಿಗಳನ್ನು ಕೂರ್ಗಳ್ಳಿ ಪುನರ್ವಸತಿ ಕೇಂದ್ರದಲ್ಲಿದ್ದಲ್ಲಿ ಇರಿಸಲಾಗಿತ್ತು. ನಾಲ್ಕು ದಿನಗಳ ಅಂತರದಲ್ಲಿ ಎಲ್ಲಾ 4 ಮರಿಗಳು ಸಾವಿಗೀಡಾಗಿವೆ. ಹುಲಿ ಮರಿಗಳ ಸಾವಿಗೆ ಕಾರಣ ತಿಳಿದು ಬಂದಿಲ್ಲ.

ಗೌಡನಕಟ್ಟೆಯ ಪ್ರಕಾಶ್ ಜೋಳದ ಹೊಲದಲ್ಲಿ ನ.28 ರಂದು ನಾಲ್ಕು ಮರಿಗಳೊಂದಿಗೆ ತಾಯಿ ಹುಲಿ ಕಾಣಿಸಿ ಕೊಂಡಿತ್ತು. ಮಧ್ಯರಾತ್ರಿ ತಾಯಿ ಹುಲಿ ಸೆರೆಯಾಗಿತ್ತು. ಎರಡು ದಿನಗಳ ನಂತರ ನ.30ರಂದು ನಾಲ್ಕು ಹುಲಿ ಮರಿಗಳು ಪತ್ತೆಯಾಗಿದ್ದವು. ಸೆರೆ ಹಿಡಿಯುವ ವೇಳೆ ಜನರ ಕಿರುಚಾಟದಿಂದ ಹುಲಿ ಮರಿಗಳು ಗಾಬರಿಯಾ ಗಿದ್ದವು. ಎರಡು ದಿನ ತಾಯಿಯಿಂದ ದೂರವಾಗಿದ್ದ ಮರಿ ಗಳು ಆಹಾರವಿಲ್ಲದೇ ಬಳಲಿದ್ದವು. ಜನರ

ಪುಟ 2ಕ್ಕೆ

## ಯೂನಿಟಿ ಮಾಲ್ ನಿರ್ಮಾಣಕ್ಕೆ ಕೋರ್ಟ್ ತಡೆ

**ಮೈಸೂರು:** ನಗರದ ವಸ್ತು ಪ್ರದರ್ಶನ ಆವರಣದಲ್ಲಿ ಕೇಂದ್ರ ಸರ್ಕಾರದ ದೇಶೀಯ ಕರಕುಶಲ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸುವ ಯೋಜನೆಯಡಿ ನಿರ್ಮಿಸಲು ಉದ್ದೇಶಿಸಿದ್ದ ಯೂನಿಟಿ ಮಾಲ್ ನಿರ್ಮಾಣ ಕಾರ್ಯಕ್ಕೆ ಕೋರ್ಟ್ ತಡೆಯಾಜ್ಞೆ ನೀಡಿದೆ.

ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಕಾಮಗಾರಿಗೆ ಗುದ್ದಲಿ ಪೂಜೆ ಮಾಡಿದ್ದರು. ಆದರೆ ಕಾಮಗಾರಿಗೆ ಅವರ ತಾಯಿ ಪ್ರಮೋದಾದೇವಿ ಒಡೆಯರ್ ತಡೆಯಾಜ್ಞೆ ತಂದಿದ್ದಾರೆ. ಈ ಮೂಲಕ ಮಗ ಮಾಡಿದ ಗುದ್ದಲಿ ಪೂಜೆಗೆ ಅಮ್ಮನೆ ತಡೆಯಾಜ್ಞೆ ತಂದಂತಾಗಿದೆ.


ಕರ್ನಾಟಕ ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದ ಸರ್ವೆ ನಂ.1ರ 6.5 ಎಕರೆ ಪ್ರದೇಶದಲ್ಲಿ ಯೂನಿಟಿ ಮಾಲ್ ನಿರ್ಮಾಣಕ್ಕೆ ಜು.27ರಂದು ಯದುವೀರ್ ಗುದ್ದಲಿ ಪೂಜೆ ನೇರವೇರಿಸಿದ್ದರು. ನ್ಯಾಯಾಲಯ ಈಗ ಈ ಜಾಗದಲ್ಲಿ ಯಾವುದೇ ನಿರ್ಮಾಣ ಕಾರ್ಯ ನಡೆಸದಂತೆ ಹಾಗೂ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಆದೇಶಿಸಿದೆ.

ಪಿಪಿಪಿ ಮಾದರಿಯಲ್ಲಿ ಒಟ್ಟು 193 ಕೋಟಿ ರೂ. ವೆಚ್ಚದಲ್ಲಿ ಯೂನಿಟಿ ಮಾಲ್ ನಿರ್ಮಾಣ ಕಾರ್ಯ ಆರಂಭವಾಗಿತ್ತು. ದೇಶದ ವಿವಿಧ ರಾಜ್ಯಗಳ ಒಟ್ಟು 36 ವಾಣಿಜ್ಯ ಮಳಿಗೆಗಳನ್ನ ಪ್ರಾರಂಭಿಸಿಲು ಉದ್ದೇಶಿಸಲಾಗಿತ್ತು. ಅತಿಥೇಯ ರಾಜ್ಯ ಕರ್ನಾಟಕದ ಪ್ರತಿ ಜಿಲ್ಲೆಗೂ ಒಂದು ಮಳಿಗೆ ಪ್ರಾರಂಭಿಸಲು ಅವಕಾಶ ಕಲ್ಪಿಸಲಾಗಿತ್ತು.

# ಮಧ್ಯವರ್ತಿಗಳ ಹಾವಳಿ ವಿರುದ್ಧ ಕ್ರಮ


## ಆರ್‌ಟಿಓ ಅಧಿಕಾರಿಗಳೇ ಹೊಣೆ: ರಾಮಲಿಂಗಾರೆಡ್ಡಿ ಎಚ್ಚರಿಕೆ

**ಬೆಳಗಾವಿ:** ರಾಜ್ಯದ ಆರ್‌ಟಿಓ ಕಚೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿಗೆ ಅವಕಾಶ ನೀಡಿದರೆ ಆಯಾ ಅಧಿಕಾರಿಗಳನ್ನೇ ಹೊಣೆಯಾಗಿಸಿ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ರಾಮಲಿಂಗಾರೆಡ್ಡಿ ಎಚ್ಚರಿಕೆ ನೀಡಿದರು.



ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯೆ ಉಮಾಶ್ರೀ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಆರ್‌ಟಿಓ ಕಚೇರಿಗಳಲ್ಲಿ ಶಿಸ್ತು ತರಲು ಅನೇಕ ಕ್ರಮವಹಿಸಲಾಗಿದೆ. ಕಚೇರಿಯಲ್ಲಿ ಸ್ವೀಕೃತವಾಗುವ ಎಲ್ಲಾ ಅರ್ಜಿ, ಸ್ವೀಕೃತಿಗಳನ್ನು ನಿಗದಿಪಡಿಸಿದ ನಮೂನೆಯಲ್ಲಿ ಕಡ್ಡಾಯವಾಗಿ ವಿಷಯ ನಿರ್ವಾಹಕರು ನಿರ್ವಹಿಸುದನ್ನು ಕಡ್ಡಾಯ ಮಾಡಲಾಗಿದೆ ಎಂದರು.

ಕಚೇರಿಗಳಲ್ಲಿ ಮಧ್ಯವರ್ತಿಗಳಿಗೆ ಯಾವುದೇ ರೀತಿಯ ಅವಕಾಶ ಕಲ್ಪಿಸದಂತೆ, ಒಂದು ವೇಳೆ ಯಾವುದೇ ಕಚೇರಿಯಲ್ಲಿ ಮಧ್ಯವರ್ತಿಗಳು ಕಂಡುಬಂದಲ್ಲಿ ಆಯಾ




ಕಚೇರಿಯ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಿ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಚ್ಚರಿಸಿದರು.

ಸಾರ್ವಜನಿಕರು ಮಧ್ಯವರ್ತಿಗಳನ್ನ ಸಂಪರ್ಕಿಸದೆ ನೇರವಾಗಿ ಕಚೇರಿಯ ಅಧಿಕಾರಿ, ಸಿಬ್ಬಂದಿಯನ್ನು ಭೇಟಿ ಮಾಡಿ ಅವರ ಕೆಲಸಗಳನ್ನು ಮಾಡಿಸಿಕೊಳ್ಳಬೇಕೆಂದು ಆರ್‌ಟಿಓ ಕಚೇರಿಗಳ ಆವರಣದಲ್ಲಿ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ ಎಂದರು.

ಪುಟ 2ಕ್ಕೆ

# ಶಾಸಕರಿಗೆ ಅಧಿಕಾರಿಗಳು ಸ್ಪಂದಿಸುತ್ತಿಲ್ಲ!

## ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ಸಿಎಂ ಮುಂದೆ ಅಸಮಾಧಾನ

**ಬೆಳಗಾವಿ:** ನಮಗೆ ಅಧಿಕಾರಿಗಳು ಸರಿಯಾಗಿ ಸ್ಪಂದಿಸುವುದಿಲ್ಲ ಎಂದು ಆಡಳಿತ ಪಕ್ಷದ ಹಲವು ಶಾಸಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಬಳಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.



ನಗರದ ಹೋಟೆಲ್‌ನಲ್ಲಿ ಮಂಗಳವಾರ ರಾತ್ರಿ ಕಾಂಗ್ರೆಸ್ ಶಾಸಕಾಂಗ ಸಭೆ ನಡೆಯಿತು. ಈ ವೇಳೆ ಸರ್ಕಾರದ ಆಡಳಿತ ಮತ್ತು ಅನುದಾನದ ವಿಚಾರದಲ್ಲಿ ಶಾಸಕರು ಅಳಲು ತೋಡಿಕೊಂಡಿದ್ದಾರೆ.

ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸದನದಲ್ಲಿ ವಿರೋಧ ಪಕ್ಷದವರಿಗೆ ಉತ್ತರ ಕೊಡದಿದ್ದರೆ ಜನರಿಗೆ ಸರ್ಕಾರದ ಬಗ್ಗೆ ತಪ್ಪು ಸಂದೇಶ ಹೋಗಲಿದೆ. ಕೇಂದ್ರ ಸರ್ಕಾರ ಮತ್ತು ಬಿಜೆಪಿ ಸರ್ಕಾರ ಇದ್ದಾಗ ಆಗಿರುವ ಲೋಪದೋಷಗಳನ್ನು ಎತ್ತಿತೋರಿಸಿ ಉತ್ತರ ನೀಡಬೇಕು ಎಂದು ಸಲಹೆ ನೀಡಿದರು.

ಅಧಿಕಾರಿಗಳು ಭ್ರಷ್ಟಾಚಾರ ನಡೆಸುತ್ತಿದ್ದಾರೆ. ಸ್ವೇಚ್ಛಾಚಾರದಿಂದ ಅಧಿಕಾರಿವರ್ಗ ವರ್ತಿಸುತ್ತಿದೆ. ಅಧಿಕಾರ ದುರುಪಯೋಗದ ಬಗ್ಗೆ ದೂರುಗಳು ಬಂದರೂ

ಪುಟ 2ಕ್ಕೆ

## ಗ್ಯಾರಂಟಿ ಬಗ್ಗೆ ಚರ್ಚೆ ಮಾಡಿಲ್ಲ

**ಬೆಳಗಾವಿ:** ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಶಾಸಕರು ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಬಗ್ಗೆ ಯಾವುದೇ ಚರ್ಚೆ ಮಾಡಿಲ್ಲ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಸಿಎಲ್ ಪಿ ಸಭೆಯಲ್ಲಿ ಚರ್ಚೆ ಮಾಡಿದ ವಿಷಯಗಳನ್ನೆಲ್ಲಾ ಹೊರಗೆ ಮಾಧ್ಯಮಗಳ ಮುಂದೆ ಹೇಳಲು ಸಾಧ್ಯವಿಲ್ಲ, ಸಿಎಂ ಬದಲಾವಣೆ, ಸಂಪುಟ ಪುನಾರಚನೆ ಏನೇ ಇದ್ದರೂ ಹೈಕಮಾಂಡ್ ಏನು ತೀರ್ಮಾನ ಮಾಡುತ್ತದೋ ಅದು ಆಗುತ್ತದೆ ಎಂದು ತಿಳಿಸಿದರು.

ಧರ್ಮಸ್ಥಳದಲ್ಲಿ ಪ್ರಕರಣದ ತನಿಖೆ ನಡೆಸಿದ ಎಸ್‌ಐಟಿ ವರದಿಯಲ್ಲಿ ಇದೊಂದು ಷಡ್ಯಂತ್ರ ಎಂದಿರುವ ಬಗ್ಗೆ ಕೇಳಿದಾಗ ನಾನು ಚಾರ್ಜ್ ಶೀಟ್ ನೋಡಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

## ಮುರುಘಾ ಶ್ರೀ ಖುಲಾಸೆ: ಹೈಕೋರ್ಟ್‌ಗೆ ಮೇಲ್ಮನವಿ

**ಬೆಂಗಳೂರು:** ಲೈಂಗಿಕ ದೌರ್ಜನ್ಯ ಆರೋಪದ ಪೋಕ್ಸೊ ಪ್ರಕರಣದಲ್ಲಿ ಶಿವಮೂರ್ತಿ ಮುರುಘಾ ಶರಣರು ಹಾಗೂ ಇನ್ನಿಬ್ಬರನ್ನು ಖುಲಾಸೆ ಗೊಳಿಸಿರುವ ಸೆಷನ್ಸ್ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸಂತ್ರಸ್ತ ಬಾಲಕಿಯರು ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ.

ಈ ಕ್ರಿಮಿನಲ್ ಮೇಲ್ಮನವಿಯನ್ನು ಇಬ್ಬರು ಸಂತ್ರಸ್ತ ಬಾಲಕಿಯರು ಬುಧವಾರ ಹೈಕೋರ್ಟ್‌ನಲ್ಲಿ ದಾಖಲು ಮಾಡಿದ್ದಾರೆ. ಅರ್ಜಿಯಲ್ಲಿ ಚಿತ್ರದುರ್ಗ ಗ್ರಾಮೀಣ ಪೊಲೀಸ್ ಠಾಣೆಯನ್ನು ಪ್ರತಿನಿಧಿಸುವ ರಾಜ್ಯ ಪ್ರಾಸಿಕ್ಯೂಷನ್, ಖುಲಾಸೆಗೊಂಡಿರುವ ಆರೋಪಿಗಳಾದ ಶಿವಮೂರ್ತಿ ಮುರುಘಾ ಶರಣರು, ಎಸ್.ರಶ್ಮಿ ಮತ್ತು ಎ.ಜೆ.ಪರಮಶಿವಯ್ಯ ಅವರನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ. ಅರ್ಜಿ ವಿಚಾರಣೆಗೆ ನಿಗದಿಯಾಗಬೇಕಿದೆ.

# ಬಜರಂಗದಳ ನಿಷೇಧಕ್ಕೆ ಸಿಎಂಗೆ ಹರಿಪ್ರಸಾದ್ ಆಗ್ರಹ

**ಬೆಳಗಾವಿ:** ಅನೇಕ ಅಪರಾಧ ಪ್ರಕರಣಗಳಲ್ಲಿ ಬಜರಂಗದಳ ಭಾಗಿಯಾಗಿದೆ. ಹೀಗಾಗಿ ಅದನ್ನು ರಾಜ್ಯದಲ್ಲಿ ನಿಷೇಧಿಸಬೇಕು ಎಂದು ಕಾಂಗ್ರೆಸ್ ಎಂಎಲ್ಸಿ ಬಿ.ಕೆ.ಹರಿಪ್ರಸಾದ್ ಆಗ್ರಹಿಸಿದರು.



ಮಾಧ್ಯಮಗಳ ಜೊತೆ ಬುಧವಾರ ಮಾತನಾಡಿದ ಅವರು, ಭಜರಂಗ ದಳ ನಿಷೇಧಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದೇನೆ. ಬಜರಂಗ ದಳ ನಿಷೇಧ ಸಹ ಕಾಂಗ್ರೆಸ್ ಚುನಾವಣಾ ಪ್ರಣಾಳಿಕೆ ಭಾಗವಾಗಿತ್ತು ಎಂದು ಹೇಳಿದರು.

ಕಾಂಗ್ರೆಸ್ ಕಾರ್ಯಕರ್ತ ಗಣೇಶ್ ಗೌಡ ಅವರನ್ನು ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಜರಂಗದಳ ಕಾರ್ಯಕರ್ತರೇ ಕೊಂದರು. ಬಜರಂ ಗದಳ ಕಾರ್ಯಕರ್ತರು ಹಲವಾರು ಕೊಲೆ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ಎಂದು ಹರಿಪ್ರಸಾದ್ ಆರೋಪಿಸಿದರು.

# ಸಭಾಪತಿ ವಿರುದ್ಧ ಭ್ರಷ್ಟಾಚಾರ ಆರೋಪ: ಕಾವೇರಿದ ಚರ್ಚೆ

**ಬೆಂಗಳೂರು:** ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ವಿರುದ್ಧ ಭ್ರಷ್ಟಾಚಾರ ಆರೋಪ ವಿಷಯ ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಪ್ರಸ್ತಾಪ ಆಯ್ತು.

ಪ್ರಶ್ನೋತ್ತರ ಅವಧಿ, ಶೂನ್ಯ ವೇಳೆ ಮುಗಿದ ಬಳಿಕ ಜೆಡಿಎಸ್ ಸದಸ್ಯ ಭೋಜೇಗೌಡ ವಿಷಯ ಪ್ರಸ್ತಾಪ ಮಾಡಿದರು. ಸಭಾಪತಿ ವಿರುದ್ಧ ನಾಗರಾಜ್ ಯಾದವ್ ಗಂಭೀರ ಆರೋಪ ಮಾಡಿದ್ದಾರೆ. ಅವರು ಮಾತಾಡಿರುವ ವಿಡಿಯೋ ಹರಿದಾಡುತ್ತಿವೆ. ಹೊರಟ್ಟಿ ಪೀಠದಲ್ಲಿ ಇರೋಕೆ ಅರ್ಹ ಇಲ್ಲ ಅಂತ ಮಾತಾಡಿದ್ದಾರೆ. ಸದನದಲ್ಲಿ ಈ ಬಗ್ಗೆ ಚರ್ಚೆ ಆಗಬೇಕು ಅಂತ ಒತ್ತಾಯ ಮಾಡಿದರು.



ಕಾಂಗ್ರೆಸ್ ಸದಸ್ಯ ಹರಿಪ್ರಸಾದ್ ಮಾತಾಡಿ, ಸ್ಪೀಕರ್ ಬಗ್ಗೆಯೂ ಮಾಜಿ ಸ್ಪೀಕರ್ ಒಬ್ಬರು ಆರೋಪ ಮಾಡಿದ್ದರು. ಸಭಾಪತಿ ಬಗ್ಗೆ ಮಾತಾಡೋದು ತಪ್ಪು ಎಂದರು. ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ

ಪುಟ 2ಕ್ಕೆ

# ದೀಪಾವಳಿಗೆ ಯುನೆಸ್ಕೋ ಗರಿ

**ನವದೆಹಲಿ:** ಭಾರತೀಯರ ಬೆಳಕಿನ ಹಬ್ಬ ದೀಪಾವಳಿಯನ್ನು ಯುನೆಸ್ಕೋದ ಸಾಂಸ್ಕೃತಿಕ ಪರಂಪರೆಯ ಪ್ರತಿನಿಧಿ ಪಟ್ಟಿಯಲ್ಲಿ ಸೇರಿಸಲಾಗಿದೆ.



ದೆಹಲಿಯ ಕೆಂಪು ಕೋಟೆಯಲ್ಲಿ ನಡೆದ ಯುನೆಸ್ಕೋ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ದೀಪಾವಳಿ ಹಬ್ಬವನ್ನು ಯುನೆಸ್ಕೋ ಹಬ್ಬಗಳ ಪಟ್ಟಿಯಲ್ಲಿ ಸೇರಿಸ ಲಾಗಿದೆ ಎಂದು ಘೋಷಿಸಿದಾಗ ನೆರೆದಿದ್ದ ಜನಸಮೂಹ ವಂದೇ ಮಾತರಂ ಮತ್ತು ಭಾರತ್ ಮಾತಾ ಕಿ ಜೈ ಘೋಷಣೆಗಳಲ್ಲಿ ಕೂಗಿದರು. ಪ್ರಸ್ತುತ ಕುಂಭಮೇಳ, ಕೋಲ್ಕತ್ತಾದ ದುರ್ಗಾ ಪೂಜೆ, ಗುಜರಾತ್‌ನ ಗರ್ಭ ನೃತ್ಯ, ಯೋಗ, ವೇದ ಪಠಣದ ಸಂಪ್ರದಾಯ ಸೇರಿದಂತೆ 15 ಆಚರಣೆಗಳು

ಪುಟ 2ಕ್ಕೆ

# ಧರ್ಮಸ್ಥಳ ವಿರುದ್ಧ 6 ಮಂದಿ ಪಿತೂರಿ

## ಕೋರ್ಟ್‌ಗೆ ಎಸ್‌ಐಟಿ ಸಲ್ಲಿಸಿರುವ ವರದಿಯಲ್ಲಿ ಷಡ್ಯಂತ್ರ ಬಹಿರಂಗ

**ಬೆಂಗಳೂರು:** ಧರ್ಮಸ್ಥಳದ ವಿರುದ್ಧ ಬುರುಡೆ ಗ್ಯಾಂಗ್ ನಡೆಸಿದ ಷಡ್ಯಂತ್ರ ನ್ಯಾಯಾಲಯಕ್ಕೆ ಎಸ್‌ಐಟಿ ಸಲ್ಲಿಸಿರುವ ಪ್ರಾಥಮಿಕ ತನಿಖೆಯಲ್ಲಿ ಸಾಬೀತಾಗಿದೆ. ವಿಶೇಷ ತನಿಖಾ ತಂಡದ (ಎಸ್‌ಐಟಿ) ತನಿಖಾ ವರದಿಯಲ್ಲಿ ಪಿತೂರಿ ಬಟಾಬಯಲಾಗಿದೆ.

ಧರ್ಮಸ್ಥಳ ಗ್ರಾಮದಲ್ಲಿ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಮೃತದೇಹಗಳನ್ನು ಹೂತು ಹಾಕಲಾಗಿದೆ ಎಂದು ಆರೋಪಿಸಲಾದ ಪ್ರಕರಣದ ತನಿಖೆ ನಡೆಸಿದ ಎಸ್‌ಐಟಿ ಬೆಳ್ತಂಗಡಿಯ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ತನಿಖಾ ಪ್ರಾಥಮಿಕ ವರದಿ ಸಲ್ಲಿಸಿದೆ. ಈ ತನಿಖಾ ವರದಿಯಲ್ಲಿ 6 ಮಂದಿ ಯಾವ ರೀತಿ ನ್ಯಾಯಾಲಯದ ದಾರಿ ತಪ್ಪಿಸಿದ್ದಾರೆ ಎಂಬುದನ್ನು ಎಸ್‌ಐಟಿ ಎಳೆ ಎಳೆಯಾಗಿ ಬಿಡಿಸಿಟ್ಟಿದೆ.

ಬುರುಡೆ ಚಿನ್ನಯ್ಯ, ಮಹೇಶ್ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ವಿಠ್ಠಲ ಗೌಡ, ಟಿ ಜಯಂತ್ ಹಾಗೂ ಸುಜಾತಾ ಭಟ್ ಅಪರಾಧ ಕೃತ್ಯದಲ್ಲಿ ಶಾಮೀಲಾಗಿದ್ದಾರೆ. ಪ್ರಕರಣದ ಮೊದಲ ಆರೋಪಿಯಾಗಿರುವ ದೂರುದಾರ ಚಿನ್ನಯ್ಯ ಆಮಿಷಕ್ಕೆ



ಒಳಗಾಗಿ ಸುಳ್ಳು ಹೇಳಿದ್ದಾನೆ. ಹಣವನ್ನು ಪಡೆದು ಚಿನ್ನಯ್ಯ ಬುರುಡೆ ಕಥೆ ಕಟ್ಟಿದ್ದ. ಅಪರಿಚಿತ ಶವ ಹೂತಿದ್ದೇನೆಂದು ಸುಳ್ಳು ಹೇಳಿಸಿ ಆರೋಪಿಗಳು ವಿಡಿಯೋ ರೆಕಾರ್ಡ್ ಮಾಡಿದ್ದರು ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ವಿಠಲ ಗೌಡನಿಗೆ ಚಿನ್ನಯ್ಯ ಮೊದಲಿನಿಂದಲೂ ಪರಿಚಯವಿದ್ದ. ಈ ಪರಿಚಯದ ಆಧಾರದ ಮೇಲೆ ಮಹೇಶ್ ತಿಮರೋಡಿ ಮನೆಗೆ ಚಿನ್ನಯ್ಯನನ್ನು ವಿಠ್ಠಲಗೌಡ ಕರೆದುಕೊಂಡು ಹೋಗಿ ಒಳಸಂಚು ನಡೆಸಲಾಗಿದೆ.

ಪುಟ 2ಕ್ಕೆ

# ಸಿದ್ದರಾಮಯ್ಯ ಸುತ್ತಲೇ ಸೂತ್ರಧಾರರು

## ಧರ್ಮಸ್ಥಳ ವಿರುದ್ಧ ಷಡ್ಯಂತ್ರ ಪ್ರಕರಣ: ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಾಗ್ದಾಳಿ

**ಬೆಳಗಾವಿ:** ಧರ್ಮಸ್ಥಳ ಪ್ರಕರಣದಲ್ಲಿ ಬುರುಡೆ ಗಾಂಗ್ ಷಡ್ಯಂತ್ರದ ಬಗ್ಗೆಎಸ್‌ಐಟಿ ಕೋರ್ಟ್ಗೆ ಪ್ರಾಥಮಿಕ ತನಿಖಾ ವರದಿ ಸಲ್ಲಿಸಿದೆ. ಈ ವರದಿಯಲ್ಲಿ ಆರು ಜನ ಷಡ್ಯಂತ್ರ ರೂಪಿಸಿದ್ದಾರೆ ಎಂದು ಉಲ್ಲೇಖಿಸಲಾಗಿದೆ. ಇವರು ಪಾತ್ರದಾರಿಗಳು. ಸೂತ್ರಧಾರಿಗಳು ಮುಖ್ಯಮಂತ್ರಿಗಳ ಸುತ್ತಲೇ ಇದ್ದಾರೆಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಆರೋಪಿಸಿದರು.

ಬೆಳಗಾವಿ ಸುವರ್ಣಸೌಧದ ಹೊರಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣದಲ್ಲಿ ಈ ಸರ್ಕಾರ ಜನರ ಭಾವನೆ ಜೊತೆ ಚೆಲ್ಲಾಟ ಆಡಿದೆ. ಹಾದಿ ಬೀದಿಯಲ್ಲಿ ಹೋಗುವವರ ಮಾತುಗಳನ್ನ ಕೇಳಿ ಎಸ್‌ಐಟಿ ರಚನೆ ಮಾಡಿದೆ. ಇದರಿಂದ ಕೋಟ್ಯಂತರ ಹಿಂದೂಗಳ ಭಾವನೆಗಳಿಗೆ ಧಕ್ಕೆಯಾಗಿದೆ. ಈ ಬುರುಡೆ ಗಾಂಗ್ ಶಾಮೀಲು ಎಂಬ ವರದಿ ಬಂದಿದೆ. ಪ್ರಕರಣದ ಸೂತ್ರಧಾರಿಗಳು ಸರ್ಕಾರ ಹಾಗೂ ಸಿಎಂ ಸಿದ್ದರಾಮಯ್ಯ ಸುತ್ತಲೂ ಇದ್ದಾರೆ ಎಂದು ವಾಗ್ದಾಳಿ ನಡೆಸಿದರು.



ಶಾಸಕ ಎಸ್.ಆರ್.ವಿಶ್ವನಾಥ್ ಮಾತನಾಡಿ, ಧರ್ಮಸ್ಥಳ ಪ್ರಕರಣದಲ್ಲಿ ಆರು ಜನ ಭಾಗಿಯಾಗಿದ್ದಾರೆ. ಆದರೆ ಕೇವಲ ಅವರಷ್ಟೇ ಅಲ್ಲ, ಕುಮ್ಮಕ್ಕು ಕೊಟ್ಟವರ ಹೆಸರು ಉಲ್ಲೇಖ ಮಾಡಿಲ್ಲ. ಅವರ ಬಗ್ಗೆಯೂ ತನಿಖೆ ಆಗಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು. ದೆಹಲಿಗೆ ಚಿನ್ನಯ್ಯನನ್ನ ಕರೆದುಕೊಂಡುಹೋಗಿ

ಪುಟ 2ಕ್ಕೆ

## ಧರ್ಮಸ್ಥಳದ ವಿರುದ್ಧ ಪಿತೂರಿ ಸತ್ಯ: ಡಿಕೆಶಿ

**ಬೆಳಗಾವಿ:** ಧರ್ಮಸ್ಥಳದ ವಿರುದ್ಧ ಪಿತೂರಿ ನಡೆಯುತ್ತಿದೆ. ಇಂತಹ ವಿವಾದಗಳು ಹಲವು ತಲೆಮಾರುಗಳಿಂದ ಉಳಿದುಕೊಂಡಿರುವ ಸಂಸ್ಥೆಗಳಿಗೆ ಹಾನಿ ಮಾಡಬಹುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದರು. ಬೆಳಗಾವಿಯಲ್ಲಿ ಬುಧವಾರ ಮಾತನಾಡಿದ ಅವರು, ಧರ್ಮಸ್ಥಳದ ವಿರುದ್ಧ ಪಿತೂರಿ ನಡೆಯುತ್ತಿದೆ ಎಂದು ಈ ಹಿಂದೆ ವಿಧಾನಸಭೆಯಲ್ಲಿ ಬಹಿರಂಗವಾಗಿ ಹೇಳಿದ್ದೇನೆ. ಸತ್ಯ ಮೇಲುಗೈ ಸಾಧಿಸಿದೆ. ಕಾನೂನು ತನ್ನದೇ ಆದ ಹಾದಿಯನ್ನು ಹಿಡಿಯಬೇಕು ಎಂದು ತಿಳಿಸಿದರು.

# ಮಹಿಳಾ ಪರ ಕಾನೂನು ಜಾರಿಗೆ ಆಗ್ರಹ

ಮೈಸೂರು: ನ್ಯಾ.ವರ್ಮಾ ಆಯೋಗ ಮತ್ತು ರಾಜ್ಯದ ಉಗ್ರಪ್ಪ ಸಮಿತಿ ಶಿಫಾರಸ್ಸುಗಳನ್ನು ಜಾರಿ ಮಾಡಬೇಕು. ಮಹಿಳಾಪರ ಕಾನೂನುಗಳು ಸಮರ್ಪಕವಾಗಿ ಜಾರಿಯಾಗಬೇಕೆಂಬುದು ಸೇರಿ ತಮ್ಮ ಹಲವು ಬೇಡಿಕೆ ಈಡೇರಿಸುವಂತೆ ಜನವಾದಿ ಮಹಿಳಾ ಸಂಘಟನೆ ಜಿಲ್ಲಾ ಸಂಘಟನಾ ಸಮಿತಿವತಿಯಿಂದ ಪ್ರತಿಭಟಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟಿಸಿದ ಅವರು, "ಮಹಿಳಾ ಹಕ್ಕುಗಳು ಹಾಗೂ ಮಾನವ ಹಕ್ಕುಗಳು" ಎಂಬ ಘೋಷಣೆಯೊಂದಿಗೆ ಧರ್ಮಸ್ಥಳದಲ್ಲಿ ನಡೆಸಿರುವ ಅತ್ಯಚಾರ ,ಕೊಲೆ ಅಸಹಜ ಸಾವುಗಳಿಗೆ ಎಸ್ ಐಟಿ ಮೂಲಕ ಸಮಗ್ರ ತನಿಖೆಗೆ ಒತ್ತಾಯಿಸಿದರು. ರಾಜ್ಯದಲ್ಲಿ ಹೆಚ್ಚುತ್ತಿರುವ ಕೌಟುಂಬಿಕೆ ಹಿಂಸೆ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಿರುಕುಳ ತಡೆಗಟ್ಟಲು, ಮನೆ, ನೀವೇಶನ, ಹಕ್ಕುಪತ್ರಕ್ಕೆ ಆಗ್ರಹಿಸಿದರು.

ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಹಾಗೂ ಇತರೆ ಸಂಸ್ಥೆಗಳ ಮೇಲೆ ನೂರಾರು ದೂರು ದಾಖಲಾಗಿದ್ದು ಅವುಗಳ ಮೇಲೆ ಶೀಘ್ರ ಕ್ರಮ ಜರುಗಿಸಬೇಕು. ಸ್ವ ಸಹಾಯ ಗುಂಪುಗಳಿಗೆ ಶೇ.4 ಬಡ್ಡಿ ದರದಲ್ಲಿ ಬ್ಯಾಂಕ್ ಸಾಲ ನೀಡಬೇಕು ಹಾಗೂ ಬಡ ಕೂಲಿಕಾರ ರೈತ ಮಹಿಳೆಯರಿಗೆ ರಾಷ್ಟ್ರೀಕೃತ



ಬ್ಯಾಂಕುಗಳಲ್ಲಿ ಜಾಮೀನು ರಹಿತವಾಗಿ ಕನಿಷ್ಠ ಎರಡು ಲಕ್ಷ ಸಾಲವನ್ನು ಮಂಜೂರು ಮಾಡಬೇಕು.

ಗ್ರಾಮ ಪಂಚಾಯಿತಿ ಮಟ್ಟದ ಸಂಜೀವಿನಿ ಒಕ್ಕೂಟಕ್ಕೆ ಒಂದು ಕೋಟಿ ಹಣ ಬಿಡುಗಡೆ ಮಾಡಬೇಕು ಹಾಗೂ ಗುಂಪುಗಳಿಗೆ ಕಚ್ಚಾ ವಸ್ತುಗಳನ್ನು ನೀಡಿ ತರಬೇತಿ ನೀಡಿ ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ವ್ಯವಸ್ಥೆ ಒದಗಿಸಬೇಕು. ಉದ್ಯೋಗ ಖಾತ್ರಿ ಯೋಜನೆಯಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಂದು ಶೆಡ್ ನಿರ್ಮಾಣ ಮಾಡಿ ಒಕ್ಕೂಟದ ಚಟುವಟಿಕೆ ಆರಂಭಿಸಬೇಕೆಂದರು.

ನಿವೇಶನ ರಹಿತರಿಗೆ ನಿವೇಶನ ನೀಡಿ ವಸತಿ ನಿರ್ಮಿಸಿಕೊಳ್ಳಲು ಕನಿಷ್ಠ ಐದು ಲಕ್ಷ ರೂ. ಅನುದಾನ ನೀಡಬೇಕು. ಉದ್ಯೋಗ ಖಾತ್ರಿ ಯೋಜನೆಯಡಿ ದಿನಗೂಲಿಯನ್ನು 600 ರೂ.ಗಳಿಗೆ ಹೆಚ್ಚಿಸಬೇಕು ಹಾಗೂ ವರ್ಷಕ್ಕೆ ಕನಿಷ್ಠ 200 ದಿನಗಳಿಗೆ ಕೆಲಸ ಹೆಚ್ಚಳ ಮಾಡಬೇಕೆಂಬುದು ಸೇರಿ ಹಲವು ಬೇಡಿಕೆ ಈಡೇರಿಸಬೇಕೆಂದು ಕೋರಿದರು. ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕ ಶಾಕುಂತಲ, ಮುಖಂಡರಾದ ಪಿ.ಆರ್.ರಂಜಿತ್, ಶಿವಮ್ಮ, ಸಾವಿತ್ರಿ, ಲಕ್ಷ್ಮಿ, ರಾಜಮ್ಮ, ರತ್ನಮ್ಮ ಮತ್ತು ರೂಪ ಭಾಗವಹಿಸಿದ್ದರು.

# ಖಾತೆ ನೀಡಲು ಅಲೆದಾಡಿಸಬೇಡಿ

ಮೈಸೂರು: ಖಾತೆ ನೀಡಲು ಸಾರ್ವಜನಿಕರಿಗೆ ಅಲೆದಾಡಿಸದೇ ಕಾನೂನಿನಡಿಯಲ್ಲಿ ಖಾತೆ ಮಾಡಿಕೊಡಿ ಇಲ್ಲವಾದಲ್ಲಿ ಅರ್ಜಿ ಸ್ವೀಕೃತಿ ಪತ್ರ ನೀಡಿ ಎಂದು ಲೋಕಾಯುಕ್ತ ಡಿವೈಎಸ್ಪಿ ಎಚ್.ಎಂ.ಶೈಲೇಂದ್ರ ಅಧಿಕಾರಿಗಳಿಗೆ ಸೂಚಿಸಿದರು.

ಮೈಸೂರಿನ ಮಿನಿ ವಿಧಾನ ಸೌಧದಲ್ಲಿ ಆಯೋಜಿಸಿದ್ದ ಲೋಕಾಯುಕ್ತ ಅರ್ಜಿ ಸ್ವೀಕಾರ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬೆಳಿಗ್ಗೆ 11ಕ್ಕೆ ಆರಂಭಗೊಂಡ ಅರ್ಜಿ ಸ್ವೀಕಾರದಲ್ಲಿ 15ಕ್ಕೂ ಹೆಚ್ಚು ಅರ್ಜಿಗಳು ಬಂದಿದ್ದವು. ಈ ಪೈಕಿ ಬಹುತೇಕ ಅರ್ಜಿಗಳು ಇ ಖಾತೆಗೆ ಸಂಬಂಧಿಸಿದಂತೆ ಬಂದಿದ್ದವು. ಈ ಹಿನ್ನೆಲೆಯಲ್ಲಿ ಮಾತನಾಡಿದ ಅವರು, ಇ ಖಾತೆಗೆ ಅರ್ಜಿ ಸಲ್ಲಿಸಿದ 45 ದಿನಗಳಲ್ಲಿ ದೂರು ದಾರರ ಅರ್ಜಿ ವಿಲೇವಾರಿ ಮಾಡಬೇಕು. ಇದರಲ್ಲಿ ಬಹುತೇಕ ವಿಳಂಬ ಆಗುತ್ತಿದೆ. ಇದರಿಂದಾಗ ಜನರ ಅಲೆದಾಟ ಹೆಚ್ಚಿದೆ. ಎಲ್ಲೆಡೆ ಇ ಖಾತೆ ಅಭಿಯಾನ ಆರಂಭವಾಗಿದ್ದು ಎಲ್ಲೆಡೆ ಮಾಲೀಕತ್ವದ ಬಹುಭಾಗವಾಗಿ ಇ ಖಾತೆ ಖಾತರಿ ಆಗಿದೆ. ಈ ಹಿನ್ನೆಲೆಯಲ್ಲಿ ಜನರಿಗೆ ಅನಿವಾರ್ಯವಾಗಿರುವ ಇ ಖಾತೆ ಮಾಡಿಕೊಡಲು ಅಲೆದಾಡಿಸದಂತೆ ಎಚ್ಚರಿಕೆ ನೀಡಿದರು.

ಕಾನೂನಿನಡಿ ಇ ಖಾತೆ ನೀಡಲು ಪೂರಕ ದಾಖಲೆ




ಕೇಳಿ ಪಡೆಯಿರಿ, ಪೂರಕ ದಾಖಲೆ ಇಲ್ಲದಿದ್ದರೆ ಅರ್ಜಿ ಸ್ವೀಕರಿಸಿದ ರಶೀತಿ ನೀಡಿ ಅರ್ಜಿದಾರರಿಗೆ ಪೂರಕ ದಾಖಲೆ ನೀಡಲು ಸಲಹೆ ನೀಡಿ ಎಂದರು.

ಉಳಿದಂತೆ ನೀರಿನ ಕಂದಾಯ ಸಮಸ್ಯೆ, ಅಕ್ರಮ ವಿದ್ಯುತ್ ಸಂಪರ್ಕ, ಭೂ ವ್ಯಾಜ್ಯ ಸಮಸ್ಯೆಗಳ ದೂರು ಕೇಳಿ ಬಂದಿತು. ಎಚ್.ಡಿ.ಕೋಟೆ ಅಂತರ ಸಂತೆಯ ಪಿಡಿಒ ಕಾಮಗಾರಿ ಬಿಲ್ ಸಂಬಂಧ ಸತಾಯಿಸುತ್ತಿರುವ ಬಗ್ಗೆಯೂ ಗುತ್ತಿಗೆದಾರರೊಬ್ಬರೂ ದೂರು ನೀಡಿದರು. ಎಲ್ಲಕ್ಕೂ ಕಾನೂನಿನ ಚೌಕಟ್ಟಿನಡಿ ಬಗೆಹರಿಸುವಂತೆ ಹೇಳಿದರು. ಸಭೆ ಬಳಿಕ ತಹಸೀಲ್ದಾರ್ ಮಹೇಶ್ ಮಾತನಾಡಿ, ಸರ್ಕಾರಿ ಅಧಿಕಾರಿಗಳಾಗಿ ನಾವೆಲ್ಲರೂ ಸಾರ್ವಜನಿಕರ ಮನವಿಗೆ ಸ್ಪಂದಿಸಿದಾಗ ಇಲ್ಲಿಯವರೆಗೆ ದೂರು ಕೊಡುವ ಪ್ರಮೇಯವೇ ಬರುವುದಿಲ್ಲ. ಎಂದು ಹೇಳಿದರು. ತಾಪಂ ಇಒ ಕೃಷ್ಣ ಉಪಸ್ಥಿತರಿದ್ದರು.

## ಡಿ.12ರಿಂದ ಇಂಗ್ಲೀಷ್ ಥಿಯೇಟರ್ ಉತ್ಸವ

ಮೈಸೂರು: ಮೈಸೂರು ಇಂಗ್ಲಿಷ್ ಥಿಯೇಟರ್ ಫೋರಂ ವತಿಯಿಂದ ಡಿ.12 ರಿಂದ 14 ರವರೆಗೆ ವಿಜಯನಗರದಲ್ಲಿರುವ ಜಗನ್ನಾಥ ಕಲಾ ಮತ್ತು ಸಂಸ್ಕೃತಿ ಕೇಂದ್ರದಲ್ಲಿ ಮೈಸೂರು ಇಂಗ್ಲಿಷ್ ಥಿಯೇಟರ್ ಉತ್ಸವ ಆಯೋಜಿಲಾಗಿದೆ ಎಂದು ಸದಸ್ಯ ಶಶಿಧರ ಡೋಂಗ್ರೆ ತಿಳಿಸಿದರು.




ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನಲ್ಲಿ ಕನ್ನಡದ ನಾಟಕಗಳು ವಿವಿಧ ರಂಗೋತ್ಸವಗಳ ಮೂಲಕ ವಿಜೃಂಭಣೆಯಿಂದ ನಡೆಯುತ್ತಿವೆ. ಅದರಂತೆ ಇಂಗ್ಲೀಷ್ ನಾಟಕಗಳಿಗೆ ಒಂದು ಬಳಗವು ಮೈಸೂರಿನಲ್ಲಿದೆ. ಈ ಹಿನ್ನೆಲೆಯಲ್ಲಿ ಮೊದಲ ಬಾರಿಗೆ ಮೈಸೂರು ಇಂಗ್ಲಿಷ್ ಥಿಯೇಟರ್ ಫೋರಂ ವತಿಯಿಂದ ಮೊದಲ ಆವೃತ್ತಿಯ ಉತ್ಸವವನ್ನು ಏರ್ಪಡಿಸಿದ್ದು, ಮೂರು ದಿನ ನಾಟಕೋತ್ಸವದಲ್ಲಿ ಇಂಗ್ಲೀಷ್ ರಂಗಭೂಮಿ ಪಠ್ಯದ ವಾಚನ, ನಾಟಕ ಪ್ರದರ್ಶನವಿರಲಿದೆ ಎಂದರು.

ಡಿ.12ರಂದು ಸಂಜೆ 6 ಗಂಟೆಗೆ ಇಂಗ್ಲಿಷ್ ಥಿಯೇಟರ್ ಉತ್ಸವಕ್ಕೆ ಕಲ್ಪಕ್ಷೇತ್ರ ಹೆರಿಟೇಜ್ ಟ್ರಸ್ಟ್‌ನ ಡಾ.ವಿ.ಆರ್.ಅನಿಲ್‌ಕುಮಾರ್, ಹಿರಿಯ ರಂಗಕರ್ಮಿ ಶ್ರೀಮತಿ ಹರಿಪ್ರಸಾದ್ ಚಾಲನೆ ನೀಡಲಿದ್ದಾರೆ. ನಂತರ 6.30ಕ್ಕೆ ಕಲಾ ಸುರುಚಿ ತಂಡದಿಂದ ಟು ಫಾದರ್ ನಾಟಕ ಪ್ರದರ್ಶನವಾಗಲಿದೆ. ಡಿ.13ರಂದು ಸಂಜೆ 6.30ಕ್ಕೆ ವೀಮೂವ್ ಥಿಯೇಟರ್ ತಂಡದಿಂದ ಹೂ ಕಿಲ್ಡ್ ಅಗಥಾ ನಾಟಕ ಪ್ರದರ್ಶನ ಮತ್ತು ಡಿ.14ರಂದು ಸಂಜೆ 6.30ಕ್ಕೆ ದಿ ಆಕ್ಟರ್ಸ್ ಕಲೆಕ್ಟಿವ್ ತಂಡದಿಂದ ದಿ ಮಹಾಭಾರತ ಪ್ರಾಜೆಕ್ಟ್ ನಾಟಕ ಪ್ರಸ್ತುತ ಪಡಿಸಲಿದ್ದಾರೆ ಎಂದು ತಿಳಿಸಿದರು. ಪ್ರತಿದಿನ ಸಂಜೆ 5 ಗಂಟೆಯಿಂದ 6ರವರೆಗೆ ಇಂಗ್ಲೀಷ್ ರಂಗಭೂಮಿ ಪಠ್ಯದ ವಾಚನ ಕಾರ್ಯಕ್ರಮ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ 9108290415 ಸಂಪರ್ಕಿಸಿ ಎಂದರು. ಸುದ್ದಿಗೋಷ್ಠಿಯಲ್ಲಿ ಸೀಮಂತಿನಿ ಶರ್ಮ, ನೀಮಾ ಮಂಜ್ರೇಕರ್ ಉಪಸ್ಥಿತರಿದ್ದರು.

# ಗ್ರಾಮದಲ್ಲೂ ಈ–ಪೌತಿ ಆಂದೋಲನ ನಡೆಸಿ: ಡಾ.ಪಿ.ಶಿವರಾಜು ಸೂಚನೆ

ಮೈಸೂರು: ಈ–ಪೌತಿ ಆಂದೋಲನವನ್ನು ಕಡ್ಡಾಯವಾಗಿ ತಾಲೂಕು ಮತ್ತು ಗ್ರಾಮ ಪಂಚಾಯಿತಿ ಹಾಗೂ ಗ್ರಾಮಮಟ್ಟದಲ್ಲಿ ಅದಾಲತ್ ನಡೆಸಿ ಪ್ರತಿದಿನವೂ ಪ್ರಗತಿ ಸಾಧಿಸುವಂತೆ ಅಪರ ಜಿಲ್ಲಾಧಿಕಾರಿ ಡಾ:ಪಿ ಶಿವರಾಜು ಸೂಚನೆ ನೀಡಿದರು.

ಅವರು. ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಕಂದಾಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು ಜಿಲ್ಲೆಯ ಎಲ್ಲಾ ತಹಶೀಲ್ದಾರ ಹಾಗೂ ಉಪವಿಭಾಗಾಧಿಕಾರಿಗಳಿಗೆ ಸೂಚನೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸರ್ಕಾರದ ಮಹಾತ್ವಕಾಂಕ್ಷಿ ಯೋಜನೆಯಾದ ಹಾಗೂ ರೈತರಿಗೆ ಅನುಕೂಲಕರವಾದ ಈ ಪೌತಿ– ಆಂದೋಲನವನ್ನು ಇನ್ನುಮುಂದೆ ಕಡ್ಡಾಯವಾಗಿ ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳು ಪ್ರತಿ ಗ್ರಾಮಗಳಿಗೂ ಭೇಟಿ ನೀಡಿ ಅರ್ಜಿಗಳನ್ನು ಪಡೆದು ರೈತರ ಮನವೊಲಿಸಿ ಪೌತಿ ಖಾತೆಯನ್ನು ನಿಯಮಾನುಸಾರ ಮಾಡಿಕೊಡುವಂತೆ ತಿಳಿಸಿದರು.

ಈ ತಿಂಗಳು ಪ್ರತಿ ದಿನವೂ ಸಹ ಗ್ರಾಮಮಟ್ಟದಲ್ಲಿ ನಿಯಮಿತವಾಗಿ ಅದಾಲತ್ ಗಳನ್ನು ನಡೆಸಿ ಕಡ್ಡಾಯವಾಗಿ ಪ್ರತಿ ಗ್ರಾಮ ಆಡಳಿತಾಧಿಕಾರಿಗಳು ಕನಿಷ್ಠ ನೂರು ಈ–ಪೌತಿ ಮಾಡಿ ಕೊಡುವಂತೆ ರೈತರಿಗೆ ಅನುಕೂಲ ಮಾಡಿಕೊಡುವಂತೆ ತಿಳಿಸಿದರು.

ಮರಣ ಹೊಂದಿರುವ ರೈತರ ಹೆಸರಿನಲ್ಲಿಯೇ ಇರುವ ಪಹಣಿಗಳಲ್ಲಿ ಪೌತಿಖಾತೆಯನ್ನು ನಿರ್ವಹಿಸಿ ಅವರ ಕುಟುಂಬದವರ ಹೆಸರಿನಲ್ಲಿ ಜಂಟಿ ಖಾತೆ ಇಡುವ ಮೂಲಕ ಜೀವಂತವಿರುವ ಉತ್ತರಾಧಿಕಾರಿಗಳ ಹೆಸರನ್ನು ಪಹಣಿಗಳಲ್ಲಿ ನಮೂದಿಸಿ ಕಾಲೋಚಿತಗೊಳಿಸುವ ಸದರಿ ಯೋಜನೆಯು ರೈತರಿಗೆ ಅನುಕೂಲಕರವಾದ ಯೋಜನೆಯಾಗಿರುತ್ತದೆ. ಈ ಹಿಂದೆ ಆಧಾರ್ ಸೀಡಿಂಗ್ ಮಾಡುವ ವೇಳೆ ಗ್ರಾಮಆಡಳಿತ ಅಧಿಕಾರಿಗಳು ಗುರುತಿಸಿರುವ ಮರಣ ಹೊಂದಿರುವ ಭೂಮಾಲೀಕರ ಪಹಣಿಗಳನ್ನು ಕಾಲೋಚಿತಗೊಳಿಸುವ ಬಗ್ಗೆ ಸದರಿ ಅದಾಲತ್ ಗಳು ಸಹಕಾರಿಯಾಗುತ್ತವೆ ಆದ್ದರಿಂದ ಕಡ್ಡಾಯವಾಗಿ ಪ್ರತಿದಿನ ರೈತರ ಬಳಿಗೆ ಹೋಗಿ, ಗ್ರಾಮ ಮಟ್ಟದಲ್ಲಿ ಅದಾಲತ್ ನಡೆಸುವಂತೆ ನಿರ್ದೇಶನ ನೀಡಿದರು.



# ಅಲೆಮಾರಿ ಸಮುದಾಯಕ್ಕೆ ಶೇ.2 ಮೀಸಲಿಗೆ ಆಗ್ರಹ



ಮೈಸೂರು: ಪರಿಶಿಷ್ಟರ ಒಳಮೀತಿಯನ್ನು ಕೂಡಲೇ ಜಾರಿ ಮಾಡುವಂತೆ ಹಾಗೂ ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕವಾಗಿ ಶೇ.2ರಂತೆ ಒಳ ಮೀಸಲಾತಿ ನೀಡುವಂತೆ ಒತ್ತಾಯಿಸಿ,ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊಫ಼ಿ.ಬಿ.ಕೃಷ್ಣಪ್ಪ ಸ್ಥಾಪಿತ) ಜಿಲ್ಲಾ ಶಾಖೆ ಹಾಗೂ ಅಲೆಮಾರಿ ಸಮುದಾಯದಿಂದ ಪುರಭವನದ ಆವರಣದಲ್ಲಿ ರುವ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಮುಂಭಾಗ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಪರಿಶಿಷ್ಟ ಉಪಜಾತಿಗಳಿಗೆ ಒಳ ಮೀಸಲಾತಿಯನ್ನು ಕೊಡಬೇಕೆಂದು ನಿರಂತರ ಹೋರಾಟ ಮಾಡಿದ ಪರಿಣಾಮ, ರಾಜ್ಯ ಸರಕಾರ ನ್ಯಾಫ಼ಿ. ನಾಗಮೋಹನ್‌ದಾಸ್ ಅವರ ಅಯೋಗ ರಚನೆ ಮಾಡಿ, ವರದಿ ಆಧಾರದ ಮೇಲೆ ಒಳಮೀಸಲಾತಿಯನ್ನು ಜಾರಿಗೆ ತರುವಾಗ ಸೂಕ್ಷ್ಮ ಸಮಸ್ಯೆಗಳನ್ನು ಪರಿಗಣಿಸಬೇಕಿತ್ತುಫ಼ಿ ಎಂದು ಆಗ್ರಹಿಸಿದರು.

ಪರಿಶಿಷ್ಟ ಅಲೆಮಾರಿ ಸಮುದಾಯಗಳಾದ ಸಿಳ್ಳೆಕ್ಯಾತ, ಕೋಲೆಬಸವ, ಹಂದಿಜೋಗಿ, ದೊಂಬರ, ಸುಡುಗಾಡು ಸಿದ್ಧ, ಚನ್ನದಾಸ, ಕೊರಮ, ಕೊರಚ ಮುಂತಾದ ನಿರ್ಗತಿಕ ಅಲೆಮಾರಿ ಸಮುದಾಯಗಳನ್ನು ಪ್ರತ್ಯೇಕವಾಗಿ ಗುಂಪು ಮಾಡಿ ಶೇ. 2% ರಷ್ಟಾದರೂ ಮೀಸಲಾತಿಯನ್ನು ಕೊಡಬೇಕಾಗಿತ್ತು.

ಈ ಅಲೆಮಾರಿ ಸಮುದಾಯಗಳು ಹುಟ್ಟು ಸಾವುಗಳಿಗೆ ದಾಖಲೆಗಳೇ ಇಲ್ಲದೆ ಮರದ ಕೆಳಗೆ, ಪಾಳುಮಂಪಟಗಳಲ್ಲಿ ನೆಲೆಗಳೇ ಇಲ್ಲದೆ ಬೀದಿಯಲ್ಲಿ ಬದುಕನ್ನು ದೂಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಅಲೆಮಾರಿ ಸಮುದಾಯಗಳು ಕನಿಷ್ಟ ವಿದ್ಯಾಭ್ಯಾಸವನ್ನು ಮಾಡಿಲ್ಲ. ಸರಕಾರದ ಕನಿಷ್ಠ ಸೌಲಭ್ಯಗಳನ್ನು ಇಂದಿಗೂ ಪಡೆಯಲಾಗುತ್ತಿಲ್ಲ. ಇವರ ಹಕ್ಕು ಬಾಧ್ಯತೆಗಳ ಬಗ್ಗೆನೆ ಇವರಿಗೆ ಅರಿವಿಲ್ಲ. ಪ್ರಾಣಿ ಪಕ್ಷಿಗಳ ರೀತಿ ಬದುಕನ್ನು ದೂಡುತ್ತಿದ್ದಾರೆ. ಇಂತಹ ದಿಕ್ಕು ದನಿಯಿಲ್ಲದ ಅಲೆಮಾರಿ ಸಮುದಾಯಗಳು ಇತರೆ ಸಮುದಾಯಗಳ ಜೊತೆ ಸರಕಾದಿಂದ ಸವಲತ್ತುಗಳನ್ನು ಪಡೆಯುವಾಗ ಪೈಪೋಟಿ ಕೊಡಲು ಸಾಧ್ಯವಾಗುವುದಿಲ್ಲ.ಆದ್ದರಿಂದ, ಈ ಸಮುದಾಯಕ್ಕೆ ಪ್ರತ್ಯೇಕವಾಗಿ ಒಳ ಮೀಸಲಾತಿ ನೀಡಬೇಕು ಎಂದು ಒತ್ತಾಯಿಸಿದರು. ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ಹೊಂದಿರುವ ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಡಾ.ಎಚ್.ಸಿ .ಮಹದೇವಪ್ಪ ಅವರು, ಅಲೆಮಾರಿ ಸಮುದಾಯಕ್ಕೆ ಶೇ.2 ರಷ್ಟು ಒಳ ಮೀಸಲಾತಿ ನೀಡುವಂತೆ ಹಾಗೂ ಪರಿಶಿಷ್ಟ ಜಾತಿಗೆ ಒಳ ಮೀಸಲಾತಿ ಅನುಷ್ಠಾನ ಮಾಡಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ದಸಂಸ ರಾಜ್ಯ ಸಂಚಾಲಕರಾದ ನಿಂಗರಾಜ್ ಮಲ್ಲಾಡಿ, ಕೆ.ನಂಜಪ್ಪಫ಼ಿ, ಜಿಲ್ಲಾ ಸಂಚಾಲಕ ಎಚ್.ಬಿ.ದಿವಾಕರ್, ಪೈಲ್ವಾನ್ ಕೃಷ್ಣಫ಼ಿ, ಮುಖಂಡರಾದ ಕುಮಾರ, ಮಲ್ಲಿಕಾ, ಪ್ರಶಾಂತ್ ಮಲಿಯೂರು, ಗಣೇಶ್, ಆರ್.ಬನ್ನಾರಿ ಮತ್ತಿತರರು ಪಾಲ್ಗೊಂಡಿದ್ದರು.

## ಮೊದಲ ಪುಟದಿಂದ

### ಶಾಸಕರಿಗೆ ಅಧಿಕಾರಿಗಳು ಸ್ಪಂದಿಸುತ್ತಿಲ್ಲ!

ಯಾವುದೇ ಕ್ರಮ ಆಗುತ್ತಿಲ್ಲ. ಯಾರೊಬ್ಬರಿಗೂ ನೋಟಿಸ್ ನೀಡುವ ಕೆಲಸ ಆಗುತ್ತಿಲ್ಲ. ಆರೋಪಗಳು ತನಿಖೆಯಲ್ಲಿ ಸಾಬೀತಾದರೂ ಕ್ರಮ ಆಗದೇ ಇರುವುದರಿಂದ ಅಧಿಕಾರಿಗಳಲ್ಲಿ ಯಾವುದೇ ಭಯ ಇಲ್ಲದಂತಾಗಿದೆ. ಇದಕ್ಕೆ ಕಡಿವಾಣ ಹಾಕಬೇಕಾಗಿದೆ. ಇಲ್ಲವಾದರೆ ಸರ್ಕಾರಕ್ಕೆ ಕೆಟ್ಟ ಹೆಸರು ಬರಲಿದೆ ಎಂದು ವಿಧಾನ ಪರಿಷತ್ ಸದಸ್ಯ ಸುಧಾಮ್ ದಾಸ್ ಅವರು ನೇರವಾಗಿ ಹೇಳಿದರು ಎನ್ನಲಾಗಿದೆ.

ಅಲ್ಲದೆ, ಗ್ಯಾರಂಟಿ ಯೋಜನೆಗಳ ಬಗ್ಗೆ ಶಾಸಕರಲ್ಲಿ ಅಸಮಾಧಾನವಿದೆ. ಆದರೆ, ಧೈರ್ಯವಾಗಿ ತಮ್ಮ ಅಭಿಪ್ರಾಯ ಹೇಳಿಕೊಳ್ಳಲು ಹಿಂಜರಿಯುತ್ತಿದ್ದಾರೆ. ಮುಂದಿನ ಸಭೆಯಲ್ಲಿಯಾದರೂ ಮುಕ್ತವಾಗಿ ಮಾತನಾಡಲು ಅವಕಾಶ ಸಿಗಬೇಕು ಎಂದೂ ಸುಧಾಮ್ ದಾಸ್ ಹೇಳಿದರು ಎಂದು ತಿಳಿದುಬಂದಿದೆ.

### ನಾಲ್ಕು ಹುಲಿ ಮರಿಗಳು ಸಾವು

ಕೂಗಾಟದಿಂದ ಅತ್ತಿಂದಿತ್ತ ಓಡಾಡಿ ಸೆರೆ ಹಿಡಿಯುವ ವೇಳೆ ನಿತ್ರಾಣಗೊಂಡಿದ್ದವು.

ತಕ್ಷಣವೇ ಚಿಕಿತ್ಸೆಗಾಗಿ ಪುನರ್ವಸತಿ ಕೇಂದ್ರಕ್ಕೆ ರವಾ ನಿಸಿ ಚಿಕಿತ್ಸೆ ಕೊಡಿಸಲಾಗಿತ್ತು. ಗಾಬರಿಗೊಳಗಾಗಿದ್ದ ಮರಿ ಗಳು ಸರಿಯಾಗಿ ಆಹಾರ ಸೇವಿಸುತ್ತಿರಲಿಲ್ಲ. ಅಸ್ವಸ್ಥಗೊಂ ಡಿದ್ದ ಹುಲಿ ಮರಿಗಳು ಸಾವನ್ನಪ್ಪಿವೆ.

ಪಶುವೈದ್ಯರು ಮರಣೋತ್ತರ ಪರೀಕ್ಷೆ ನಡೆಸಿದ್ದಾರೆ. ತಾಯಿ ಹುಲಿ ಆರೋಗ್ಯದಿಂದಿದೆ. ಹುಲಿ ಮರಿಗಳ ಅಂಗಾಂ ಗಗಳನ್ನು ಪರೀಕ್ಷೆಗಾಗಿ ಬೆಂಗಳೂರಿನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ವರದಿ ಬಂದ ನಂತರ ಸಾವಿಗೆ ನಿಖರ ಕಾರಣ ತಿಳಿದು ಬರಲಿದೆ. ಹುಲಿ ಮರಿಗಳ ಸಾವಿನ ಬಗ್ಗೆ ಅರಣ್ಯ ಇಲಾಖೆ ಯಾರಿಗೂ ಮಾಹಿತಿ ನೀಡಿಲ್ಲ.

ಗೌಡನಕಟ್ಟೆ ಪ್ರದೇಶದಲ್ಲಿ ಕಳೆದ ಕೆಲವು ತಿಂಗಳಲ್ಲಿ ಹುಲಿ ಸಂಚಲನ ಹೆಚ್ಚಿದೆ. ಹಳ್ಳಿಗಳತ್ತ ಹುಲಿಗಳು ಬರುತ್ತಿರು ವುದು ಆತಂಕ ಹೆಚ್ಚಿಸಿದೆ. ಸೆರೆ ಕಾರ್ಯಾಚರಣೆ ಸಂದರ್ಭ ತಾಯಿಯಿಂದ ಬೇರೆಯಾಗಿದ್ದ ಮರಿಗಳನ್ನು ಸೆರೆ ಹಿಡಿಯಲಾಗಿತ್ತು.

### ಉತ್ತರದ ಸಮಸ್ಯೆ: ಶ್ವೇತಪತ್ರ ಬಿಡುಗಡೆಗೆ ಬಿಜೆಪಿ ಆಗ್ರಹ

ಬಂದು ಜನರನ್ನು ಭೇಟಿ ಮಾಡಬಹುದಿತ್ತು. ಎಲ್ಲವೂ ಸರಿ ಇದೆ ಎಂದೇ ಐಎಎಸ್ ಅಧಿಕಾರಿಗಳು ಹೇಳುತ್ತಾರೆ. ಮುಖ್ಯಮಂತ್ರಿ ಪ್ರತಿ ಹಳ್ಳಿಗೆ ಹೋಗಬೇಕಿತ್ತು. ಅಧಿಕಾರಿಗಳು ಕೂಡ ಸಮೀಕ್ಷೆಗಾಗಿ ಗ್ರಾಮಗಳಿಗೆ ಬಂದಿಲ್ಲ. ಅನೇಕ ಕಡೆ ಪ್ರವಾಹ ಬಂದಿಲ್ಲ ಎಂದು ತಪ್ಪು ವರದಿ ನೀಡಿದ್ದಾರೆ ಎಂದು ಟೀಕಿಸಿದರು.

### ಸಭಾಪತಿ ವಿರುದ್ಧ ಭ್ರಷ್ಟಾಚಾರ ಆರೋಪ: ಕಾವೇರಿದ ಚರ್ಚೆ

ಮಾತನಾಡಿ, ಮನೆ ಹೊರಗೆ ಮೆಟ್ಟಿನಲ್ಲಿ ಹೊಡೆದು ಮನೆಯಲ್ಲಿ ಬಂದು ಕಾಲು ಹಿಡಿಯೋ ವ್ಯವಸ್ಥೆ ಬೇಡ ಎಂದರು. ಈ ಪದಕ್ಕೆ ಆಡಳಿತ ಪಕ್ಷದ ಸದಸ್ಯರ ವಿರೋಧ ಮಾಡಿದರು. ಆ ಪದ ತೆಗೆಯುವಂತೆ ಒತ್ತಾಯ ಮಾಡಿದರು. ಪರಿಶೀ ಲನೆ ಮಾಡೋದಾಗಿ ಉಪ ಸಭಾಪತಿ ತಿಳಿಸಿದರು. ಅಂತಿಮವಾಗಿ ಮಾತಾಡಿದ ಉಪ

ಸಭಾಪತಿ, ಇದು ಮನೆ ಸಮಸ್ಯೆ. ಪೀಠದ ಬಗ್ಗೆ ಮಾತಾಡೋದು ಸರಿಯಲ್ಲ. ಈಗ ಅದರ ಬಗ್ಗೆ ಚರ್ಚೆ ಬೇಡ. ಮುಂದೆ ಹೀಗೆ ಆಗದಂತೆ ನಾವು ನೋಡಿಕೊಳ್ಳೋಣ ಎಂದರು.

## ಮೊದಲ ಪುಟದಿಂದ

### 57 ಸಾವಿರ ಸೈಬರ್ ಅಪರಾಧ

ಕುರಿತು, ರಾಜ್ಯ ಸರ್ಕಾರವು ಪೊಲೀಸ್ ಕಾಯ್ದೆಗೆ ತಂದ ಬದಲಾವಣೆಗಳನ್ನು ಗೇಮಿಂಗ್ ಫೆಡರೇಶನ್ ನ್ಯಾಯಾಲಯದಲ್ಲಿ ಪ್ರಶ್ನಿಸಿ ತಡೆಯಾಜ್ಞೆ ತಂದಿತು. ಆನ್‌ಲೈನ್ ಗೇಮಿಂಗ್ ಪ್ಲಾಟ್‌ಫಾರ್ಮ್‌ಗಳನ್ನು ನಿಯಂತ್ರಿಸಲು ಕೇಂದ್ರವು ಒಂದು ಕಾಯ್ದೆಯನ್ನು ಅಂಗೀಕರಿಸಿದೆ. ಅದನ್ನು ನ್ಯಾಯಾಲಯದಲ್ಲಿಯೂ ತಡೆಹಿಡಿಯಲಾಗಿದೆ. ಮುಂದಿನ ವಿಚಾರಣೆ ಡಿಸೆಂಬರ್ 19 ರಂದು ನಡೆಯಲಿದೆ ಎಂದು ಸಚಿವರು ಹೇಳಿದರು.

ರಾಜ್ಯಕ್ಕೆ ಪ್ರತ್ಯೇಕ ಸಹಾಯವಾಣಿ: ಗೃಹ ಇಲಾಖೆಯು ಡಿಜಿಪಿ ದರ್ಜೆಯ ಅಧಿಕಾರಿಯನ್ನು ಮುಖ್ಯಸ್ಥರನ್ನಾಗಿ ಹೊಂದಿರುವ ಪ್ರತ್ಯೇಕ ಸಂಪರ್ಕ ಕೇಂದ್ರವನ್ನು ರಚಿಸಲಾಗಿದೆ. ಇದು ದೇಶದಲ್ಲೇ ಮೊದಲನೆಯದು. ಕೇಂದ್ರ ಸರ್ಕಾರ ಸ್ಥಾಪಿಸಿದ 1930 ಟೋಲ್–ಫ್ರೀ ಸಂಖ್ಯೆಯು ಭಾಷೆಗೆ ಸಂಬಂಧಿಸಿದ ಹಲವಾರು ಸಮಸ್ಯೆಗಳನ್ನು ಹೊಂದಿದೆ ಎಂದು ಸಿಮೆಂಟ್ ಮಂಜು ಹೇಳಿದರು.

ಒಬ್ಬ ವ್ಯಕ್ತಿಯು ಭಾಷೆಯನ್ನು ಸರಿಯಾಗಿ ಕಲಿಯುವ ಹೊತ್ತಿಗೆ ಕದ್ದ ಹಣವನ್ನು ಮರುಪಡೆಯುವ ಸಮಯ ಹೊರಟುಹೋಗಿರುತ್ತದೆ. ರಾಜ್ಯಕ್ಕೆ ಪ್ರತ್ಯೇಕ ಸಂಖ್ಯೆಯನ್ನು ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು. ಆದರೆ ಈ ಹಂತದಲ್ಲಿ ಸಚಿವರು ಅದನ್ನು ಅಗತ್ಯವೆಂದು ಪರಿಗಣಿಸಲಿಲ್ಲ.

### ಸಿದ್ದರಾಮಯ್ಯ ಸುತ್ತಲೇ ಸೂತ್ರಧಾರರು

ಹೇಳಿ ಕೊಟ್ಟವರು, ಯೂಟ್ಯೂಬ್ ಮಂದಿಗೆ ಹಣಕಾಸಿನ ಸಹಾಯ ಮಾಡಿದವರನ್ನು ಎಸ್‌ಐಟಿ ಪತ್ತೆ ಮಾಡಿಲ್ಲ. ಆರು ಮಂದಿ ಎಷ್ಟು ತಪ್ಪು ಮಾಡಿದ್ದಾರೋ ಅವರಿಗೆ ಪ್ರೇರಣೆ ನೀಡಿದವರಿಗೂ ಶಿಕ್ಷೆ ಆಗಬೇಕು. ಕೂಡಲೇ ವಿಶೇಷ ಕೋರ್ಟ್ ರಚನೆ ಮಾಡಿ ವಿಚಾರಣೆ ನಡೆಯಬೇಕು. ಸರ್ಕಾರದ ಹಣ ವ್ಯಯ ಮಾಡಲಾಗಿದೆ. ಹಿಂದೂಗಳ ಭಾವನೆಗೆ ಧಕ್ಕೆ ಉಂಟಾಗಿದೆ ಸರ್ಕಾರದ ಹಣವು ವೆಚ್ಚಾಗಿದೆ. ನಮ್ಮ ಹಿಂದೂ ಧರ್ಮದ ಅಪಪ್ರಚಾರ ಮಾಡಿದ್ದಾರೆ ಅವರನ್ನ ಹೊರಗೆ ತೆಗೆಯಬೇಕು ಎಂದು ಆಗ್ರಹಿಸಿದರು. ಅಪಪ್ರಚಾರ ಮಾಡಿದಾಗಲೇ ಹಿಂದೂ ಧರ್ಮ ಘಾಸಿಯಾಗಿದೆ ಧರ್ಮಸ್ಥಳ ವಿಚಾರ ಬಂದಾಗಲೇ ಅವತ್ತೇ ಇದು ಅಪಪ್ರಚಾರ ಮತ್ತು ಷಡ್ಯಂತ್ರ ಎಂದು ಹೇಳಿದ್ದೆ. ಈಗ ಎಸ್‌ಐಟಿ ಆರು ಜನ ಶಾಮೀಲಾಗಿದ್ದಾರೆ ಎಂದು ವರದಿ ನೀಡಿದೆ ಎಂದು ಹೇಳಿದರು.

### ದೀಪಾವಳಿಗೆ ಯುನೆಸ್ಕೋ ಗರಿ

ಯೂನೆಸ್ಕೋ ಪಟ್ಟಿಯಲ್ಲಿವೆ. ಸಾಂಸ್ಕೃತಿಕ ಪರಂಪರೆಯನ್ನು ಕಾಪಾಡುವ ಕೆಲಸ ಮಾಡುವ ಈ ಅಂತರ್ ಸರ್ಕಾರಿ ಸಮಿತಿ ಅಧಿವೇಶನವನ್ನು ಭಾರತ ಮೊದಲ ಬಾರಿಗೆ ಆಯೋ ಜಿಸಿದೆ. ಸಮಿತಿಯ 20ನೇ ಅಧಿವೇಶನ ಕೆಂಪುಕೋಟೆಯಲ್ಲಿ ಡಿ.13ರವರೆಗೆ ನಡೆಯಲಿದೆ. ಈ ಬಗ್ಗೆ ಸಂತಸ ವ್ಯಕ್ತಪಡಿಸಿರುವ ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಪ್ರಪಂಚದಾದ್ಯಂತ ಜನರು ಈ ನಿರ್ಧಾರದಿಂದ ಖುಷಿಯಾಗಿದ್ದಾರೆ. ದೀಪಾವಳಿ ನಮ್ಮ ಸಂಸ್ಕೃತಿ ಮತ್ತು ನೀತಿಯೊಂದಿಗೆ ಆಳವಾಗಿ ಸಂಪರ್ಕ ಹೊಂದಿದೆ. ಯುನೆಸ್ಕೋ ಸಾಂಸ್ಕೃತಿಕ ಪರಂಪರೆಯ ಪಟ್ಟಿಗೆ ದೀಪಾವಳಿ ಸೇರ್ಪಡೆಯಿಂದಾಗಿ ಈ ಹಬ್ಬದ ಜಾಗತಿಕ ಜನಪ್ರಿಯತೆ ಮತ್ತಷ್ಟು ಹೆಚ್ಚಲಿದೆ ಎಂದು ತಿಳಿಸಿದ್ದಾರೆ.

### ಧರ್ಮಸ್ಥಳ ವಿರುದ್ಧ ಪಿತೂರಿ

ಈ ಸಂಚಿನ ಸಭೆಯಲ್ಲಿ ಗಿರೀಶ್ ಮಟ್ಟ ಣ್ಣನವರ್, ಜಯಂತ್, ವಿಠ್ಠಲಗೌಡ ಭಾಗಿಯಾಗಿ ಧರ್ಮಸ್ಥಳ ಮೇಲ್ವಿಚಾರಕರ ವಿರುದ್ಧ ಪಿತೂರಿಗೆ ಪ್ಲ್ಯಾನ್ ಮಾಡಲಾಯಿತು. ಈ ಪ್ಲ್ಯಾನ್ ಪ್ರಕಾರ ನೂರಾರು ಶವ ಹೂತಿರುವುದಾಗಿ ಚಿನ್ನಯ್ಯನಿಂದ ಸುಳ್ಳು ಹೇಳಿಸಿ ವಿಡಿಯೋ ರೆಕಾರ್ಡ್ ಮಾಡಿಸಲಾಗಿತ್ತು. ತಲೆ ಬುರುಡೆಯೊಂದನ್ನು ಚಿನ್ನಯ್ಯನಿಗೆ ಕೊಟ್ಟು ಪೊಲೀಸರಿಗೆ ದೂರು ಕೊಡಿಸಿದ್ದರು. ನಂತರ ನ್ಯಾಯಾಧೀಶರ ಮುಂದೆ ಚಿನ್ನಯ್ಯ

ಹೇಳಿಕೆ ಕೊಡುವಂತೆ ಪ್ರೇರೇಪಿಸಿದ್ದರು ಎಂದು ವರದಿ ತಿಳಿಸಿದೆ.

ಧರ್ಮಸ್ಥಳದ ಮೇಲ್ವಿಚಾರಕರ ವಿರುದ್ಧ ಚಿನ್ನಯ್ಯ ಸುಳ್ಳು ಹೇಳಿದ್ದಾನೆ. ತಲೆ ಬುರುಡೆಯೊಂದನ್ನು ತಂದು ತಾನೇ ಹೂತಿದ್ದ ತಲೆ ಬುರುಡೆ ಎಂದು ಅಸತ್ಯ ನುಡಿದಿದ್ದಾನೆ. ಹಣದ ಆಮಿಷ ಹಾಗೂ ಬೆದರಿಕೆಗೆ ಒಳಪಟ್ಟು ಅಪರಿಚಿತ ಶವ ಅದರಲ್ಲೂ ಲೈಂಗಿಕ ದೌರ್ಜನ್ಯಕ್ಕೊಳಗಾದ ಮಹಿಳೆಯ ಶವಗಳನ್ನು ಹೂತಿರೋದಾಗಿ ಸುಳ್ಳು ಹೇಳಿದ್ದಾನೆ. ಸುಳ್ಳು ದೂರು ನೀಡಿದ್ದು ಅಲ್ಲದೇ ನ್ಯಾಯಾಧೀಶರ ಮುಂದೆಯೂ ಕಥೆ ಕಟ್ಟಿದ್ದಾನೆ. ಚಿನ್ನಯ್ಯ ಮಾಡಿದ ಆರೋಪಗಳೆಲ್ಲವೂ ಸತ್ಯಕ್ಕೆ ದೂರ ಎಂದು ಎಸ್‌ಐಟಿ ತನಿಖೆಯಿಂದ ಬಯಲಾಗಿದೆ.

# ಭತ್ತ ಖರೀದಿ ಕೇಂದ್ರ ತೆರೆಯಿರಿ, ಕಬ್ಬಿನ ಹಣಕೊಡಿಸಿ

ಮೈಸೂರು: ಕನಿಷ್ಠ ಬೆಂಬಲ ಬೆಲೆಯಲ್ಲಿ ಭತ್ತ ಖರೀದಿ ಕೂಡಲೇ ಆರಂಭಿಸಬೇಕು. ಬಣ್ಣಾರಿ ಕಾರ್ಖಾನೆ ಕಬ್ಬು ಹಣ ಪಾವತಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟಿಸಿತು.

ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿ, ಭತ್ತ ಖರೀದಿ ಕೇಂದ್ರ ಆರಂಭಿಸಿದ್ದೇವೆ ಎಂದು ರೈತರ ನೊಂದ ಣಿಯನ್ನು ಮಾಡಿಕೊಳ್ಳುವ ಮೂಲಕ ವಿಳಂಬ ಮಾಡು ತ್ತಿದ್ದಾರೆ ಭತ್ತದ ಬೆಲೆ ಖುಷಿಯುತ್ತಿದೆ ವಿಳಂಬವಾಗಿ ಕನಿಷ್ಠ ಬೆಂಬಲ ಬೆಲೆ ಖರೀದಿ ಕೇಂದ್ರ ಆರಂಭವಾದರೆ ರೈತರಿಗೆ ಅನುಕೂಲವಲ್ಲ ದಳ್ಳಾಳಿಗಳಿಗೆ ಹೆಚ್ಚು ಅನುಕೂಲವಾಗುತ್ತದೆ ಆದ್ದರಿಂದ ಕೂಡಲೇ ಭತ್ತ ಖರೀದಿ ಪ್ರಕ್ರಿಯೆ ಆರಂಭಿಸಬೇಕು. ಸರ್ಕಾರ ಕಬ್ಬಿಗೆ ಹೆಚ್ಚುವರಿ ಟನ್ ಕಬ್ಬಿಗೆ ನೂರು ರೂಪಾಯಿ ನಿಗದಿ ಮಾಡಿರು ವುದನ್ನು ಬಣ್ಣಾರಿ ಸಕ್ಕರೆ ಕಾರ್ಖಾನೆಯಿಂದ ಕೂಡಲೇ ಕೊಡಿಸಬೇಕು. ಕಳೆದ ವರ್ಷದ ಉಪ ಉತ್ಪನ್ನಗಳ ಲಾಭ ಹಂಚಿಕೆ ಮಾಡಿ ರೈತರಿಗೆ ಕೊಡಿಸಬೇಕೆಂದರು. ಬಣ್ಣಾರಿ ಸಕ್ಕರೆ



ಕಾರ್ಖಾನೆ ರೈತರಿಗೆ ನ್ಯಾಯ ಸಮತ ಬೆಲೆ ನೀಡುತ್ತಿಲ್ಲ. ಜನಸಾಮಾನ್ಯರು ತಿನ್ನುವ ಭತ್ತಕ್ಕೆ ಎಂಎಸ್‌ಪಿ ಕ್ವಿಂಟಾಲ್ ಗೆ 2369 ದನ, ಕರು, ಪ್ರಾಣಿ ಗಳು ತಿನ್ನುವ ಮೆಕ್ಕೆಜೋಳಕ್ಕೆ 2400 ಈ ರೀತಿಯ ಬೆಲೆ ನಿಗದಿ ಮಾಡುವುದರಿಂದ ರೈತರ ಬದುಕು ನರಕವಾಗುತ್ತಿದೆ. ಕೇಂದ್ರ ಸರ್ಕಾರ ಇನ್ನಾದರೂ ಎಚ್ಚೆ ತ್ತುಕೊಂಡು ಭತ್ತದ ಬೆಂಬಲ ಬೆಲೆಯನ್ನು 3000ಗೆ ಹೆಚ್ಚಳ ಮಾಡಲಿ ಎಂದರು. ಪ್ರತಿಭಟನಾ ಸ್ಥಳಕ್ಕೆ ಆಗ ಮಿಸಿದ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಮಾತನಾಡಿ, 11ರಂದು ರೈತರಿಂದ ಭತ್ತ, ರಾಗಿ ಖರೀದಿ ಕೇಂದ್ರ ಆರಂಭಿಸುವುದಾಗಿ ಹಾಗೂ ಕಬ್ಬು ದರ ಹೆಚ್ಚುವರಿ ಹಣ ಕೊಡಿಸುವ ಬಗ್ಗೆ ಹಾಗೂ ಸಮಸ್ಯೆಗಳ ಚರ್ಚಿಸುವ ಬಗ್ಗೆ ಈ ತಿಂಗಳ 29 ರಂದು ಕಾರ್ಖಾನೆ ಮಾಲೀಕರು ಹಾಗೂ ರೈತ ಮುಖಂಡರ ಸಭೆ ಕರೆಯುವ ಭರವಸೆ ನೀಡಿದರು ತಮಿಳುನಾಡಿನ ರೈತ ನಾಯಕ ಪಿ.ಆರ್.ಪಾಂಡೇನ್ ಕೂಡಲೇ ಬಿಡುಗಡೆಯಾಗಬೇಕೆಂದರು. ಪ್ರತಿಭಟನೆಯಲ್ಲಿ ಅತ್ತಹಳ್ಳಿ ದೇವರಾಜ್, ಸೋಮಶೇ ಖರ್, ಬರಡನಪುರ ನಾಗರಾಜ್, ಮೂಕಳ್ಳಿ ಮಹದೇವಸ್ವಾಮಿ, ಕುರುಬೂರು ಸಿದ್ದೇಶ್, ಲಕ್ಷ್ಮೀಪುರ ವೆಂಕ ಟೇಶ್, ದೇವನೂರು ವಿಜಯೇಂದ್ರ, ಪಟೇಲ್ ಶಿವ ಮೂರ್ತಿ, ಮಾರ್ಬಳ್ಳಿ ನೀಲಕಂಠಪ್ಪ, ಉಡಿಗಾಲ ರೇವಣ್ಣ, ಬಿ.ಪಿ.ಪರಶಿವಮೂರ್ತಿ, ಕೆಂಡಗಣಪ್ಪ, ಅಂಬಳೆ ಮಂಜು ನಾಥ್, ಹೆಚ್.ಡಿ.ಕೋಟೆ ಸುನೀಲ್, ದೇವನೂರು ಮಹಾದೇವ, ಕೆಂಡಗಣಸ್ವಾಮಿ, ಕುರುಬೂರು ಪ್ರದೀಪ್, ಸಾತಗಳ್ಳಿ ಬಸವರಾಜ, ಬನ್ನೂರು ಸೂರಿ, ಸಿಂಧುವಳ್ಳಿ ಬಸವಣ್ಣ, ಕಾಟೂರು ನಾಗೇಶ್, ಗಿರೀಶ್, ಪುಟ್ಟೇಗೌಡನಹುಂಡಿ ರಾಜು, ಹೆಗ್ಗೊಠಾರ ಶಿವಸ್ವಾಮಿ, ವಾಜಮಂಗಲ ನಾಗೇಂದ್ರ, ಕೂರ್ಗಳ್ಳಿ ರವಿ, ಹೆಗ್ಗೂರು ರಂಗರಾಜು, ಸಿದ್ಧರಾಮ, ನಂಜುಂಡಸ್ವಾಮಿ, ರಾಮ ಚಂದ್ರ, ಶಿವಣ್ಣ, ಬಾಲು, ಕಮಲಮ್ಮ ಉಪಸ್ಥಿತರಿದ್ದರು.

# ರೋಟರಿಯಿಂದ ಸಮಾಜಮುಖಿ ಸೇವೆ



ಚಾಮರಾಜನಗರ: ನಗರದ ಭ್ರಮರಾಂಭ ಬಡಾವಣೆಯಲ್ಲಿರುವ ಚಾಮರಾಜೇಶ್ವರ ನಗರದ ವಸತಿ ರಹಿತ ನಿರಾಶ್ರಿತರ ಅಶ್ರಮದ ನಿರಾಶ್ರಿತರಿಗೆ ರೋಟರಿ ಸಂಸ್ಥೆ ವತಿಯಿಂದ ಬೆಚ್ಚನೆಯ ಹೊದಿಕೆ ವಿತರಿಸಲಾಯಿತು.

ಈ ಸಂದರ್ಭದಲ್ಲಿರೋಟರಿ ಸಂಸ್ಥೆ ಕಾಳನ ಹುಂಡಿ ಗುರುಸ್ವಾಮಿ ಮಾತನಾಡಿ, ರೋಟರಿ ಸಂಸ್ಥೆಯು ನಿರಂತರವಾಗಿ ಸಮಾಜಮುಖಿ ಸೇವೆ ಮಾಡುತ್ತಿದ್ದು, ಮೈಕೊರೆಯುವ ಚಳಿಗಾಲ ಇರುವ ಕಾರಣ ಬೆಚ್ಚನೆಯ ಹೊದಿಕೆ ಬಹಳ ಅವಶ್ಯಕವಾಗಿದೆ. ಹೀಗಾಗಿ ನಿರ್ಗತಿಕರಿಗೆ ನಮ್ಮ ರೋಟರಿ ಸಂಸ್ಥೆ ವತಿಯಿಂದ ಹೊದಿಕೆ ವಿತರಿಸಲಾಗಿದೆ ಎಂದರು.

ರೋಟರಿ ಸಂಸ್ಥೆ ಅಧ್ಯಕ್ಷ ಕಾಗಲವಾಡಿ ಚಂದ್ರು ಮಾತನಾಡಿ, ನಮ್ಮ ರೋಟರಿ ಸಂಸ್ಥೆಯು ನಿರಂತರವಾಗಿ ಸಮಾಜಮುಖಿ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದ್ದು, ಕಳೆದ ಒಂದು ವಾರದಿಂದ ಮೈಕೊರೆಯುವ ಚಳಿಯಿದ್ದು ರಸ್ತೆಬದಿ, ದೇವಸ್ಥಾನ ಮುಂಭಾಗ, ಬಸ್ ನಿಲ್ದಾಣ ಸೇರಿದಂತೆ ಇತರ ಕಡೆಗಳಲ್ಲಿ ಮಲಗು ನಿರ್ಗತಿಕರ ಆರೋಗ್ಯ ದೃಷ್ಟಿಯಿಂದ ಬೆಚ್ಚನೆಯ ಹೊದಿಕೆಯನ್ನು ವಿತರಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ರೋಟರಿ ಸಂಸ್ಥೆ ಕಾರ್ಯದರ್ಶಿ ಕೆಂಪನಪುರ ಸಿದ್ದರಾಜು, ಅಂಕಶೆಟ್ಟಿ, ಅಬ್ದುಲ್ ಅಜೀಜ್ ದೀನಾ, ಸಿದ್ದಮಲ್ಲಪ್ಪ, ಯೋಗರಾಜ್ ಕಮಲ್ ರಾಜ್ .ಪ್ರಕಾಶ್.ನಾಗರಾಜ್ ಚಂದ್ರಪ್ರಭ ಜೈನ್. ಎಸ್ಆರ್ಎಸ್ ಶ್ರೀನಿವಾಸ್. ನೇಮಿರಾಜ್, ಸಿದ್ದ ಮಲ್ಲಪ್ಪ. ಮಹಾದೇವಸ್ವಾಮಿ ಇದ್ದರು.

# ಕೌದಳ್ಳಿ ಅರಣ್ಯ ಸಿಬ್ಬಂದಿಗಳಿಗೆ ಆರೋಗ್ಯ ತಪಾಸಣೆ

ಚಾಮರಾಜಗರ: ಇಲಾಖೆಯ ನೌಕರರು ಆರೋಗ್ಯವನ್ನು ಉತ್ತಮವಾಗಿ ಇಟ್ಟಿಕೊಳ್ಳಬೇಕು. ನಿಮ್ಮ ಆರೋಗ್ಯ ನಿಮ್ಮ ಕೈಯಲ್ಲಿಇರಬೇಕು ಎಂದು ರೇಂಜ್ ಫಾರೆಸ್ಟ್ ಆಫೀಸರ್ ರಾಮಪುರ ವೈಡ್ ಲೈಫ್ ನ ಕೌದಳ್ಳಿ ಮಾದೇಶ್ ತಿಳಿಸಿದರು.

ಹನೂರು ತಾಲ್ಲೂಕಿನ ಕೌದಳ್ಳಿ ಗ್ರಾಮದ ಅರಣ್ಯ ವಿಶ್ರಾಂತಿ ಗೃಹದಲ್ಲಿ ಪಿ.ಎಫ್.ಡ್ಬ್ಯೂಸಿಕೆ ಪೀಪಲ್ ಫಾರ್ ಫಾರೆಸ್ಟ್ ವೈಲ್ಡ್ ಲೈಫ್ ಕನ್ಸರ್ವೇಷನ್ ಆಫ್ ಕರ್ನಾಟಕ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ

ಅರಣ್ಯ ಇಲಾಖೆ ಅರಣ್ಯ ರಕ್ಷಕ ಸೈನಿಕರಿಗೆ" ನೇತ್ರ ಮತ್ತು ಆರೋಗ್ಯ ತಪಾಸಣಾ ಶಿಬಿರ" ವನ್ನು ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಬ್ಬರಿಗೂ ಆರೋಗ್ಯ ಬಹಳ ಮುಖ್ಯ ಆರೋಗ್ಯವಂತರಾಗಲು ಪ್ರತಿ ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆಯನ್ನು ಮಾಡಿಕೊಳ್ಳುವುದು ಮುಖ್ಯ, ಮನುಷ್ಯನಿಗೆ ಯಾವ ಸಮಯದಲ್ಲಿ ಆರೋಗ್ಯ ಕೆಡುತ್ತದೆ ಎಂದು ತಿಳಿಯುವುದು ಕಷ್ಟಕರವಾಗಿದೆ. ಇಲಾಖೆ ವತಿಯಿಂದ ನಡೆಸುವ ಆರೋಗ್ಯ ಶಿಬಿರಗಳಲ್ಲಿ ಭಾಗವಹಿಸಿ ಚಿಕಿತ್ಸೆಯನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಪರಿಸರ ಪ್ರೇಮಿ ಹಾಗೂ ಕಲಾವಿದ ಅರುಣ್ ಕುಮಾರ್ ಪ್ರಸ್ತಾವಿಕವಾಗಿ ಮಾತನಾಡಿ ಕರ್ನಾಟಕದಲ್ಲಿ ಹಲವಾರು ಎನ್.ಜಿ.ಒಗಳು ಉತ್ತಮ ಸೇವೆಗಳನ್ನು ನಿರ್ವಹಿಸುತ್ತಿದೆ. ಚಾಮರಾಜನಗರ ಜಿಲ್ಲೆಯ ಗಡಿಭಾಗವಾದ ಗ್ರಾಮಗಳಲ್ಲಿ ಜನರಿಗೆ ಅನುಕೂಲವಾಗುವಂತೆ ಆರೋಗ್ಯ ತಪಾಸಣೆ ಶಿಬಿರಗಳನ್ನು ನಡೆಸುತ್ತಿರುವುದು ಶ್ಲಾಘನೀಯ ಕಾಡು ಪ್ರದೇಶದ ಜನರು ಆಸ್ಪತ್ರೆಗಳಿಗೆ ಹೋಗಬೇಕಾದರೆ ಬಹಳಷ್ಟು ದೂರ ನಡೆದು ಹೋಗಬೇಕು. ಆಸ್ಪತ್ರೆಯ ಉತ್ತಮ ವೈದ್ಯರುಗಳು ಗ್ರಾಮೀಣ ಭಾಗಗಳಿಗೆ ಬಂದು ಸೇವೆ ನೀಡುತ್ತಿರುವುದು ಸಂತೋಷವಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹನೂರು ತಾಲೂಕು ಆರೋಗ್ಯ ಅಧಿಕಾರಿ ಡಾ. ಪ್ರಕಾಶ್ ವಹಿಸಿದ್ದರು.



ಸಂಸ್ಥೆಯ ಕಾರ್ಯದರ್ಶಿಗಳಾದ ಭರತ್ ಎಂ. ಎಸ್ ಹಾಗೆ ಸಂಘಟನೆ ಮತ್ತು ನಿರ್ವಹಣೆ ಶ್ರೀ ಪ್ರವೀಣ್, ಪಿ ದೇವಾನಂದ, ಸಿ ಚಂದನ್ ಕುಮಾರ್ ಭಾಗವಹಿಸಿದ್ದರು.

ಆರೋಗ್ಯ ಶಿಬಿರದಲ್ಲಿ 65 ಅರಣ್ಯ ರಕ್ಷಕ ಸಿಬ್ಬಂದಿ ವರ್ಗದವರಿಗೆ ರಕ್ತ ಪರೀಕ್ಷೆ, ಕ್ಷ – ಕಿರಣ ವ್ಯವಸ್ಥೆ, ಹಾಗೂ ನೇತ್ರ ಚಿಕಿತ್ಸೆ ನಡೆಯಿತು.

# ಫಲಿತಾಂಶ ಸುಧಾರಣೆಗೆ ಪ್ರಯತ್ನ

**ಶಿವಕುಮಾರ ತುಂಬಸೋಗೆ**

ಎಚ್.ಡಿ.ಕೋಟೆ: ವಿದ್ಯಾರ್ಥಿ ಜೀವನದಲ್ಲಿ ಹತ್ತನೆ ತರಗತಿ ಪೂರ್ಣಗೊಳಿಸಿದ ನಂತರ ವಿದ್ಯಾರ್ಥಿಗಳ ಉನ್ನತ ಶಿಕ್ಷಣ ಹಾಗೂ ಉದ್ಯೋಗದ ಮಾರ್ಗಗಳು ತೆರೆಯುವ ಶೈಕ್ಷಣಿಕ ಹಂತವಾಗಿದ್ದು, ವಿದ್ಯಾರ್ಥಿಗಳ ಭವಿಷ್ಯದ ದಿಕ್ಸೂಚಿ ಎಂದೇ ಹತ್ತನೆ ತರಗತಿಯನ್ನು ಬಣ್ಣಿಸಲಾಗುತ್ತದೆ.

ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯ ಫಲಿತಾಂಶದಲ್ಲಿ ಹಲವು ವರ್ಷಗಳಿಂದ ತಾಲೂಕು ಕಳಪೆ ಸಾಧನೆ ಸಂಪಾದಿ ಸಿರುವುದರಿಂದ ಸಾರ್ವಜನಿಕ ವಲಯದಲ್ಲಿ ಶಿಕ್ಷಣ ಇಲಾಖೆ ವಿರುದ್ಧ ವ್ಯಾಪಕ ಟೀಕೆಗಳು ಬಹಿರಂಗವಾಗಿಯೇ ಕೇಳಲಾರಂಭಿಸಿದ್ದವು. ಕಳೆದ ವರ್ಷವಾದರೂ ಫಲಿತಾಂಶ ಸುಧಾರಣೆಯಾಗುವ ನಿರೀಕ್ಷೆಯೊಂದಿಗೆ ಪೋಷಕರು ಹಾಗೂ ಸಾರ್ವಜನಿಕರಿದ್ದರು. ಆದರೆ, ಕಳೆದ ಬಾರಿ ಜಿಲ್ಲೆಗೆ ಕೋಟೆ ಕೊನೆಯ ಸ್ಥಾನ ಬಂದಿದ್ದರಿಂದ ಸಿಟ್ಟಾಗಿ ತಾಲೂಕಿನಲ್ಲಿ ಅನುಭವಿ ಹಾಗೂ ಹಿರಿಯ, ದೀರ್ಘಾವಧಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿದ್ದರೂ ಫಲಿತಾಂಶದಲ್ಲಿ ಸುಧಾರಣೆ ಕಾಣದ್ದರಿಂದ ಪ್ರತಿಯೊಬ್ಬರೂ ಬಹಿರಂಗವಾಗಿ ಬೇಸರ ಹೊರ ಹಾಕಿದ್ದರು.

ಪ್ರಸಕ್ತ ಸಾಲಿನಲ್ಲಿ ಉತ್ತಮ ಫಲಿತಾಂಶ ನೀಡಿ ಇಲ್ಲವೇ, ಕ್ಷೇತ್ರದಿಂದ ಖಾಲಿ ಮಾಡಿ ಎಂದು ಶಾಸಕ ಅನಿಲ್ ಚಿಕ್ಕಮಾದು ತಾಲೂಕಿನ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಹಿಂದಿನ ಕ್ಷೇತ್ರ ಶಿಕ್ಷಣಾಧಿಕಾರಿ ಜೊತೆಗೆ, ಇಲಾಖೆಯವರನ್ನು ತೀವ್ರ ತರಾಟೆಗೆ ತಗೆದುಕೊಂಡಿದ್ದರು. ಗಂಗೆಯನ್ನು ಭೂಮಿಗೆ ತರಲು ಭಗೀರಥ ಮಹರ್ಷಿ ಕಠಿಣ ತಪಸ್ಸು ಮಾಡಿ ತಮ್ಮ ಪೂರ್ವಜರಿಗೆ ಮುಕ್ತಿ ನೀಡಿದಂತೆ, ಫಲಿತಾಂಶದಲ್ಲಿ ಕೊನೆಯ ಸ್ಥಾನಕ್ಕೆ ಮುಕ್ತಿ ನೀಡಿ, ಫಲಿತಾಂಶ ಸುಧಾರಣೆಗೆ ನೂತನ ಬಿಇಒ ರಾಜು ಮುಂದಾಗಿದ್ದಾರೆ.

ಕೆಲವು ಶಿಕ್ಷಕರಿಗೆ ಸಂಕಷ್ಟ ವಿದ್ಯಾರ್ಥಿಯ ವ್ಯಕ್ತಿತ್ವ ವಿಕಸನ, ಮಾರ್ಗದರ್ಶನ, ಮಾನವೀಯ ಮೌಲ್ಯ ಹಾಗೂ ಜ್ಞಾನವನ್ನು ನೀಡಿ ದೇಶದ ಉಜ್ವಲ ಭವಿಷ್ಯವನ್ನು ರೂಪುಗೊಳಿಸಲು ಭದ್ರ ಬುನಾದಿ ಹಾಕುವ ಮಹತ್ತರ ಜವಾಬ್ದಾರಿಯನ್ನು ಶಿಕ್ಷಕ ವೃಂದ ಹೊಂದಿದೆ. ಸರಗೂರು ಹಾಗೂ ಕೋಟೆ ತಾಲೂಕು ಭೌಗೋಳಿಕವಾಗಿ ವಿಶಾಲವಾಗಿದ್ದು, ತಾಲೂಕಿನ ಕೇಂದ್ರ ಸ್ಥಾನಕ್ಕೂ, ಕೆಲ ಗ್ರಾಮಗಳಿಗೂ ಅಂತರವಿರುವುದರಿಂದ ಕೆಲ ಶಿಕ್ಷಕರು ಕುಂಟು ನೆಪ ಹೇಳಿಕೊಂಡು ತಾವು ನಿಯೋಜನೆಗೊಂಡ ಶಾಲೆಗೆ ಕರ್ತವ್ಯಕ್ಕೆ ಹಾಜರಾಗಲು ತೋರುತ್ತಿರುವ ನಿರಾಸಕ್ತಿಯಿಂದ ಶೈಕ್ಷಣಿಕ ಕ್ಷೇತ್ರಕ್ಕೆ ನಷ್ಟವಾಗುತ್ತಿದೆ ಎಂಬ ಮಾಹಿತಿ ಅರಿತ ಬಿಇಒ ರಾಜು, ತಮ್ಮ ಶಾಲೆ ಅವಧಿಯಲ್ಲಿ ಯಾರೊಬ್ಬರೂ ಕಚೇರಿಗೆ ಬರುವಂತಿಲ್ಲ, ಪ್ರತಿ ಶಿಕ್ಷಕರು ಬೆ.9:30ಕ್ಕೆ ಶಾಲೆಗೆ ಹಾಜರಿರಲೇಬೇಕು ಎಂದು ಕಟ್ಟಾಜ್ಞೆ ಹೊರಡಿಸಿದ್ದಾರೆ. ಇದರ ಹೊರತಾಗಿಯೂ ಗಡಿ ಗ್ರಾಮಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸುತ್ತಿದ್ದಾರೆ. ಈ ವೇಳೆ ತಡವಾಗಿ ಆಗಮಿಸುವ, ಅನಧಿಕೃತ ಗೈರಾದ ಶಿಕ್ಷಕರ ಮಾಹಿತಿಯನ್ನು ಸೇವಾ ನೋಂದಣಿ (ಸರ್ವಿಸ್ ರಿಜಿಸ್ಟರ್) ಪುಸ್ತಕದಲ್ಲಿ ನಮೂದಿಸಿ ಮೇಲಧಿಕಾರಿಗಳಿಗೆ ಮಾಹಿತಿ ನೀಡಿ ವೇತನವನ್ನು ಕಡಿತಗೊಳಿಸುವ ಮೂಲಕ ಸರಿ ದಾರಿಗೆ ತರುವ ದಿಟ್ಟ ನಿರ್ಧಾರ ತೋರುತ್ತಿದ್ದಾರೆ.





## ಗಮನ ಸೆಳೆಯುತ್ತಿರುವ ಗ್ರಾಮ ವಾಸ್ತವ್ಯ

**ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಪ್ರೌಢಶಾಲೆ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರಿಗೆ ಕಾರ್ಯಾಗಾರಗಳನ್ನು ನಡೆಸಲಾಗಿದೆ. ಮಾ.18 ರಿಂದ ಏ.2ರ ವರೆಗೆ ನಡೆಯುವ ವಾರ್ಷಿಕ ಪರೀಕ್ಷೆಯಲ್ಲಿ 31–ಸರ್ಕಾರಿ ಪ್ರೌಢಶಾಲೆ, 16–ಖಾಸಗಿ, 7–ಅನುದಾನಿತ, ಐದು ವಸತಿ ಶಾಲೆಗಳ 3,369 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಈ ವಿದ್ಯಾರ್ಥಿಗಳಿಗೆ ಕಲಿಕಾ ಖಾತ್ರಿ ಎಂಬ ವಿನೂತನ ಪ್ರಯೋಗದೊಂದಿಗೆ ವಿಷಯಾವಾರು ಬೋಧಿಸಿದ ಎರಡು ಪಠ್ಯಗಳಿಗೆ 20 ಅಂಕಗಳಿಗೆ ವಾರ್ಷಿಕ ಪರೀಕ್ಷೆ ಮಾದರಿಯಲ್ಲಿ ಪರೀಕ್ಷೆ ನಡೆಸಲಾಗಿದೆ. ವಾರ್ಷಿಕ ಪರೀಕ್ಷೆ ಮಾದರಿಯ ಪ್ರಶ್ನೆ ಪತ್ರಿಕೆಗಳು ಹಾಗೂ ಉತ್ತರ ಪತ್ರಿಕೆಗಳನ್ನು ರಾಜ್ಯದಲ್ಲಿ ನಡೆಯುವ ಮೌಲ್ಯ ಮಾಪನ ಮಾದರಿಯಲ್ಲಿ ಮೌಲ್ಯಮಾಪನ ನಡೆಸಲಾಗಿದ್ದು, ಹಂತ, ಹಂತವಾಗಿ ಅಂಕಗಳನ್ನು ಹೆಚ್ಚಳ ಮಾಡಿ, ವಿದ್ಯಾರ್ಥಿಗಳಿಗೆ ಇದ್ದ ಮುಖ್ಯ ಪರೀಕ್ಷೆ ಭಯವನ್ನು ನಿವಾರಿಸಲಾಗಿದೆ. ಇದೀಗ ಮಧ್ಯವಾರ್ಷಿಕ ಪರೀಕ್ಷೆ ಮುಗಿದು, ಮುಖ್ಯ ಪರೀಕ್ಷೆ ಸಮೀಪಿಸುತ್ತಿರುವಾಗ ಬಿಇಒ ರಾಜು ಗ್ರಾಮ ವಾಸ್ತವ್ಯ ಹೂಡಿ, ಅಲ್ಲಿನ ಪ್ರೌಢಶಾಲೆ ವ್ಯಾಪ್ತಿಯ ಎಲ್ಲ ಗ್ರಾಮಗಳಿಗೆ ರಾತ್ರಿ, ಮುಂಜಾನೆ ವೇಳೆ ವಿದ್ಯಾರ್ಥಿ ಮನೆಗಳಿಗೆ ದಿಢೀರ್ ಭೇಟಿ ನೀಡಿ, ಹತ್ತನೆ ತರಗತಿಯ ಎಲ್ಲ ವಿಷಯಗಳ ಪ್ರಶ್ನೆ ಕೇಳಿ ಉತ್ತರ ಪಡೆಯುವ, ಉತ್ತರ ತಪ್ಪಿದ್ದರೆ ತಿದ್ದುವ, ಕಲಿಕೆಯಲ್ಲಿ ತೀರಾ ಹಿಂದುಳಿದಿರುವ ಮಕ್ಕಳಿಗೆ ಬಗ್ಗೆ ಹೆಚ್ಚಿನ ಒತ್ತು ನೀಡುವಂತೆ ಸ್ಥಳದಲ್ಲಿಯೇ ಶಿಕ್ಷಕ, ಮುಖ್ಯ ಶಿಕ್ಷಕರಿಗೆ ದೂರವಾಣಿ ಮೂಲಕ ಖಡಕ್ ಸೂಚನೆ ನೀಡುತ್ತಿದ್ದಾರೆ. ಕ್ಷೇತ್ರ ಶಿಕ್ಷಣಾಧಿಕಾರಿಗಳ ಈ ಕಾರ್ಯ ತಾಲೂಕಿನಾದ್ಯಂತ ಪ್ರಶಂಸೆಗೆ ಪಾತ್ರವಾಗಿದೆ.**

### ನಾನು ಓದುತ್ತಿದ್ದೇನೆ ರಾಜ್ಯದಲ್ಲಿಯೇ ಪ್ರಥಮ


ಕಲಿಕೆ ಮಕ್ಕಳಿಗೆ ಕಷ್ಟ ಎನಿಸಬಾರದು ಎಂಬ ದೃಷ್ಟಿಯಿಂದ ನಲಿದು, ಕಲಿಯುವಂತೆ 200–10ರಲ್ಲಿ ನಲಿ–ಕಲಿ ಯೋಜನೆಗೆ ರಾಜ್ಯದಲ್ಲಿ ಪ್ರಥಮವಾಗಿ ಕೋಟೆ ತಾಲೂಕಿನಲ್ಲಿ ಚಾಲನೆ ನೀಡಲಾಗಿತ್ತು. ಮೊದಲಿನಂತಲ್ಲ ಬದಲಾಗಿದ್ದೇನೆ. ಶಾಲೆಯಲ್ಲಿ ಮಾತ್ರವಲ್ಲ ಮನೆಯಲ್ಲೂ ಓದುತ್ತೇನೆ. ಗೈರು ಹಾಜರಿಯಾಗಲ್ಲ. ನಿತ್ಯ ಶಾಲೆಗೆ ಹೋಗುತ್ತೇನೆ. ಶಿಕ್ಷಣ ನನ್ನ ಹಕ್ಕು ಇದನ್ನು ನಾನು ಪಡೆದೇ ತೀರುತ್ತೇನೆ. ಹೌದು ನಾನು ಓದುತ್ತಿದ್ದೇನೆ ಎಂಬ ಶಫಥದೊಂದಿಗೆ ವಿದ್ಯಾರ್ಥಿಯ ಸಹಿ ಇರುವ, ನಮ್ಮ ಮಗು ಓದಬೇಕು. ಶಾಲೆಯಲ್ಲಿ ಮಾತ್ರವಲ್ಲ, ಮನೆಯಲ್ಲೂ ಓದಬೇಕು. ಶಾಲೆ ಬಿಡಿಸಿ ಕೆಲಸಕ್ಕೆ ಕಳುಹಿಸುವುದಿಲ್ಲ. ವಿದ್ಯಾಭ್ಯಾಸದ ಬಗ್ಗೆ ಕಾಳಜಿವಹಿಸುವೆವು. ಮಕ್ಕಳನ್ನು ಆಸ್ತಿ ಮಾಡದೆ ಮಕ್ಕಳನ್ನೇ ಆಸ್ತಿ ಮಾಡುವೆವು. ನಮ್ಮ ಮಗು ಓದಬೇಕು ಎಂಬ ಪ್ರತಿಜ್ಞೆಯೊಂದಿಗೆ ಪೋಷಕರ ರುಜುವಾತಿನೊಂದಿಗೆ ತರಗತಿ ಶಿಕ್ಷಕರು, ಮುಖ್ಯ ಶಿಕ್ಷಕರ ಸಹಿಯೊಂದಿಗೆ, ಪ್ರತಿ ವಿದ್ಯಾರ್ಥಿ ಮನೆಯ ಪ್ರವೇಶ ದ್ವಾರದಲ್ಲಿ ಪೋಸ್ಟರ್ ಅಂಟಿಸುವುದರ ಜೊತೆಗೆ, ವಿದ್ಯಾರ್ಥಿಗಳನ್ನು ವಿಂಗಡಿಸಿ ಶಾಲೆಯ ಪ್ರತಿ ಶಿಕ್ಷಕರಿಗೆ ಶೈಕ್ಷಣಿಕ ದತ್ತು ನೀಡಲಾಗಿದ್ದು, ವಿದ್ಯಾರ್ಥಿ ಎಷ್ಟು ಗಂಟೆಗೆ ಯಾವ ವಿಷಯ, ಯಾವ ಪಠ್ಯ ಓದಬೇಕು, ಬರಯಬೇಕು, ಪುನರಾವರ್ತನೆ ಮಾಡಬೇಕು ಎಂಬುದನ್ನು ನಾನು ಓದುತ್ತಿದ್ದೇನೆ ಕಾರ್ಡ್ ನಲ್ಲಿ ನಮೂದಿಸಿ, ಪೋಷಕರು, ಶಿಕ್ಷಕರ ಸಹಿಯನ್ನು ದಿನಚರಿಯ ಕಾರ್ಡ್ ನಲ್ಲಿ ನಮೂದಿಸಬೇಕಿದೆ. ಪೋಷಕರ ದೂರವಾಣಿಗೆ ಕರೆ ಮಾಡಿ ಮುಂಜಾನೆ 5 ಗಂಟೆಗೆ ಎಬ್ಬಿಸುವ ಜವಾಬ್ದಾರಿಯನ್ನು ಶಿಕ್ಷಕರಿಗೆ ನೀಡಲಾಗಿದ್ದು, ಫಲಿತಾಂಶ ಸುಧಾರಣೆಗೆ ಪಣ ತೊಟ್ಟಿದ್ದಾರೆ.

## ಶಾಲೆ ಬಿಟ್ಟ ನೆರೆ ರಾಜ್ಯದ ಮಕ್ಕಳನ್ನು ತಾಲೂಕಿಗೆ ತಂದ ಕೀರ್ತಿ

**ತಾಲೂಕಿನೊಂದಿಗೆ ಗಡಿ ಹಂಚಿಕೊಂಡಿರುವ ನೆರೆ ರಾಜ್ಯ ಕೇರಳದ ಗಡಿ ಭಾಗದಲ್ಲಿ ವಿದ್ಯಾಭ್ಯಾಸ ಮೊಟಕುಗೊಳಿಸಿ ಮನೆಯಲ್ಲಿದ್ದ ಇಬ್ಬರು ಮಕ್ಕಳ ವಿಷಯ ತಿಳಿದ ಬಿಇಒ ರಾಜು, ಕೂಡಲೇ ಗ್ರಾಮಕ್ಕೆ ತೆರಳಿ ಪೋಷಕರು ಹಾಗೂ ವಿದ್ಯಾರ್ಥಿಗಳಿಗೆ ಶಿಕ್ಷಣದ ಮಹತ್ವವನ್ನು ಮನದಟ್ಟು ಮಾಡಿಕೊಟ್ಟ ನಂತರ, ಮಲಿಯಾಳಂ ಭಾಷೆಯ ಇಬ್ಬರು ವಿದ್ಯಾರ್ಥಿಗಳನ್ನು ತಾಲೂಕಿನ ಗಡಿ ಭಾಗ ದೊಡ್ಡ ಭೈರನಕುಪ್ಪೆ ಶಾಲೆಗೆ ಐದನೆ ತರಗತಿಗೆ ಪ್ರವೇಶ ನೀಡಿ, ಮಕ್ಕಳ ಜ್ಞಾನಾರ್ಜನೆಗೆ ಸಹಾಯವಾಗಿರುವ ಇವರ ಶಿಕ್ಷಣಾಸಕ್ತಿಯನ್ನು ಮೆಚ್ಚುವಂತದ್ದು.**

# ತಾಲೂಕು ಡಾ.ಬಿ.ಆರ್. ಅಂಬೇಡ್ಕರ್ ಮಹಾಸಭಾ ಅಸ್ತಿತ್ವಕ್ಕೆ

**ಅಧ್ಯಕ್ಷ ರಾಗಿ ಉಮೇಶ್ ಕುದರ್, ಕಾರ್ಯಾಧ್ಯಕ್ಷ ಸಿ. ಕೆ. ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಗಣೇಶ್ ಪ್ರಸಾದ್ ಆಯ್ಕೆ**



ಚಾಮರಾಜನಗರ, ಚಾಮರಾಜನಗರ ತಾಲೂಕು ಡಾ. ಬಿ.ಆರ್. ಅಂಬೇಡ್ಕರ್ ರವರ ಮಹಾಸಭಾ ಅಸ್ತಿತ್ವಕ್ಕೆ ತರಲಾಯಿತು. ಅಧ್ಯಕ್ಷರಾಗಿ ಉಮೇಶ್ ಕುದರ್, ಕಾರ್ಯಾಧ್ಯಕ್ಷರಾಗಿ ಸಿ.ಕೆ. ಮಂಜುನಾಥ್ ಹಾಗೂ ಪ್ರಧಾನ ಕಾರ್ಯದರ್ಶಿ ಗಣೇಶ್ ಪ್ರಸಾದ್ ಅವರನ್ನು ಸರ್ವಾನುಮತದಿಂದ ಸಭೆಯಲ್ಲಿ ಆಯ್ಕೆ ಮಾಡಲಾಯಿತು.

ನಗರದ ಡಾ. ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ತಾಲೂಕಿನ ಪರಿಶಿಷ್ಟಜಾತಿ ಬಲಗೈ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಗಡಿಕಟ್ಟೆ ಯಜಮಾನರು, ಡಾ. ಬಿ.ಆರ್. ಅಂಬೇಡ್ಕರ್ ಸಂಘಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ವಿವಿಧ ರಾಜಕೀಯ ಪಕ್ಷಗಳ ಮುಖಂಡರ ನೇತೃತ್ವದಲ್ಲಿ ಸಭೆ ನಡೆಯಿತು. ತಾಲೂಕಿನಲ್ಲಿರುವ ಪರಿಶಿಷ್ಟ ಜಾತಿ ಬಲಗೈ ಸಮುದಾಯವನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಒಂದೇ ವೇದಿಕೆಯಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಮಹಾಸಭಾ ರಚನೆ ಮಾಡುವ ಒಮ್ಮತದ ತೀರ್ಮಾನಕ್ಕೆ ಬರಲಾಯಿತು.

ಸಭೆಯ ಆರಂಭವಾಗುತ್ತಿದ್ದಂತೆ ಮಾತನಾಡಿದ ಮುಖಂಡರು, ಜಿಲ್ಲಾ ಕೇಂದ್ರದಲ್ಲಿ ಸಂಘಟನೆಯನ್ನು ಪ್ರಬಲಗೊಳಿಸುವ ಅಗತ್ಯತೆ ಬಹಳ ಇದೆ. ಆಯಾ ಗ್ರಾಮಗಳಲ್ಲಿ ಈಗಾಗಲೇ ಡಾ. ಬಿ.ಆರ್. ಅಂಬೇಡ್ಕರ್ ಸಂಘಗಳು ರಚನೆಗೊಂಡು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆ. ತಾಲೂಕು ಕೇಂದ್ರದಲ್ಲಿ ಎಲ್ಲರನ್ನು ಒಳಗೊಂಡಂತೆ ಒಂದು ಸಂಘಟನೆಯನ್ನು ರಚನೆ ಮಾಡಿ, ಒಂದೇ ವೇದಿಕೆಯಲ್ಲಿ ಹೋರಾಟ ಮಾಡಬೇಕಾಗಿದೆ. ಕ್ಲಿಷ್ಟಕರ ಸಮಸ್ಯೆಗಳು ಹಾಗೂ ಸಮುದಾಯಕ್ಕೆ ಅಪಚಾರ , ಅಪಮಾನಗಳು ನಡೆದಂತಹ ಸಂದರ್ಭದಲ್ಲಿ ಒಂದೇ ಧ್ವನಿಯಾಗಿ ಹೋರಾಟ ಮಾಡಿ, ನ್ಯಾಯ ಪಡೆದುಕೊಳ್ಳಬೇಕಾಗಿದೆ. ಈ ನಿಟ್ಟಿನಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಮಹಾಸಭಾ ರಚನೆ ಮಾಡುವುದು ಸೂಕ್ತ ಎಂಬ ಒಮ್ಮತ ಅಭಿಪ್ರಾಯ ವ್ಯಕ್ತವಾಯಿತು.

ದಲಿತ ಮುಖಂಡ ಸಿ.ಕೆ. ಮಂಜುನಾಥ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ನಮ್ಮ ಸಂಘಟನೆಗಳು ವಿಘಟನೆಗೊಂಡ ಪರಿಣಾಮ ಹಾಗೂ ಹೋರಾಟದ ಕಿಚ್ಚು ಕ್ಷೀಣವಾಗುತ್ತಿದ್ದು, ಹೀಗಾಗಿ ಅಂಬೇಡ್ಕರ್ ಅವರ ಪ್ರತಿಮೆ ಮತ್ತು ಫ್ಲೆಕ್ಸ್‌ಗಳಿಗೆ ಅಪಮಾನ, ಬುದ್ದ ವಿಗ್ರಹ ಧ್ವಂಸ ಹಾಗೂ ಆಯಾ ಗ್ರಾಮದಲ್ಲಿ ಸಮುದಾಯದವರ ಮೇಲೆ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು. ಜ್ಯೋತಿಗೌಡನಪುರ ಗ್ರಾಮದಲ್ಲಿ ನಡೆದಿರುವ ಅಂಬೇಡ್ಕರ್ ಹಾಗೂ ಬುದ್ದ ಪ್ರತಿಮೆಗಳ ವಿರೂಪ ಪ್ರಕರಣದ ಆರೋಪಿಗಳನ್ನು ಬಂಧಿಸುವ ಜೊತೆಗೆ ಅವರಿಗೆ ಮಹಾಪುರುಷರ ಭಾವಚಿತ್ರಗಳ ವಿರೂಪ ಮತ್ತು ಧ್ವಂಸ ಪ್ರಕರಣದಡಿಯಲ್ಲಿ ದೇಶ ದ್ರೋಹ ಪ್ರಕರಣ ದಾಖಲು ಮಾಡಿ ಜಾಮೀನು ಸಿಗದಂತೆ ಎಚ್ಚರ ವಹಿಸಬೇಕು. ಇಂಥ ಸೆಕ್ಷನ್‌ಗಳನ್ನು ಹಾಕಿ ಆರೋಫಿಗಳಿಗೆ ಕಠಿಣ ಶಿಕ್ಷೆ ಕೊಡಿಸಲು ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.

**ಮಹಾಸಭಾ ಅಧ್ಯಕ್ಷರಾಗಿ ಉಮೇಶ್ ಕುದರ್ ಆಯ್ಕೆ**

ಚಾಮರಾಜನಗರ ತಾಲೂಕು ಡಾ.ಬಿ.ಆರ್. ಅಂಬೇಡ್ಕರ್ ಮಹಾಸಭಾದ ಅಧ್ಯಕ್ಷರಾಗಿ ಉಮೇಶ್ ಕುದರ್, ಕಾರ್ಯಾಧ್ಯಕ್ಷರಾಗಿ ಸಿ.ಕೆ. ಮಂಜುನಾಥ್, ಪ್ರಧಾನ ಕಾರ್ಯದರ್ಶಿಯಾಗಿ ಗಣೇಶ್ ಪ್ರಸಾದ್, ಗೌರವ ಅಧ್ಯಕ್ಷರಾಗಿ ಸಿ.ಎಂ. ಕೃಷ್ಣಮೂರ್ತಿ, ಉಪಾಧ್ಯಕ್ಷರಾಗಿ ಕಾಗಲವಾಡಿ ಶಿವಸ್ವಾಮಿ, ಬಸವನಪುರ ಸಿದ್ದರಾಜು, ರೇಚಂಬಳ್ಳಿ ಕುಮಾರ್, ದೇವಲಾಪುರ ಶಿವಣ್ಣ, ಸಂಘಟನಾ ಕಾರ್ಯದರ್ಶಿಗಳಾಗಿ ರಾಮಸಮುದ್ರ ಬಾಬು, ಹೊಂಡರಬಾಳು ವಾಸು, ಸಿದ್ದಯ್ಯನಪುರ ಶಿವರಾಜು, ಸಹ ಕಾರ್ಯದರ್ಶಿಯಾಗಿ ಮೋಹನ್ ನಾಗು, ರಮೇಶ್, ನಾಗವಳ್ಳಿ ಪ್ರಶಾಂತ್, ನಲ್ಲೂರು ಮಾಧುರಾವ್, ಬಸವನಪುರ ನಾಗರಾಜು, ರಾಮಸಮುದ್ರ ಸುರೇಶ್, ಸಂಚಾಲಕರಾಗಿ ಕೆರೆಹಳ್ಳಿ ರಾಜಕುಮಾರ್, ಪತ್ರಿಕಾ ಸಲಹೆಗಾರರಾಗಿ ವಿ. ಗಂಗಾಧರ್, ಪ್ರಶಾಂತ್ ಹಾಗೂ ಗೌರವ ಸಲಹೆಗಾರರಾಗಿ ತಾಲೂಕಿನ ಎಲ್ಲಾ ಗಡಿ ಕಟ್ಟೆ ಮನೆ ಯಜಮಾನರುಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಸಭೆಯಲ್ಲಿ ತಾಲೂಕಿನ ಎಲ್ಲಾ ಗ್ರಾಮಗಳ ಮುಖಂಡರು ಹಾಜರಿದ್ದರು.

# ವಿದ್ಯುತ್ ಸ್ವರ್ಶಿಸಿ ಆನೆ ಸಾವು ಪ್ರಕರಣ, ಅಪರಾಧಿಗೆ ದಂಡ ವಿಧಿಸಿದ ನ್ಯಾಯಾಲಯ

ರಾಮನಗರ: ಅಕ್ರಮವಾಗಿ ವಿದ್ಯುತ್ ಬೇಲಿ ನಿರ್ಮಿಸಿಕೊಂಡಿದ್ದರಿಂದ ಆನೆ ಮರಿಯೊಂದು ಮೃತ ಪಟ್ಟಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಮೀನು ಮಾಲೀಕನ ಅಪರಾಧ ಸಾಭೀತಾದ ಹಿನ್ನೆಲೆಯಲ್ಲಿ ಇಲ್ಲಿನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಐದು ಸಾವಿರ ರೂ ದಂಡ ವಿಧಿಸಿ ತೀರ್ಪು ನೀಡಿದೆ.

ಜಿಲ್ಲೆಯ ಕನಕಪುರ ತಾಲ್ಲೂಕು ಸಾತನೂರು ಪೊಲೀಸ್ ಠಾಣಾ ವ್ಯಾಪ್ತಿಯ ಸಂಗಮ ವನ್ಯ ಜೀವಿ ವಲಯ ವ್ಯಾಪ್ತಿಯ ಉಯ್ಯಂಬಳ್ಳಿ ಗ್ರಾಮದಲ್ಲಿ ಶಿವಲಿಂಗೇಗೌಡ ಎಂಬುವರು ಬೆಳೆ ರಕ್ಷಿಸಿಕೊಳ್ಳಲು ತಮ್ಮ ಜಮೀನಿಗೆ ಅಕ್ರಮವಾಗಿ ವಿದ್ಯುತ್ ಬೇಲಿ ನಿರ್ಮಿಸಿಕೊಂಡಿದ್ದರು. ಕಳೆದ ಏಪ್ರಿಲ್ 9ರಂದರು ಆಹಾರ ಅರಸಿ ಬಂದ ಆನೆ ಮರಿಯೊಂದಕ್ಕೆ ವಿದ್ಯುತ್ ಸ್ಪರ್ಶಿಸಿ ಮೃತ ಪಟ್ಟಿತ್ತು. ಈ ಪ್ರಕರಣ ಸಾತನೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿತ್ತು.



ದೂರಿನ ತನಿಖೆ ಕೈಗೊಂಡ ಪೊಲೀಸರು ಆರೋಪಿಯ ವಿರುದ್ಧ ರಾಮನಗರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ದೋಷಾರೋಪಣೆ ಸಲ್ಲಿಸಿದ್ದರು. ನ್ಯಾಯಾಧೀಶರಾದ ಎಂ. ಹೆಚ್ ಅಣ್ಣಯ್ಯನವರ ರವರು, ವಿಚಾರಣೆ ನಡೆಸಿ, ಆರೋಪಿ ಉಯ್ಯಂಬಳ್ಳಿ ಗ್ರಾಮದ ಶಿವಲಿಂಗೇಗೌಡ (65) ಅವರ ವಿರುದ್ದದ ಆರೋಪ ಸಾಭೀತಾದ ಹಿನ್ನೆಲೆಯಲ್ಲಿ ಆರೋಪಿಗೆ 5,000 ರೂ ದಂಡ ವಿಧಿಸಿ ಆದೇಶಿಸಿರುತ್ತಾರೆ.

ಸದರಿ ಪ್ರಕರಣದಲ್ಲಿ ಸಾತನೂರು ಪೊಲೀಸ್ ಠಾಣೆಯ ಪಿ.ಎಸ್.ಐ ಮುರಳಿ ತನಿಖಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ್ದರು. ಸರ್ಕಾರಿ ವಿಶೇಷ ಅಭಿಯೋಕರಾದ ಕುಮಾರಿ ವಾಸವಿ ಅಂಗಡಿರವರು ವಾದವನ್ನು ಮಂಡಿಸಿದ್ದರು. ನ್ಯಾಯಾಲಯದ ವಿಚಾ ರಣಾ ಪ್ರಕ್ರಿಯೆಯಲ್ಲಿ ನಿಗಾವಹಿಸಿ, ಸಾಕ್ಷಿದಾರರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ಆರೋಪಿಗೆ ಶಿಕ್ಷೆ ಕೊಡಿಸುವಲ್ಲಿ, ಸಾತನೂರು ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಕೋರ್ಟ್ ಸಿಬ್ಬಂದಿಯಾದ ಮೆಹಬೂಬ್ ಸಾಬ್ ಮುಲ್ಲಾ ರವರು ಯಶಸ್ವಿಯಾಗಿದ್ದಾರೆ ಎಂದು ಪೊಲೀಸ್ ಪ್ರಕಟಣೆ ತಿಳಿಸಿದೆ.

# ಡಿ.19ಕ್ಕೆ ಶರ್ಮಿಷ್ಠೆ ನಾಟಕ

ಮೈಸೂರು: ಕರ್ನಾಟಕದ ಖ್ಯಾತ ರಂಗತಂಡ 'ರಂಗಸಂಪದ'ದ ವತಿಯಿಂದ ಹಿರಿಯ ರಂಗಭೂಮಿ ಕಲಾವಿದೆ ಉಮಾಶ್ರೀ ಅವರ ಅಭಿನಯದ 'ಶರ್ಮಿಷ್ಠೆ' ನಾಟಕದ 25ನೇ ಪ್ರದರ್ಶನವನ್ನು ಡಿ.19ರಂದು ಸಂಜೆ 6.30ಕ್ಕೆ ನಗರದ ರಾಮಕೃಷ್ಣ ನಗರದ ನಟನ ರಂಗ ಶಾಲೆಯಲ್ಲಿ ನಡೆಸಲಾಗುವುದು ಎಂದು ರಂಗತಂಡದ ಪದಾಧಿಕಾರಿ ಶಿವಲಿಂಗ ಪ್ರಸಾದ್ ತಿಳಿಸಿದರು.

ನಾಟಕವು ಹೊಸ ಪ್ರಯೋಗವಾಗಿದ್ದು, ಇದರ ಮೊದಲ ಪ್ರದರ್ಶನವನ್ನು ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ರಂಗಯಾಣದ ಸಹಕಾರೊದೊಂದಿಗೆ ಕಲಾಮಂದಿರ ಆವರಣದಲ್ಲಿ ಏ.19, 20 ರಂದು ಪ್ರದರ್ಶನ ಮಾಡಲಾಗಿತ್ತು. ಇಲ್ಲಿವರೆಗೆ 24 ಪ್ರದರ್ಶನ ಕಂಡಿರುವ ನಾಟಕದ 25ನೇ ಪ್ರದರ್ಶನವನ್ನು ಮೈಸೂರಿನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಈ ಶರ್ಮಿಷ್ಠೆ ನಾಟಕವನ್ನು ಡಾ.ಬೇಲೂರು ರಘುನಂದನ್ ಅವರು ರಚಿಸಿದ್ದು, ಚಿದಂಬರ ರಾವ್ ಜಂಬೆ ನಿರ್ದೇಶನದ ಹೊಣೆ ಹೊತ್ತಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಕಲಾಭಿಮಾನಿಗಳು ನಾಟಕವನ್ನು ವೀಕ್ಷಿಸಬೇಕೆಂದು ಮನವಿ ಮಾಡಿದರು. ಪದಾಧಿಕಾರಿಗಳಾದ ವಿ.ಎಂ ನಾಗೇಶ್, ಅಪ್ಪಯ್ಯ, ಅಕ್ಷರ, ರಚನ ಇದ್ದರು.



**ಅಪರ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಧೀಶ ಅರ್. ಬಿ ಗಿರೀಶ್ ಹೇಳಿಕೆ**

# ನೆಮ್ಮದಿಯಿಂದ ಬಾಳಲು ಮಾನವ ಹಕ್ಕುಗಳು ಪಾತ್ರ ಹೆಚ್ಚಿದೆ

ಗುಂಡ್ಲುಪೇಟೆ. ಹುಟ್ಟತ್ತಾ ಎಲ್ಲರೂ ಸಮಾನರಾಗಿರುತ್ತಾರೆ. ಆದರೆ ಬೆಳೆಯುತ್ತಾ ಸಮಾಜದಲ್ಲಿರುವ ಅಸಮಾನತೆಯಲ್ಲಿ ಮುಳುಗುತ್ತಾರೆ. ಪ್ರತಿಯೊಬ್ಬರೂ ನೆಮ್ಮದಿಯಿಂದ ಬಾಳಲು ಮಾನವ ಹಕ್ಕುಗಳು ಪಾತ್ರ ಹೆಚ್ಚಿದೆ. ಎಂದು ಅಪರ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಧೀಶ ಅರ್. ಬಿ ಗಿರೀಶ್ ಹೇಳಿದರು

ಪಟ್ಟಣದ ಜೆ.ಎಸ್.ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ತಾಲೂಕು ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ ಹಾಗೂ ಜೆ.ಎಸ್.ಎಸ್ ಕಾಲೇಜು ಸಂಯುಕ್ತ ಆಶ್ರಯದಲ್ಲಿ ವಿಶ್ವ ಮಾನವ ಹಕ್ಕುಗಳ ದಿನಾಚರಣೆ ಅಂಗವಾಗಿ ನಡೆದ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಮಾಜದಲ್ಲಿ ಜನಸಾಮಾನ್ಯರು ಉತ್ತಮ ಜೀವನ ನಡೆಸಲು ಮಾನವ ಹಕ್ಕುಗಳು ಅತ್ಯಗತ್ಯ. ಆದ್ದರಿಂದ ಇತರರ ಮಾನವ ಹಕ್ಕುಗಳು ಉಲ್ಲಂಘನೆಯಾಗದಂತೆ ತಡೆದು ರಕ್ಷಣೆ ನೀಡುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದರು



ಮಾನವ ಹಕ್ಕುಗಳನ್ನು ಸಂರಕ್ಷಿಸಲು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಹಲವಾರು ಕಾಯಿದೆಗಳನ್ನು ಜಾರಿಗೆ ತರಲಾಗಿದೆ.ಮಾನವ ಹಕ್ಕುಗಳ ಉಲ್ಲಂಘನೆ ಯಾಗದಂತೆ ಆಯೋಗ ಕಾರ್ಯ ನಿರ್ವಹಿಸುತ್ತದೆ.ಉದಾಹರಣೆಗೆ ಚುನಾವಣೆಯಲ್ಲಿ ಸೋಲುವ ಅಭ್ಯರ್ಥಿಗೆ ಬೇರೆ ಯಾವುದಾದರೂ ಕಾರಣ ನೀಡಿ ಮತ ಚಲಾಯಿಸುವದನ್ನು ನಿರಾಕರಿಸಿದರೆ ಆತ ನ್ಯಾಯಲಯದ ಮೊರೆ ಹೋಗಿ ಮತದಾನದ ಹಕ್ಕನ್ನು ಪಡೆಯಬಹುದು ಎಂದು ತಿಳಿಸಿದರು.

ಈ ಹಿಂದೆ ಯಾವುದಾದರೂ ವ್ಯಕ್ತಿಗಳ ಮೇಲೆ ಪೊಲೀಸರಿಗೆ ದೂರು ನೀಡಿದರೆ ಆರೋಪಿತನನ್ನು ಬಂಧಿಸಲಾಗುತಿತ್ತು ಆದರೆ ಇವಾಗ ಪರಿಸ್ಥಿತಿ ಹಾಗಿಲ್ಲ ಆರೋಪಿಯನ್ನು ಬಂಧಿಸುವ ಮುನ್ನಾ ಆತನಿಗೆ ತನಿಖೆಗೆ ಹಾಜರಾಗುವಂತೆ ನೋಟಿಸ್ ನೀಡಿ ತನಿಖೆಗೆ ಸಹಕರಿಸದೆ ಇದ್ದಾಗ ಆತನನ್ನು ಬಂಧಿಸಬಹುದು ಇದು ಉಲ್ಲಂಘನೆಯಾದಾಗ ಮಾನವ ಹಕ್ಕುಗಳ ಆಯೋಗ ಅವರಿಗೆ ರಕ್ಷಣೆ ನೀಡುತ್ತದೆ ಎಂದರು.

ಸಹಾಯಕ ಸರ್ಕಾರಿ ಅಭಿಯೋಜಕ ರೇವಣ್ಣ ಮಾತನಾಡಿ, ಅಮೇರಿಕಾ ಸೇರಿದಂತೆ ಜಗತ್ತಿನ ಇನ್ನಿತರ ರಾಷ್ಟ್ರಗಳಲ್ಲಿ ಕರಿಯ–ಬಿಳಿಯ ಎಂಬ ಅಸಮಾನತೆ ಉಂಟಾಗಿತ್ತು.ಕರಿಯ ಸಮುದಾಯದವರ ತಮ್ಮ ಹಕ್ಕುಗಳನ್ನ ಪಡೆದುಕೊಳ್ಳಲು ಹೋರಾಟ ಮಾಡಿದರ ಫಲವಾಗಿ ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ರಚನೆಯಾಯಿತು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತಾಲೂಕು ವಕೀಲರ ಸಂಘದ ಕಾರ್ಯದರ್ಶಿ ಜವರಾಜು,ವಕೀಲ ಅರವಿಂದ್, ಜೆ.ಎಸ್.ಎಸ್ ಕಲಾ ಮತ್ತು ವಾಣಿಜ್ಯ ಪದವಿ ಕಾಲೇಜಿನ ಪ್ರಾಂಶುಪಾಲೆ ಡಾ.ಮಹದೇವಮ್ಮ, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಮಲ್ಲಪ್ಪ ಉಪಸ್ಥಿತರಿದ್ದರು.

**ಕೇರಳ ರಾಜ್ಯದ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನಲೆ**

## ಗಡಿಯಲ್ಲಿ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ

ಚಾಮರಾಜನಗರ: ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಕೇರಳ ರಾಜ್ಯದ ಗಡಿಗೆ ಹೊಂದಿಕೊಂಡಿರುವ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಗಡಿ ಪ್ರದೇಶದ 3 ಕಿ.ಮೀ. ವ್ಯಾಪ್ತಿಯಲ್ಲಿ ಡಿಸೆಂಬರ್ 9ರ ಸಂಜೆ 6 ಗಂಟೆಯಿಂದ ಡಿಸೆಂಬರ್ 11ರ ಸಂಜೆ 6 ಗಂಟೆಯವರೆಗೆ ಹಾಗೂ ಡಿಸೆಂಬರ್ 13ರ ಮತ ಎಣಿಕೆ ಹಿನ್ನೆಲೆಯಲ್ಲಿ ಡಿಸೆಂಬರ್ 12ರ ಮಧ್ಯರಾತ್ರಿಯಿಂದ ಡಿಸೆಂಬರ್ 13ರ ಮಧ್ಯರಾತ್ರಿವರೆಗೆ ಯಾವುದೇ ರೀತಿಯ ಮದ್ಯ ಮಾರಾಟ, ಅಕ್ರಮ ಸಾಗಾಣಿಕೆ, ದಾಸ್ತಾನು ನಿಷೇಧಿಸಿ ಒಣದಿನ ಎಂದು ಘೋಷಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

## ಹುಲಿಯನ್ನು ಹಿಮ್ಮೆಟ್ಟಿಸಿದ ರೈತ

ಗುಂಡ್ಲುಪೇಟೆ: ತಾಲ್ಲೂಕಿನ ಕುಂದಕೆರೆ ಗ್ರಾಮದ ರೈತ ಮಲಿಯಪ್ಪ ಬಿನ್ ಮಹದೇವಪ್ಪ 62 ವರ್ಷವ ಜಮೀನಿನಲ್ಲಿ ಜಾನುವಾರು ಮೇಯಿಸುವ ಸಂದರ್ಭದಲ್ಲಿ ಹಸುಗಳ ಮೇಲೆ ದಾಳಿ ನಡೆಸಲು ಹುಲಿ ಮುಗಿಬಿದ್ದಾಗ ಹುಲಿಯನ್ನು ಹಿಮ್ಮೆಟ್ಟಿಸಲು ಯತ್ನಿಸಿದ್ದಾರೆ ಆಗ ಹುಲಿ ಇವರ ಮೇಲೆ ದಾಳಿಗೆ ಮುಂದಾಗಿದೆ ತಕ್ಷಣ ರೈತ ಮಲಿಯಪ್ಪ ನೆಲಕ್ಕೆ ಕುಳಿತ್ತಿದ್ದಾರೆ ಹಾಗ ಹುಲಿಯ ಕಾಲುಗಳು ಕಣ್ಣಿನ ಸಮೀಪ ಮತ್ತು ತಲೆಗೆ ತಾಕಿದೆ ತಕ್ಷಣ ರೈತ ಓಡಿ ಗ್ರಾಮದ ಕಡೆ ಬಂದು ಪ್ರಾಣ ಉಳಿಸಿಕೊಂಡಿದ್ದಾರೆ.



ಹಸುಗಳ ಮೇಲೆ ದಾಳಿ ಮಾಡಲು ಹುಲಿ ನೆಗೆದಾಗ ಹುಲಿ ಕಾಲಿನಿಂದ ರೈತ ಮಲಿಯಪ್ಪ ತಲೆಗೆ ಗೀರುವ ಮೂಲಕ ಹಾರಿ ಓಡಿಹೋಗಿದ್ದೆ ಕುಂದಕೆರೆ ಭಾಗದಲ್ಲಿ ಹುಲಿ ಇರುವ ವಿಚಾರವಾಗಿ ಅನೇಕ ಬಾರಿ ಕೂಂಬಿಂಗ್ ನಡೆಸುವಂತೆ ಹೇಳಿದ್ದರು ಅರಣ್ಯ ಇಲಾಖೆ ಹುಲಿ ಸೆರೆ ಹಿಡಿಯುತ್ತಿಲ್ಲ ಅಗಾಗಿ ರೈತಾಪಿ ವರ್ಗ ಜಮೀನುಗಳಲ್ಲಿ ಕೆಲಸ ಮಾಡಲು ಭಯಭೀತರಾಗಿದ್ದು ಅರಣ್ಯ ಇಲಾಖೆ ಕೂಂಬಿಂಗ್ ನಡೆಸಿ ಹುಲಿ ಚಿರತೆಗಳ ಸೆರೆಗೆ ಬೋನ್ ಇರಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

**ಎರಡು ಗಂಟೆಯಾದರು ಬಾರದ ಆಂಬುಲೆನ್ಸ್, ಅರಣ್ಯ ಇಲಾಖೆ ಅಧಿಕಾರಿಗಳು**

ಹುಲಿ ದಾಳಿಯಾಗಿ ಎರಡು ಗಂಟೆಯಾಗಿದೆ ಎಂದು ಕರೆ ಮಾಡಿದರು ಅರಣ್ಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿಲ್ಲ ಅಲ್ಲದೆ ಎರಡು ಗಂಟೆಯಾದರೂ ಅಂಬುಲೆನ್ಸ್ ಬಂದಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ಹೊರಹಾಕಿದರು.

## ರಾಗಿ ಯಂತ್ರಕ್ಕೆ ಸಿಲುಕಿ ತುಂಡಾದ ವೃದ್ಧೆ ಎಡಗೈ

ಚಾಮರಾಜನಗರ, ರಾಗಿ ಯಂತ್ರಕ್ಕೆ ಸಿಲುಕಿ ವೃದ್ಧೆಯೊಬ್ಬರ ಎಡಗೈ ಸಂಪೂರ್ಣವಾಗಿ ತುಂಡಾದ ಘಟನೆ ಮಂಗಳವಾರ ಸಂಜೆ ಕೊಳ್ಳೇಗಾಲ ತಾಲೂಕಿನ ಸತ್ತೇಗಾಲ ಗ್ರಾಮದ ಸಮೀಪ ಜರುಗಿದೆ. ಮುಡಿಗುಂಡ ಗ್ರಾಮದ ನಾಗಮ್ಮ ಕೈ ಕಳೆದುಕೊಂಡ ವೃದ್ಧೆ.

ಕೆಲಸ ನಿರ್ವಹಿಸುತ್ತಿದ್ದಾಗ ರಾಗಿ ಯಂತ್ರಕ್ಕೆ ಕೈ ಸಿಲುಕಿ ಈ ಅವಘಡ ಉಂಟಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ತುಂಡಾದ ಕೈ ಸಮೇತ ಕೊಳ್ಳೇಗಾಲ ಉಪವಿಭಾಗ ಆಸ್ಪತ್ರೆಗೆ ವೃದ್ಧೆಯನ್ನು ತಕ್ಷಣ ಕರೆತರಲಾಗಿದ್ದು, ಪ್ರಾಥಮಿಕ ಚಿಕಿತ್ಸೆ ಕೊಡಿಸಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಚಾಮರಾಜನಗರದ ಸಿಮ್ಸ್?ಗೆ ದಾಖಲಿಸಲಾಗಿದೆ. ತುಂಡಾದ ಕೈ ಮರುಜೋಡಣೆ ಮಾಡಲು ಕಷ್ಟ ಸಾಧ್ಯ ಎಂದು ವೈದ್ಯರು ಮಾಹಿತಿ ನೀಡಿದ್ದಾರೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಡಿ.26ಕ್ಕೆ ಅಹಿಂದ ಒಕ್ಕೂಟದ ಕನ್ನಡ ರಾಜ್ಯೋತ್ಸವ

ಮೈಸೂರು: ಕರ್ನಾಟಕ ರಾಜ್ಯ ಅಹಿಂದ ಒಕ್ಕೂಟ ವತಿಯಿಂದ ಡಿ.26ರಂದು ಕನ್ನಡ ನಾಡು, ನುಡಿ ನೆಲ-ಜಲದ ಆಶೋತ್ತರಗಳಿಗೆ ಸ್ಪಂಧಿಸಲು ಒಕ್ಕೂಟವು ಮೊದಲ ವರ್ಷದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನಗರದ ಪುರಭವನದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ರಾಜ್ಯಾಧ್ಯಕ್ಷ ದ್ಯಾವಪ್ಪನಾಯಕ ತಿಳಿಸಿದರು.

ನಗರದ ಜಿಲ್ಲಾ ಪತ್ರಕರ್ತ ಭವನದ ಸುದ್ಧಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಒಕ್ಕೂಟ ಸ್ಥಾಪನೆ ಮೊದಲ ವರ್ಷದ ದೊಡ್ಡ ಕಾರ್ಯಕ್ರಮವನ್ನಾಗಿ ಕನ್ನಡ ರಾಜ್ಯೋತ್ಸವವನ್ನು ಆಚರಿಸುತಿದ್ದು, ಕಾರ್ಯಕ್ರಮದ ಅಂಗವಾಗಿ ಹಲವಾರು ಸ್ಪರ್ಧೆಗಳು, ವಿವಿಧ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಕಾಂರ್?ಕ್ರಮದ ಪ್ರ?ಂಕ್ತ ನಾಡಿನ ಜನತೆಗೆ ಸೇವೆ ಸಲ್ಲಿಸುತ್ತಿರುವ 100 ಜನ ಅಹಿಂದ ವರ್ಗದ ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ ಹಾಗೂ ಅತ್ಯಂತ ಕಡುಬಡತನದ ಜೀವನ ನಡೆಸುತ್ತಿರುವ ಮನೆ ಕೆಲಸದ 100 ಜನ ಬಡ ಮಹಿಳೆಂರಿಗೆ ಗೌರವಿಸುವ ನಿಟ್ಟಿನಲ್ಲಿ ಸೀರೆ ವಿತರಿಸಿ, ಅವರಲ್ಲಿ ಆತ್ಮ ಸ್ಥೆಂರ್ ತುಂಬವ ಕಾಂರ್‌ಕ್ಕೆ ಚಾಲನೆ ನೀಡಲಾಗುತ್ತದೆ ಎಂದು ಹೇಳಿದರು.




**ವಿದ್ಯಾರ್ಥಿಗಳಿಗೆ ಸ್ಪರ್ಧೆ**

ವಿದ್ಯಾರ್ಥಿಗಳಿಗೆ ಕನ್ನಡ ನಾಡು ನುಡಿ?ಂ ಬಗ್ಗೆ ಸಾಮಾನ್ಯ ಜ್ಞಾನ ವೃದ್ಧಿಸಿಕೊಳ್ಳಲು ಪ್ರಬಂಧ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಮಹಿಳೆ?ಂರಿಗೆ ಮ್ಯೂಜಿಕಲ್ ಛೇರ್ ಸ್ಪರ್ಧೆ ಮತ್ತು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ. ಅಂದು ಬೆಳಿಗ್ಗೆ 8.30 ಗಂಟೆಗೆ ಗಣ್ಯರಿಂದ ಕನ್ನಡ ಧ್ವಜಾರೋಹಣ ವಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. ಮಧ್ಯಾಹ್ನ 12 ರ ವೇದಿಕೆ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಗಣ್ಯರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದರು.

ಒಟ್ಟು 35ಕ್ಕೂ ಹೆಚ್ಚಿನ ಜಾತಿಯ ಹಲವಾರು ಸಮಾನ ಮನಸ್ಕರು ಸೇರಿ ಕರ್ನಾಟಕ ರಾಜ್ಯ ಅಹಿಂದ ಒಕ್ಕೂಟವನ್ನು ಸ್ಥಾಪಿಸಿದ್ದು, ಒಕ್ಕೂಟದ ಈ ಮಹತ್ವ ಪೂರ್ಣ ಕಾರ್ಯಕ್ರಮಕ್ಕೆ ಮೈಸೂರಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕೈ ಜೋಡಿಸಬೇಕೆಂದು ಮನವಿ ಮಾಡಿದರು. ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಲಿಚ್ಚಿಸುವವ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಮೊ.6364156593, 8123444656 ಸಂಪರ್ಕಿಸಬಹುದು. ರಾಜ್ಯ ಕಾರ್ಯದರ್ಶಿ ಎಸ್.ಮಂಜುನಾಥ್, ಖಜಾಂಚಿ ಕೇಶವ, ಮೈಸೂರು ಜಿಲ್ಲಾಧ್ಯಕ್ಷ ಕೆ.ವಿ ರಾಜು, ಉಪಾಧ್ಯಕ್ಷ ಡಾ.ಶಾಂತರಾಜೇ ಅರಸ್, ರಾಜ್ಯ ಮಹಿಳಾ ಅಧ್ಯಕ್ಷೆ ಎಂ.ಎಸ್ ಗೀತಾ, ಕಾರ್ಯದರ್ಶಿ ಮೀನಾಕ್ಷಿ, ಗೌರವ ಸಲಹೆಗಾರರಾದ ನಾಗಮ್ಮ, ರಾಜ್ಯ ಸಂಘಟನಾ ಕಾರ್ಯದರ್ಶಿ ಮಹೇಶ್, ನಿರ್ದೇಶಕರಾದ ಎಂ.ಮುತ್ತುರಾಜು, ಪಲ್ಲವಿ ಮತ್ತಿತರರಿದ್ದರು.

# ಬೆಳೆಯುವ ಮಕ್ಕಳ ಮನಸು ಕಲಿಕೆಗೆ ಸ್ವತಂತ್ರ್ಯವಾಗಿರಲಿ

### ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ ಕರೆ | ಕಲಾ ಪ್ರತಿಭೋತ್ಸವ 2025-26

ಮೈಸೂರು: ಮಕ್ಕಳು ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಅಭಿವೃದ್ಧಿಯಾಗಲು ಪ್ರೋತ್ಸಾಹ ಅಗತ್ಯ.ಮಕ್ಕಳ ಮನಸ್ಸು ಸೂಕ್ಷ್ಮವಾಗಿದ್ದು ಮನಸ್ಸು ಸುಂದರವಾಗಿರುತ್ತದೆ. ಗೆಲುವಿನ ಹಾದಿಯಲ್ಲಿ ಸಾಗುವ ರೀತಿ ಅವರಿಗೆ ಸ್ವತಂತ್ರ್ಯ ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಸ್ವಾಮಿ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಕರ್ನಾಟಕ ಕಲಾಮಂದಿರ ಆವರಣದಲ್ಲಿರುವ ಕಿರುರಂಗಮಂದಿರದಲ್ಲಿ ಆಯೋಜಿಸಲಾಗಿದ್ದ, ಕಲಾ ಪ್ರತಿಭೋತ್ಸವ 2025-26 ಬಾಲ ಪ್ರತಿಭೆ, ಕಿಶೋರ ಪ್ರತಿಭೆ ಹಾಗೂ ಯುವ ಪ್ರತಿಭೆಗಳಿಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪಾಲಕರು ತಮ್ಮ ಮಕ್ಕಳ ಬಗ್ಗೆ ಮತ್ತು ಅವರ ಜ್ಞಾನ ತಿಳುವಳಿಕೆ ಮಟ್ಟ ಇವುಗಳ ಬಗ್ಗೆ ಯಾವಾ ಗಲೂ ಸಕಾರಾತ್ಮಕ ಭಾವನೆ ಹಾಗೂ ಒಳ್ಳೆಯ ದೃಷ್ಟಿಕೋನ ಹೊಂದಿರಬೇಕು. ಮಗುವಿನ ಮನಸ್ಸು ಆಗ ತಾನೇ ಅರಳುವ ಸಂದರ್ಭದಲ್ಲಿಯೇ ಶಾಲೆಗೆ ಸೇರಿಸುತ್ತೇವೆ. ಶಾಲೆ ಹಾಗೂ ಮನೆ ಎರಡರಲ್ಲೂ ಮಗುವನ್ನು ಪ್ರೋತ್ಸಾಹಿಸಿದರೆ ಮಕ್ಕಳು ಸಮರ್ಥ ಪ್ರಜೆಯಾಗಿ ಹೊರಹೊಮ್ಮುತ್ತಾರೆ. ಮಕ್ಕಳು ಸೋಲನ್ನು ಸವಾಲಾಗಿ ಸ್ವೀಕರಿಸಿ ಗೆಲ್ಲುವ ಮನೋಸ್ಥೈರ್ಯ ತುಂಬುವುದು ಪೋಷಕರ ಕರ್ತವ್ಯವಾಗಿದೆ ಎಂದರು.

ಈ ಕಲಾ ಪ್ರತಿಭೋತ್ಸವ ಕಾರ್ಯಕಮವು ಮ. ಮಕ್ಕಳು ಮತ್ತು ಯುವ ಜನತೆಯನ್ನು ಸಾಂಸ್ಕೃತಿಕ ಕ್ಷೇತ್ರದ ಕಡೆಗೆ ಬೆಳೆಯುವ ಯುವ ಕಲಾ ಪ್ರತಿಭೋತ್ಸವ ಕಾರ್ಯಕ್ರಮಗಳು ಹೆಚ್ಚು, ಹೆಚ್ಚು ನಡೆಯಬೇಕು ಎಂದರು.




ಮಕ್ಕಳಲ್ಲಿರುವ ಧನಾತ್ಮಕ ಅಂಶ ಗುರುತಿಸಿ ಅವರನ್ನು ಪ್ರೋತ್ಸಾಹಿಸಿದಾಗ ಅವರ ಪ್ರದರ್ಶನ ಶಕ್ತಿ ಉತ್ತಮವಾಗುತ್ತದೆ. ಅದರ ಬದಲು ಮಕ್ಕಳನ್ನು ಕಡೆಗಣಿಸುವುದು, ಹೀಯಾಳಿಸುವುದು, ಬೇರೆಯವರೊಂದಿಗೆ ಹೋಲಿಸುವುದು ಮಾಡಿದಾಗ ಅವರು ಬೇರೆ ರೀತಿ ವರ್ತಿಸುತ್ತಾರೆ ಎಂದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಡಿ.ಉದಯ್ ಕುಮಾರ್ ಮಾತನಾಡಿ ಮಕ್ಕಳೊಂದಿಗೆ ಸಂವಾದ ನಡೆಸಬೇಕು. ಅವರಲ್ಲಿ ಪಠ್ಯದ ಕುರಿತು ಆಸಕ್ತಿ ಹೆಚ್ಚಿಸಬೇಕು ಅವರ ಮನಸ್ಸನ್ನು ತಮ್ಮ ಬೋಧನೆಯತ್ತ ತಿರುಗಿಸಬೇಕು. ಅದು ಶಿಕ್ಷಕರಲ್ಲಿ ಮಾತ್ರ ಇರುವ ಕಲೆಯಾಗಿದ್ದು, ಶಿಕ್ಷಕರಲ್ಲಿ ಬದ್ಧತೆ ಅಗತ್ಯವಿದೆ. ಮಕ್ಕಳನ್ನು ಪಠ್ಯಕ್ಕೆ ಸೀಮಿತ ಮಾಡದೇ ಅವರಲ್ಲಿನ ಪ್ರತಿಭೆ ಗುರುತಿಸಿ ಹೊರತರುವುದು ಶಿಕ್ಷಣದ ಸಮಗ್ರ ಭಾಗವಾಗಿ ಪ್ರತಿಭಾ ಕಾರಂಜಿ ಹೆಚ್ಚು ಸೂಕ್ತ ಎಂದರು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ ಸುದರ್ಶನ್, ತೀರ್ಪುಗಾರರಾದ ಶ್ರೀವಾಣಿ, ಲಕ್ಷ್ಮಿ, ರಮ್ಯಾ, ಅನಿತಾ, ಆನಂದ್ ಕುಮಾರ್, ರಮೇಶ್ ಚಂದ್ರ, ಎ.ಪಿ.ಚಂದ್ರಶೇಖರ್ ಮತ್ತಿತರು ಉಪಸ್ಥಿತರಿದ್ದರು

## ಕೊಲೆ ಯತ್ನ: ದಂಡ ಸಹಿತ ಕಾರಾಗೃಹ ಶಿಕ್ಷೆ

ರಾಮನಗರ: ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸ್ ವ್ಯಾಪ್ತಿಯ ತಾವರೆಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮಹಿಳೆಯೊಬ್ಬರನ್ನು ಕೊಲೆ ಮಾಡಲು ಯತ್ನಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯ ಅಪರಾಧ ಸಾಭೀತಾದ ಹಿನ್ನೆಲೆಯಲ್ಲಿ ಇಲ್ಲಿನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 5 ವರ್ಷ ಕಾರಾಗೃಹ ಶಿಕ್ಷೆ ಮತ್ತು 21 ಸಾವಿರ ರೂ ದಂಡ ವಿಧಿಸಿ ತೀರ್ಪು ನೀಡಿದೆ.

2015ರ ನವೆಂಬರ್ 23ರ ಸಂಜೆ ತಾವರೆಕೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಚನ್ನೇನಹಳ್ಳಿ ಗ್ರಾಮದಲ್ಲಿ ವಾಸವಿದ್ದ ದೂರುದಾರರೊಬ್ಬರನ್ನು ಕೊಲೆ ಮಾಡುವ ಉದ್ದೇಶದಲ್ಲಿ ಗಂಗಮುತ್ತಯ್ಯ ಅಲಿಯಾಸ್ ಗಂಗರಾಜು ಆತನ ಸಹಚರರೊಂದಿಗೆ ಮಚ್ಚಿನಿಂದ ಮಾರಣಾಂತಿಕ ಹಲ್ಲೆ ನಡೆಸಿ ಪರಾರಿಯಾಗಿದ್ದನು. ಗಾಯಾಳುವಿನ ಹೇಳಿಕೆ ಮೇರೆಗೆ ತಾವರೆಕೆರೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸಿದ್ದರು. ಆರೋಪಿಯ ವಿರುದ್ಧ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ನ್ಯಾಯಾಧೀಶರಾದ ಎಂ.ಹೆಚ್ ಅಣ್ಣಯ್ಯನವರರವರು, ವಿಚಾರಣೆ ನಡೆಸಿ, ಮಾಗಡಿ ತಾಲ್ಲೂಕು ಮಾಡಬಾಳ್ ಹೋಬಳಿ ನಿವಾಸಿ ಆರೋಪಿ ಗಂಗಮುತ್ತಯ್ಯ @ ಗಂಗರಾಜು, 28 ವರ್ಷ ಇವರ ವಿರುದ್ದದ ಆರೋಪ ಸಾಭೀತಾದ ಹಿನ್ನೆಲೆಯಲ್ಲಿ ಆರೋಪಿಗೆ 5 ವರ್ಷ ಕಾರಗೃಹ ಶಿಕ್ಷೆ ಮತ್ತು 21,000 ರೂ ದಂಡ ವಿಧಿಸಿ ಆದೇಶಿಸಿರುತ್ತಾರೆ.

ಸದರಿ ಪ್ರಕರಣದಲ್ಲಿ ತಾವರೆಕೆರೆ ಪೊಲೀಸ್ ಠಾಣೆಯ ಪಿ.ಎಸ್.ಐ ರವಿ ಅವರು ತನಿಖಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದರು. ಸರ್ಕಾರಿ ವಿಶೇಷ ಅಭಿಯೋಕರಾದ ಕುಮಾರಿ ವಾಸವಿ ಅಂಗಡಿರವರು ವಾದವನ್ನು ಮಂಡಿಸಿದ್ದರು. ನ್ಯಾಯಾಲಯದ ವಿಚಾರಣಾ ಪ್ರಕ್ರಿಯೆಯಲ್ಲಿ ನಿಗಾವಹಿಸಿ, ಸಾಕ್ಷಿದಾರರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ಆರೋಪಿಗೆ ಶಿಕ್ಷೆ ಕೊಡಿಸುವಲ್ಲಿ, ತಾವರೆಕೆರೆ ಪೊಲೀಸ್ ಠಾಣೆಯ ಅಧಿಕಾರಿಗಳು & ಸಿಬ್ಬಂದಿ ಹಾಗೂ ಕೋರ್ಟ್ ಸಿಬ್ಬಂದಿಯಾದ ಶಿವರಾಜ್ ಕುಮಾರ್, ಬಾಬು ನಾಯಕ್ ಯಶಸ್ವಿಯಾಗಿದ್ದಾರೆ

# ಡಿ.13ಕ್ಕೆ ವಿಶ್ವಾಮಿತ್ರ ಪತಿಭಾ ಪುರಸ್ಕಾರ

ಮೈಸೂರು: ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ 2025ನೇ ಸಾಲಿನಲ್ಲಿ ಹೆಚ್ಚು ಅಂಕ ಪಡೆದ ಸಮುದಾಯದ ಎಸ್ಎಸ್ಎಲ್‌ಸಿಯ 98 ವಿದ್ಯಾರ್ಥಿಗಳಿಗೆ ಡಿ.13ರಂದು 'ವಿಶ್ವಾಮಿತ್ರ ಪ್ರತಿಭಾ ಪುರಸ್ಕಾರ' ನೀಡಿ ಸನ್ಮಾನಿಸಲಾಗುವುದು ಎಂದು ಮಂಡಳಿ ಅಧ್ಯಕ್ಷ ಅಸಗೋಡು ಜಯಸಿಂಹ ತಿಳಿಸಿದರು.

ನಗರದ ಜಿಲ್ಲಾ ಪತ್ರಕರ್ತ ಭವನದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಕಾರ್ಯಕ್ರಮವು ಬೆಳಿಗ್ಗೆ 10.40ಕ್ಕೆ ನಗರದ ಕೃಷ್ಣಮೂರ್ತಿಪುರಂನ ಶಾರದ ವಿಲಾಸ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಅದರ ಭಾಗವಾಗಿ ಮೈಸೂರು ಮತ್ತು ಬೆಂಗಳೂರು ಭಾಗದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುತ್ತದೆ. ಅಂದು ಕಾಂರ್?ಕ್ರಮದ ಉದ್ಘಾಟನೆ?ಂನ್ನು ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ನೆರವೇರಿಸುತ್ತಾರೆ.

ವಿಪ್ರ-ಸ್ವ ಉದ್ಯಮ ನೇರ ಸಾಲ ಯೋಜನೆ ಫಲಾನುಭವಿಗಳಿಗೆ ಮಂಜೂರಾತಿ ಪತ್ರ ವಿತರಣೆ ಕರ್ನಾಟಕ ಸರ್ಕಾರದ ವಾಣ್ಯ ಕಂದಾ?ಂ ಸಚಿವ ಕೃಷ್ಣಬೈರೇಗೌಡ ಮಾಡಲಿದ್ದಾರೆ. ಪ್ರತಿಭಾ ಪುರಸ್ಕಾರ ಜಿಲ್ಲಾ ಉಸ್ತುವಾರಿ ಸಚಿವ ಮಹದೇವಪ್ಪ ನೀಡಲಿದ್ದಾರೆ ಹಾಗೂ ಶಾಸಕ ಟಿ.ಎಸ್ ಶ್ರೀವತ್ಸ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.



ಮುಖ್ಯ ಅತಿಥಿಗಳಾಗಿ ಶಾಸಕರಾದ ಜಿ.ಟಿ.ದೇವೇಗೌಡ, ತನ್ನೀರ್ ಸೇಠ್, ಕೆ. ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ಧರಾಮಯ್ಯ, ಮುಡಾ ಮಾಜಿ ಅಧ್ಯಕ್ಷ ಎಚ್.ವಿ ರಾಜೀವ್, ಮೈಸೂರು ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಡಿ.ಟಿ. ಪ್ರಕಾಶ್, ವಿಪ್ರ ಮಹಿಳಾ ಸಂಘದ ಅಧ್ಯಕ್ಷೆ ಡಾ.ಕೆ.ವಿ. ಲಕ್ಷ್ಮೀದೇವಿ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಸಂಘಟನಾ ಕಾರ್ಯದರ್ಶಿಗಳಾದ ನಂ.ಶ್ರೀಕಂಠ ಕುಮಾರ್ ರನ್ನು ಸೇರಿದಂತೆ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ನಿರ್ದೇಶಕ ಉಪಸ್ಥಿತರಿರುತ್ತಾರೆ ಎಂದು ಹೇಳಿದರು.

ಮುಡಾ ಮಾಜಿ ಅಧ್ಯಕ್ಷ ಎಚ್.ವಿ ರಾಜೀವ್, ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಡಿ.ಟಿ. ಪ್ರಕಾಶ್, ವಿಪ್ರ ಮಹಿಳಾ ಸಂಘದ ಅಧ್ಯಕ್ಷೆ ಡಾ.ಕೆ.ವಿ. ಲಕ್ಷ್ಮೀದೇವಿ, ಮುಖಂಡರಾದ ಕೆ.ನಾರಾಯಣ ಮೂರ್ತಿ, ಬೆಳ್ಳೂರು ಶ್ರೀಧರ್, ಡಾ.ಸುಜಾತ ಹಾಜರಿದ್ದರು.

# ಹಳೇ ಡಿಸಿ ಕಚೇರಿಗೆ ಪಾಲಿಕೆ ಕಚೇರಿ ಸ್ಥಳಾಂತರಿಸಿ

ಮೈಸೂರು: ರಾಜ್ಯ ಸರ್ಕಾರ ಮೈಸೂರು ಮಹಾನಗರ ಪಾಲಿಕೆಯನ್ನು ಗ್ರೇಡ್-1 ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿಸಲು ಚಿಂತನೆ ನಡೆಸಿದ್ದು, ಹಳೇ ಜಿಲ್ಲಾಧಿಕಾರಿ ಕಚೇರಿಯನ್ನು ಆಡಳಿತ ಕೇಂದ್ರವಾಗಿ ಬಳಸಿಕೊಳ್ಳಬೇಕೆಂದು ಆಗ್ರಹಿಸಿ ಮೈಸೂರು ಕನ್ನಡ ವೇದಿಕೆ ವತಿಯಿಂದ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಮಹಾನಗರ ಪಾಲಿಕೆ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾ ಕಾರರು, ಘೋಷಣೆಗಳನ್ನು ಕೂಗಿದರು. ಗ್ರೇಡ್-1 ಮಹಾನಗರ ಪಾಲಿಕೆ ರಚನೆಗೆ ಈಗಾಗಲೇ ಸಚಿವ ಸಂಪುಟ ಒಪ್ಪಿಗೆ ಸೂಚಿಸಿದೆ. ಈಗಿ ರುವ ಮಹಾನಗರ ಪಾಲಿಕೆ ಕಚೇರಿ ಮೈಸೂರು ಅರಮನೆಯ ಸಮೀ ಪದಲ್ಲಿದೆ. ಮುಂದಿನ ದಿನಗಳಲ್ಲಿ ಪಾಲಿಕೆ ಕಾರ್ಯ ವ್ಯಾಪ್ತಿ ಹೆಚ್ಚಾಗಲಿದ್ದು, ಸಾರ್ವಜನಿಕರ ಸಂಚಾರವೂ ದುಪ್ಪಟ್ಟು ಆಗಲಿದೆ. ಹೀಗಾಗಿ ಸಂಚಾರ ಹಾಗೂ ಪಾರ್ಕಿಂಗ್ ಸಮಸ್ಯೆಗಳು ಎದುರಾಗಬಹುದು ಎಂದು ಅಭಿಪ್ರಾಯಪಟ್ಟರು. ಪ್ರಸ್ತುತ ನಗರಪಾಲಿಕೆಯ ಆವರಣ, ಕೌನ್ಸಿಲ್ ಸಭಾಂಗಣ ಪಾಲಿಕೆ ವಾಹನ ನಿಲುಗಡೆ, ನಗರಪಾಲಿಕೆ ಸದ್ಯಸರ ಸಂಖ್ಯೆ, ಹೆಚ್ಚಾಗುವ ಅವರ ವಾಹನ ನಿಲುಗಡೆಗೆ ದೊಡ್ಡ ಸಮಸ್ಯೆಯಾಗುತ್ತದೆ. ಹೀಗಾಗಿ ಈಗಾಗಲೇ ಹಲವು ವರ್ಷಗಳಿಂದ ಜಿಲ್ಲಾಧಿಕಾರಿ ಕಚೇರಿಯಾಗಿ ಸೇವೆ ಸಲ್ಲಿಸಿರುವ ಪಾರಂಪರಿಕ ಕಟ್ಟಡ ಸೂಕ್ತ ನಿರ್ವಹಣೆ ಇಲ್ಲದೆ ಶಿಥಿಲಾವಸ್ಥೆಗೆ ತಲುಪುವ ಹಂತಕ್ಕೆ ಮುನ್ನವೇ ಜಿಲ್ಲಾಡಳಿತ ಎಚ್ಚೆತ್ತು ಹಳೆ ಜಿಲ್ಲಾಧಿಕಾರಿ ಕಚೇರಿಗೆ ಸ್ಥಳಾಂತರ ಮಾಡಬೇಕೆಂದು ಆಗ್ರಹಿಸಿದರು.



ಮಹಾನಗರ ಪಾಲಿಕೆಯ ಪ್ರದಾನ ಕಚೇರಿಯನ್ನು ಹಳೆ ಜಿಲ್ಲಾಕಾರಿ ಕಚೇರಿಗೆ ಸ್ಥಳಾಂತರಿಸುವ ಮೂಲಕ ಕಟ್ಟಡವನ್ನು ನವೀಕರಿಸಿ ಅರಮನೆ ನಗರಿಯ ಪಾರಂಪರಿಕತೆಯನ್ನು ಕಾಪಾಡಿಕೊಳ್ಳಬಹುದು. ಇದರಿಂದ ಸಂಚಾರ, ಆಡಳಿತವೂ ಸುಗಮವಾಗುತ್ತದೆ. ಜತೆಗೆ ನಗರದ ಪಾರಂ ಪರಿಕ ಕಟ್ಟಡಗಳಾದ ದೇವರಾಜ ಮಾರುಕಟ್ಟೆ, ಲ್ಯಾನ್ಸ್‌ಡೌನ್ ಕಟ್ಟಡಗಳನ್ನು ಕೆಡವಲು ಮುಂದಾಗಿದ್ದು, ಹಳೇ ಜಿಲ್ಲಾಕಾರಿ ಕಚೇರಿಯನ್ನು ಸೂಕ್ತವಾಗಿ ನಿರ್ವಹಣೆ ಮಾಡಿ, ನವೀಕರಿಸಿ, ಪಾಲಿಕೆ ಕಚೇರಿಯನ್ನು ಸ್ಥಳಾಂತರ ಮಾಡಬೇಕೆಂದು ಒತ್ತಾಯಿಸಿದರು. ವೇದಿಕೆ ಅಧ್ಯಕ್ಷ ಎಸ್.ಬಾಲಕಷ್ಣ, ನಾಲಾ ಬೀದಿ ರವಿ, ಬೋಗಾದಿ ಸಿದ್ದೇಗೌಡ, ಗುರುಬಸಪ್ಪ, ಪ್ಯಾಲೇಸ್ ಬಾಬು, ಚಾಮರಾಜು ಮಂಡಕಳ್ಳಿ, ಗೋಪಿ, ಮಾದಪ್ಪ, ಎಲ್ಐಸಿ ಸಿದ್ದಪ್ಪ, ಸ್ವಾಮಿ, ಮಹದೇವಸ್ವಾಮಿ, ಚಲುವರಾಯಸ್ವಾಮಿ, ಚಿನ್ನಪ್ಪ, ಶಿವುಗೌಡ, ಗೋವಿಂದರಾಜು, ಹರೀಶ್, ಸ್ವಾಮಿ ಗೈಡ್, ಸುನಿಲ್ ಮುಂತಾದವರು ಪಾಲ್ಗೊಂಡಿದ್ದರು.

# ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾಗಿ ಡಿ.ನಟರಾಜ್‌ಗೌಡ್ರು ನೇಮಕ

### ಜಿಲ್ಲಾಧ್ಯಕ್ಷ ನಿರಂಜನ್‌ಕುಮಾರ್ ಆದೇಶ ಪತ್ರ ವಿತರಣೆ

ಚಾಮರಾಜನಗರ: ಚಾಮರಾಜನಗರ ಜಿಲ್ಲಾ ಬಿಜೆಪಿ ಜಿಲ್ಲಆ ಉಪಾಧ್ಯಕ್ಷರಾಗಿ ಡಿ. ನಟರಾಜ್ ಗೌಡ್ರರನ್ನು ನೇಮಕ ಮಾಡಿ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್‌ಕುಮಾರ್ ಆದೇಶ ಪ್ರತಿಯನ್ನು ನೀಡಿದರು.

ನಗರದ ಬಿಜೆಪಿ ಕಚೇರಿಯಲ್ಲಿ ನೂತನ ಉಪಾಧ್ಯಕ್ಷರಿಗೆ ಆದೇಶ ಪತ್ರವನ್ನು ನೀಡಿ, ಮಾತನಾಡಿದ ಅವರು, ಜಿಲ್ಲೆಯಲ್ಲಿ ಪಕ್ಷವನ್ನು ಸಂಘಟನೆ ಮಾಡುವ ನಿಟ್ಟಿನಲ್ಲಿ ನಿಮ್ಮ ಸಲಹೆ ಸೂಚನೆ ಹಾಗು ಮಾರ್ಗದರ್ಶನಗಳು ನೀಡುವ ಜೊತೆಗೆ ಸಕ್ರಿಯವಾಗಿ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ನೂತನ ಉಪಾಧ್ಯಕ್ಷ ನಟರಾಜ್‌ಗೌಡ್ರರು ಆದೇಶ ಪ್ರತಿಯನ್ನು ಸ್ವೀಕರಿಸಿ ಮಾತನಾಡಿ, ಜಿಲ್ಲೆಯಲ್ಲಿ ಹಿಂದೆ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷನಾಗಿ ಸೇವೆ ಸಲ್ಲಿಸಿದ್ದೆ. ಈಗ ಜಿಲ್ಲಾ ಸಮಿತಿ ನನ್ನ ಮೇಲೆ ವಿಶ್ವಾಸ ವಿಟ್ಟು ಜಿಲ್ಲಾ ಉಪಾಧ್ಯಕ್ಷ ಸ್ಥಾನ ನೀಡಿರುವುದು ಸಂತಸವಾಗಿದೆ. ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನಾಯಕತ್ವದಲ್ಲಿ ರಾಜ್ಯದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಯಡಿಯೂರಪ್ಪ, ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ್ ಅವರು ನೇತೃತ್ವದಲ್ಲಿ ಪಕ್ಷವನ್ನು ಸಂಘಟಿಸಿ, ಮುಂಬರುವ ಚುನಾವಣೆಗಳಲ್ಲಿ ಹೆಚ್ಚು ಸ್ಥಾನಗಳಲ್ಲಿ ಬಿಜೆಪಿಯನ್ನು ಗೆಲ್ಲಿಸಿ ಅಧಿಕಾರ ಹಿಡಿಯುವ ನಿಟ್ಟಿನಲ್ಲಿ ಸಂಘಟನೆ ಮಾಡೋಣ ಎಂದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯರಾದ ಪ್ರೊ. ಕೆ.ಆರ್. ಮಲ್ಲಿಕಾರ್ಜುನಪ್ಪ ಇತರರು ಹಾಜರಿದ್ದರು.




**ಕಾಡುಪ್ರಾಣ ಗಳ ಹಾವಳಿ ತಡೆಗೆ ಆಗ್ರಹ**

# ರೈತರಿಂದ ಅರಣ್ಯ ಇಲಾಖೆಗೆ ಮುತ್ತಿಗೆ

ಚಾಮರಾಜನಗರ: ತಾಲೂಕಿನ ಹೆಗ್ಗೋತಾರ, ಕಲ್ಪುರ ಗ್ರಾಮಗಳ ವ್ಯಾಪ್ತಿಯಲ್ಲಿ ಕಾಡುಪ್ರಾಣ ಗಳ ಹಾವಳಿ ಹೆಚ್ಚಾಗಿದ್ದು, ರೈತರ ಜಾನುವಾರುಗಳ ಮೇಲೆ ದಾಳಿ ಮಾಡುತ್ತಿದ್ದೇವೆ. ಇದನ್ನು ತಡೆಯಲು ಅರಣ್ಯ ಇಲಾಖೆ ವಿಫಲವಾಗಿದೆ ಎಂದು ಆಗ್ರಹಿಸಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಯಿತು.

ನಗರದ ಚಾ.ನಗರ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ ಮುಂಭಾಗ ಜಮಾಯಿಸಿದ ರೈತರು ಕೆಲಕಾಲ ಪ್ರತಿಭಟನಾ ಧರಣ ನಡೆಸಿದರು. ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಬಸವಣ್ಣ ಮಾತನಾಡಿ, ಚಾಮರಾಜನಗರ ತಾಲೂಕಿನ ಹೆಗ್ಗೋಪಾರ, ಕಲ್ಲುರ ವ್ಯಾಪ್ತಿಯಲ್ಲಿ ಹುಲಿ, ಚಿರತೆ ಹಾವಳಿ ಹೆಚ್ಚಾಗಿದೆ. ಕಳೆದ 2 ತಿಂಗಳಲ್ಲಿ 8-10 ಜಾನುವಾರುಗಳನ್ನು ಕೊಂದು ಹಾಕಿದ್ದು ನಾಲ್ವರನ್ನು ಬಲಿ ಪಡೆದುಕೊಂಡಿವೆ. ಆದರೆ, ಇಲ್ಲಿಯ ತನಕ ಹುಲಿ, ಚಿರತೆ ಸೆರೆ ಹಿಡಿಯುವಲ್ಲಿ ಅರಣ್ಯಾಧಿಕಾರಿಗಳು ಕ್ರಮ ವಹಿಸಿಲ್ಲ. ಈ ಸಂಬಂಧ ಪ್ರಶ್ನಿಸಿದರೆ ಬೋನು ಇಲ್ಲ. ಸಿಬ್ಬಂದಿ ಕೊರತೆ ಎಂದು ಸಬೂಬು ಹೇಳುತ್ತಾರೆ ಎಂದು ದೂರಿದರು. ಪ್ರಮುಖವಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿಯೇ ಇಲ್ಲ ಇಲ್ಲ. ಇದರಿಂದ ಯಾವುದೇ ಕೆಲಸಗಳು ಆಗುತ್ತಿಲ್ಲ. ಸರ್ಕಾರ ಕೂಡಲೇ ಅರಣ್ಯ ಸಿಬ್ಬಂದಿ ನೇಮಕ ಮಾಡಬೇಕು. ಜೊತೆಗೆ ಅಗತ್ಯವಿರುವ ಪರಿಕರಗಳನ್ನು ಪೂರೈಕೆ ಮಾಡಬೇಕು. ಆ ಮೂಲಕ ಜನ, ಜಾನುವಾರುಗಳನ್ನು ರಕ್ಷಣೆ ಮಾಡಬೇಕು. ಇಲ್ಲದಿದ್ದರೆ ಉಸ್ತುವಾರಿ ಸಚಿವರಿಗೆ ಘೇರಾವ್ ಹಾಕಲಾಗುವುದು. ಜೊತೆಗೆ ಚಾ.ನಗರಕ್ಕೆ ಸಿಎಂ ಬಂದಾಗ ಕಪ್ಪು ಬಟ್ಟೆ ಪ್ರದರ್ಶಿಸಲಾಗುವುದು ಎಂದರು. ಸಂಘದ ಸಂಘಟನಾ ಕಾರ್ಯದರ್ಶಿ ವಿಜಯಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ಶೇ. 50 ರಷ್ಟು ಅರಣ್ಯವಿದ್ದು ಕಾಡುಪ್ರಾಣ ಗಳಿಂದ ರೈತರು ಮೃತಪಟ್ಟಾಗ ಪರಿಹಾರದ ಚೆಕ್ ತೆಗೆದುಕೊಂಡು ಬರುವುದಲ್ಲ. ಬದಲಿಗೆ ಕಾಡುಪ್ರಾಣ ಗಳ ಹಾವಳಿ ತಡೆಯಲು ಮುಂದಾಗಬೇಕು ಎಂದರು.



ಈ ಸಂಬಂಧ ಸಂಸದರು, ಶಾಸಕರು ಸೂಕ್ತ ಕ್ರಮವಹಿಸಬೇಕು. ಮುಂದಿನ ದಿನಗಳಲ್ಲಿ ಕಾಡುಪ್ರಾಣ ಗಳ ದಾಳಿ ನಡೆದರೆ ಸಂಸದರು, ಶಾಸಕರ ಮನೆಗಳಿಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸಂಘದ ಪದಾಧಿಕಾರಿಗಳಾದ ಮೇಲಾಜಿಪುರ ಕುಮಾರ್, ಕಲ್ಪುರ ರಘು, ಮಹೇಶ್, ಮುರುಗೇಂದ್ರಸ್ವಾಮಿ, ಲೋಕೇಶ್ ಹಳೇಪುರ, ಮಹೇಶ್, ತಮ್ಮಯಪ್ಪ, ದೊರೆಸ್ವಾಮಿ, ಸಂಜಯ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ತ್ಯಾಜ್ಯವನ್ನು ನಿಗಧಿತ ಅವಧಿಯಲ್ಲಿ ವಿಲೇವಾರಿ ಮಾಡಿ

## ಕಾಳೇನಹಳ್ಳಿ ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಡಿಸಿ ಭೇಟಿ-ಪರಿಶೀಲನೆ

**ಮಂಡ್ಯ:** ಜಿಲ್ಲೆಯ ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ಸಂಸ್ಕರಣೆ ಮತ್ತು ವಿಲೇವಾರಿ ಮಾಡಲು ಗುರುತಿಸಿರುವ ಕಾಳೇನಹಳ್ಳಿ ಗ್ರಾಮದಲ್ಲಿ ಘನ ತ್ಯಾಜ್ಯ ವಿಲೇವಾರಿ ಘಟಕವನ್ನು ನಿರ್ಮಾಣ ಮಾಡಿ ಘನತ್ಯಾಜ್ಯವನ್ನು ಸಂಗ್ರಹಿಸಲಾಗುತ್ತಿರುತ್ತದೆ.

ಈ ಘಟಕವನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು ತ್ಯಾಜ್ಯ ಸಂಸ್ಕರಣೆ ಮತ್ತು ವಿಲೇವಾರಿಗೆ ಸಂಬಂಧಿಸಿದಂತೆ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಅನುಮೋದನೆಗೊಂಡ ಡಿ.ಪಿ.ಆರ್ ರೀತ್ಯಾ ಗುತ್ತಿಗೆದಾರರಿಂದ ಶೇ.42 ರಷ್ಟು ಸಂಸ್ಕರಣೆ ಮಾಡಿರುವ ತ್ಯಾಜ್ಯವನ್ನು ಹೊರತುಪಡಿಸಿ ಉಳಿದ ಪಾರಂಪರಿಕ ತ್ಯಾಜ್ಯವನ್ನು ನಿಗಧಿತ ಅವಧಿಯಲ್ಲಿ ತುರ್ತಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

ಪಾರಂಪರಿಕ ತ್ಯಾಜ್ಯ ವಿಲೇವಾರಿ ಕಾರ್ಯದಲ್ಲಿ ಉತ್ಪತ್ತಿಯಾಗುವ ನಿರುಪಯುಕ್ತ ತ್ಯಾಜ್ಯವನ್ನು ಸದರಿ ಸ್ಯಾನಿಟರಿ ಲ್ಯಾಂಡ್ ಫಿಲ್ಲಗಳಲ್ಲಿ ಸಂಗ್ರಹಿಸಿ ಭರ್ತಿ ಮಾಡಲಾಗುವ ಬಗ್ಗೆ ಕ್ರಮವಹಿಸುವಂತೆ ಸೂಚನೆ ನೀಡಲಾಯಿತು.

ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ಮನೆ ಮನೆಯಿಂದ ಕಸ ಸಂಗ್ರಹಣೆ ಮಾಡುವಲ್ಲಿ ಹಸಿ ಕಸ ಮತ್ತು ಒಣ ಕಸವನ್ನು ಬೇರ್ಪಡಿಸಿ ಸಂಗ್ರಹಿಸಿ, ನಂತರ ನೆಲಭರ್ತಿ ಜಾಗದಲ್ಲಿ ಸೂಕ್ತ ಕ್ರಮವಹಿಸಿ ವಿಲೇವಾರಿ ಮಾಡಲು ಸೂಚನೆ ನೀಡಲಾಯಿತು.

ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಇರುವ ಬೋರ್ ವೆಲ್ ಗಳ ನೀರಿನ ಗುಣಮಟ್ಟವನ್ನು ಕಾಲಕಾಲಕ್ಕೆ ಪರೀಕ್ಷೆ ಮಾಡಿಸಲು ಹಾಗೂ ಸದರಿ ಜಾಗದಲ್ಲಿ ತರಕಾರಿ ಗಿಡಗಳು, ಹಣ್ಣುಗಳ ಗಿಡಗಳನ್ನು ಹಾಗೂ ಹಸುವಿಗೆ ಹಾಕುವ ಹುಲ್ಲನ್ನು ಬೆಳೆಸಲಾಗಿದ್ದು, ಸದರಿ ಗಿಡಗಳಿಂದ ಹಣ್ಣು ಮತ್ತು ತರಕಾರಿಗಳನ್ನು ಸಂಬಂಧಪಟ್ಟ ಇಲಾಖೆಯಿಂದ ಪರೀಕ್ಷೆ ಮಾಡಿಸಲು ಕ್ರಮವಹಿಸುವ ಬಗ್ಗೆ ಸೂಚಿಸಲಾಯಿತು. ನಂತರದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದ ಮೇರೆಗೆ ಬೀದಿ ನಾಯಿಗಳ ಹಾವಳಿ ತಪ್ಪಿಸುವ ಸಂಬಂಧ ಪ್ರಮಾಣೀಕೃತ ಕಾರ್ಯ ವಿಧಾನಗಳಂತೆ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.



ಜನನ ನಿಯಂತ್ರಣ ಕ್ರಮಗಳನ್ನು ಅಳವಡಿಸಿದ ನಂತರದಲ್ಲಿ ರೇಬೀಸ್ ಅಥವಾ ಗಂಭೀರವಾಗಿ ಆಕ್ರಮಣಕಾರಿ ನಡವಳಿಕೆ ಹೊಂದಿರುವ ನಾಯಿಗಳನ್ನು ಬೀದಿಗೆ ಬಿಡದೆ, ಪ್ರತ್ಯೇಕ ಮತ್ತು ಸುರಕ್ಷಿತ ಸ್ಥಳದಲ್ಲಿ ಇರಿಸುವಂತೆ ಮಾರ್ಗದರ್ಶನ ನೀಡಲಾಯಿತು.

ಸ್ಥಳೀಯ ನಿವಾಸಿಗಳು, ಆರ್‌ಡಬ್ಲ್ಯೂಎಗಳು (RWAs) ಮತ್ತು ಪ್ರಾಣಿ ಕಲ್ಯಾಣ ಸಂಸ್ಥೆಗಳ ಸಹಕಾರದೊಂದಿಗೆ ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬೀದಿನಾಯಿಗಳಿಗೆ ಜನನ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಯಿತು.

# ಗಗನಚುಕ್ಕಿ ಜಲಪಾತದ ಬಳಿ ಅಕ್ವಾಪಾರ್ಕ್; ಮನವಿ ಸ್ವೀಕೃತ

**ಬೆಳಗಾವಿ:** ಮಳವಳ್ಳಿ ತಾಲ್ಲೂಕಿನ ಗಗನಚುಕ್ಕಿ ಜಲಪಾತದ ಬಳಿ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ (ಪಿ.ಎಂ.ಎಂ.ಎಸ್.ವೈ) ಸಂಯೋಜಿತ ಅಕ್ವಾಪಾರ್ಕ್ ನಿರ್ಮಾಣ ಮಾಡುವಂತೆ ಕೋರಿ ಮನವಿ ಸ್ವೀಕೃತವಾಗಿದೆ ಎಂದು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಮಂಕಾಳ ಎಸ್.ವೈದ್ಯ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಕಾಂಗ್ರೆಸ್ ಶಾಸಕ ಮಧು ಜಿ.ಮಾದೇಗೌಡ ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಗೆ ಉತ್ತರಿಸಿರುವ ಸಚಿವರು, ಸಂಯೋಜಿತ ಅಕ್ವಾಪಾರ್ಕ್ ನಿರ್ಮಾಣ ಮಾಡಲು ಯೋಜನೆಯ ಮಾರ್ಗಸೂಚಿಯಂತೆ 100 ಎಕರೆ ಜಾಗ ಆವಶ್ಯ ಇದ್ದು, ವಿವಿಧ ಇಲಾಖೆಗಳೊಂದಿಗೆ ಸಮಾಲೋಚಿಸಿ/ಸಹಮತಿ ಪಡೆದು ನಿಯಮಾನುಸಾರ ಕ್ರಮವಹಿಸಲಾಗುವುದು. ಅಂದಾಜು 100 ಕೋಟಿ ರೂಪಾಯಿ ಮೊತ್ತದಲ್ಲಿ ಈ ಯೋಜನೆಯನ್ನು ಅನುಷ್ಠಾನಿಸಲು ಅವಕಾಶವಿದೆ ಎಂದು ಉತ್ತರಿಸಿದ್ದಾರೆ.

ಅಕ್ವಾಪಾರ್ಕ್ ವಿಶೇಷತೆಗಳೇನು ?

ಮೀನುಗಾರಿಕೆ ಅಭಿವೃದ್ಧಿಗೆ ಅಗತ್ಯವಿರುವ ಎಲ್ಲಾ ಮೂಲಸೌಕರ್ಯಗಳು ಒಂದೇ ಕಡೆ ಲಭ್ಯವಾಗುವುದು ಸಂಯೋಜಿತ ಅಕ್ವಾಪಾರ್ಕ್ ವಿಶೇಷತೆಯಾಗಿದ್ದು, ಕೆಳಕಂಡ ಸೌಲಭ್ಯಗಳನ್ನು ಒದಗಿಸಲು ಅವಕಾಶವಿದೆ.

- **ಮೀನು ಆಹಾರ ಉತ್ಪಾದನಾ ಘಟಕ**
- **ಮೀನುಮರಿ ಉತ್ಪಾದನಾ ಘಟಕ**
- **ಮೀನುಮರಿ ಪಾಲನಾ ಘಟಕ**
- **ಶೈತ್ಯಾಗಾರ/ ಮಂಜುಗಡ್ಡೆ ಘಟಕ**
- **ಅಕ್ವೇರಿಯಂ ಮೀನುಗಳ ಉತ್ಪಾದನಾ/ ಪಾಲನಾ ಘಟಕ**
- **ಸುಸಜ್ಜಿತ ಮೀನು ಮಾರುಕಟ್ಟೆ ಘಟಕ**
- **ಮೀನು/ ಮೀನುಮರಿ ಸಾಗಾಣಿಕೆ ವ್ಯವಸ್ಥೆ**
- **ಸ್ಪೋರ್ಟ್ಸ್ ಫಿಶಿಂಗ್**

ಈ ಯೋಜನೆಗೆ 100 ಎಕರೆ ಜಮೀನು ಅಗತ್ಯವಿದ್ದು, ಗಗನಚುಕ್ಕಿ ಜಲಪಾತದ ಬಳಿ 75 ಎಕರೆ ಜಾಗ ಗುರುತಿಸಲಾಗಿದೆ.

ಆದರೆ, ಸದರಿ ಜಾಗವು ಅರಣ್ಯ, ಪರಿಸರ ಮತ್ತು ಸೂಕ್ಷ್ಮ ವಲಯವಾಗಿದ್ದು, ಈ ಜಾಗವನ್ನು ಪಡೆಯುವ ಸಂಬಂಧ ಕಂದಾಯ ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಅಗತ್ಯವಿರುವ ಜಮೀನು ದೊರಕಿದ ಬಳಿಕ ಯೋಜನೆಯನ್ನು ಸರ್ಕಾರದ ವತಿಯಿಂದ ಅನುಷ್ಠಾನಿಸಬೇಕೋ ಅಥವಾ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಜಾರಿ ಮಾಡಬೇಕೋ ಎಂಬ ಬಗ್ಗೆ ತೀರ್ಮಾನಿಸಲಾಗುವುದು ಎಂದಿದ್ದಾರೆ.

# ಜಯ ಕರ್ನಾಟಕ ಸಂಘಟನೆಯಿಂದ ಅದ್ದೂರಿ ಕನ್ನಡ ರಾಜ್ಯೋತ್ಸವ



**ಕೆ ಆರ್ ಪೇಟೆ:** ತಾಲ್ಲೂಕಿನ ಜಯಕರ್ನಾಟಕ ಸಂಘಟನೆ ವತಿಯಿಂದ ಅದ್ದೂರಿ 70ನೇ ಕನ್ನಡ ರಾಜ್ಯೋತ್ಸವ ಹಲವು ಸಂಸ್ಕೃತಿಕ ಮನರಂಜನೆ ಕಾರ್ಯಕ್ರಮ ಹಾಗೂ ವೀರಯೋಧರಿಗೆ, ಸಾಧಕರಿಗೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರದೊಂದಿಗೆ ಕಾರ್ಯಕ್ರಮಕ್ಕೆ ಗಣ್ಯರು ಚಲನಚಿತ್ರ ನಟ ನಟಿಯರು ಆಗಮಿಸಲಿದ್ದಾರೆ ಎಂದು ಜಯ ಕರ್ನಾಟಕ ಸಂಘಟನೆಯ ತಾಲೂಕು ಅಧ್ಯಕ್ಷ ಹೊನ್ನೇನಹಳ್ಳಿ ಸೋಮಶೇಖರ್ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅದ್ದೂರಿ ಕಾರ್ಯಕ್ರಮದ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು. ಜಯ ಕರ್ನಾಟಕ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷರು ಹಾಗೂ ಸರ್ವೋಚ್ಚ ನಾಯಕರಾದ ದಿವಂಗತ ಎಂ.ಮುತ್ತಪ್ಪ ರೈ ರವರ ದಿವ್ಯ ಆಶೀರ್ವಾದದೊಂದಿಗೆ ರಾಜ್ಯಾಧ್ಯಕ್ಷ ಡಾ:ಬಿ.ಎನ್. ಜಗದೀಶ್ ಹಾಗೂ ಜಿಲ್ಲಾಧ್ಯಕ್ಷ ಡಾ.ಯೋಗಣ್ಣ ಅವರ ಮಾರ್ಗದರ್ಶನದಲ್ಲಿ ನವಂಬರ್ 14ರ ಭಾನುವಾರ ಸಂಜೆ 06ಗಂಟೆಗೆ ಕೆ.ಆರ್.ಪೇಟೆ ಪಟ್ಟಣದಲ್ಲಿರುವ ಪುರಸಭಾ ಮೈದಾನದಲ್ಲಿ ನಮ್ಮ ಜಯ ಕರ್ನಾಟಕ ಸಂಘಟನೆ ವತಿಯಿಂದ 70ನೇ ಅದ್ದೂರಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ತಾಲೂಕಿನಲ್ಲಿ ಜನಿಸಿ ದೇಶ ಸೇವೆ ಸಲ್ಲಿಸುತ್ತಿರುವ ಯೋಧರಿಗೆ, ವಿರುದ್ಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ,2024–25ನೇ ಸಾಲಿನ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರತಿಭಾ ಏರ್ಪಡಿಸಿದ್ದು ಈ ಸುಂದರ ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಸಚಿವ ಕೆ.ಸಿ ನಾರಾಯಣಗೌಡರು ವಹಿಸಲಿದ್ದಾರೆ, ಅಧ್ಯಕ್ಷತೆಯನ್ನು ಜಯ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಡಾ:ಬಿ.ಎನ್ ಜಗದೀಶ್, ಧ್ವಜಾರೋಹಣ ಶಾಸಕ ಎಚ್.ಟಿ ಮಂಜು, ಶ್ರೀ ಭುವನೇಶ್ವರಿ ಭಾವಚಿತ್ರ ಅನಾವರಣ ಮಾಜಿ ಶಾಸಕ ಕೆ. ಬಿ ಚಂದ್ರಶೇಖರ್, ಪುಸ್ಪಾರ್ಚನೆಯನ್ನು ಜಿಲ್ಲಾಧ್ಯಕ್ಷ ಯೋಗಣ್ಣ, ಸಲ್ಲಿಸಿದರೆ ಮುಖ್ಯ ಅತಿಥಿಗಳಾಗಿ ಡಾಲು ರವಿ, ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್,ಕೈ ಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ನಾಗೇಂದ್ರ ಕುಮಾರ್, ಮಾಜಿ ಶಾಸಕರಾದ ಬಿ.ಪ್ರಕಾಶ್, ಕಾಂಗ್ರೆಸ್ ಮುಖಂಡ ವಿಜಯರಾಮೇಗೌಡ, ಮನ್ಮುಲ್ ಮಾಜಿ ಅಧ್ಯಕ್ಷ ಎಂ.ಬಿ ಹರೀಶ್, ಎಂ.ಡಿ.ಸಿ.ಸಿ ನಿರ್ದೇಶಕ ಅಂಬರೀಶ್, ಕೆ ಯುಐಡಿಎಫ್ ಸಿ ನಿಗಮದ ಮಾಜಿ ಅಧ್ಯಕ್ಷ ಎಂ.ಡಿ. ಕೃಷ್ಣಮೂರ್ತಿ,

ಕೆಪಿಸಿಸಿ ಸದಸ್ಯರಾದ ಕಿಕ್ಕೇರಿ ಸುರೇಶ್, ಜೆಡಿಎಸ್ ತಾಲೂಕು ಅಧ್ಯಕ್ಷ ಜಾನಕಿರಾಮ್ ಟಿಎಪಿಸಿಎಂಎಸ್ ನಿರ್ದೇಶಕ ಬಿ.ಎಂ ಕಿರಣ್,ಕಿಕ್ಕೇರಿ ಪ್ರಭಾಕರ್, ರಾಜಾಹುಲಿ ದಿನೇಶ್ ಸೇರಿದಂತೆ ಜಿಲ್ಲಾ– ತಾಲೂಕು ಮಟ್ಟದ ಅಧಿಕಾರಿಗಳು ಕಾರ್ಯಕ್ರಮಕ್ಕೆ ಭಾಗವಹಿಸಲಿದ್ದಾರೆ ಎಂದು ಕೆ.ಆರ್.ಪೇಟೆ ತಾಲೂಕು ಅಧ್ಯಕ್ಷ ಸೋಮಶೇಖರ್ ತಿಳಿಸಿದರು. ಬಳಿಕ ಮಾತನಾಡಿದ ತಾಲೂಕು ಯುವ ಘಟಕದ ಅಧ್ಯಕ್ಷ ಕೆ.ಎಲ್.ಮಹೇಶ್, ಮಹಿಳಾ ಘಟಕದ ತಾಲೂಕು ಅಧ್ಯಕ್ಷೆ ಜಯಲಕ್ಷ್ಮಮ್ಮ* ಕಾರ್ಯಕ್ರಮಕ್ಕೆ ಪ್ರತಿಯೊಬ್ಬ ಕನ್ನಡ ಅಭಿಮಾನಿಗಳನ್ನು ಸ್ವಾಗತಿಸಿ ಕಾರ್ಯಕ್ರಮದ ಯಶಸ್ವಿಗೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜಯಕರ್ನಾಟಕ ಸಂಘಟನೆಯ ತಾಲ್ಲೂಕು ಯುವ ಘಟಕದ ಅಧ್ಯಕ್ಷ ಕಾಮನಹಳ್ಳಿ ಮಹೇಶ್, ಕಾರ್ಯಧ್ಯಕ್ಷ ಅನುವಿನಕಟ್ಟೆ ಆನಂದ್, ಮಹಿಳಾ ಘಟಕದ ತಾಲ್ಲೂಕು ಅಧ್ಯಕ್ಷೆ ಜಯಲಕ್ಷ್ಮಮ್ಮ, ತಾಲ್ಲೂಕು ಕಾರ್ಯಧ್ಯಕ್ಷೆ ಸರಸ್ವತಿ, ನಗರ ಮಹಿಳಾ ಅಧ್ಯಕ್ಷೆ ಅನುಪಮ, ತಾಲ್ಲೂಕು ಉಪಾಧ್ಯಕ್ಷರಾದ ಮನು, ಅಗ್ರಹಾರ ಯೋಗೇಶ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಪ್ರಭುನಾಯಕ, ಸಂಘಟನೆಯ ಕಾರ್ಯದರ್ಶಿ ಭಾವಾಜಿ ಚಂದ್ರು, ಕೆ.ಆರ್.ಪೇಟೆ ಟೌನ್ ಅಧ್ಯಕ್ಷ ಅಕ್ಷಯ್,ಕಿಕ್ಕೇರಿ ಹೋಬಳಿ ಅಧ್ಯಕ್ಷ ಸತೀಶ್, ಸಂಘಟನಾ ಕಾರ್ಯದರ್ಶಿ ರಾಘವೇಂದ್ರ, ಸಂತೆಬಾಚಹಳ್ಳಿ ಅಧ್ಯಕ್ಷ ಅರುಣ್ ಕುಮಾರ್, ಅಶೋಕ್, ಅಜಿತ್, ಯಶವಂತ್, ರವಿ, ರಾಕೇಶ್, ಸೇರಿದಂತೆ ಉಪಸ್ಥಿತರಿದ್ದರು.

# ನ್ಯೂ ತಮಿಳು ಕಾಲೋನಿ ಮನೆಗಳ ಕಾಮಗಾರಿ ಪ್ರಾರಂಭಿಸಲು ಆಗ್ರಹಿಸಿ ಪ್ರತಿಭಟನೆ

**ಮಂಡ್ಯ:** ನಗರದ ನ್ಯೂ ತಮಿಳು ಕಾಲೋನಿ 154 ಕುಟುಂಬಗಳಿಗೆ ಮನೆಗಳನ್ನು ಮಂಜೂರಾತಿ ಮಾಡಿ, ಸರ್ಕಾರದ ನೂತನ ವಸತಿ ಯೋಜನೆ ಅಡಿಯಲ್ಲಿ ಕಾಮಗಾರಿಯನ್ನು ಶೀಘ್ರದಲ್ಲಿ ಪ್ರಾರಂಭಿಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟು ನಿವಾಸಿಗಳು ಮಂಡ್ಯನಗರಸಭೆ ಎದುರು ಬುಧವಾರ ಪ್ರತಿಭಟನೆ ನಡೆಸಿದರು.



ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ, ಕರ್ನಾಟಕ ಜನಶಕ್ತಿ, ಮಹಿಳಾ ಮುನ್ನಡೆ ಹಾಗೂ ಮಂಡ್ಯನಗರ ಶ್ರಮಿಕನಗರ ನಿವಾಸಿಗಳ ನೇತೃತ್ವದಲ್ಲಿ ನಗರಸಭೆ ಎದುರು ಪ್ರತಿಭಟನೆ ನಡೆಸಿದ ಹೋರಾಟಗಾರರು, ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ನ್ಯೂ ತಮಿಳು ಕಾಲೋನಿಯಲ್ಲಿ ತುರ್ತು ಅಗತ್ಯವಾಗಿ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಕಾಂಕ್ರೀಟ್ ರಸ್ತೆ, ಒಳ ಚರಂಡಿ ಹಾಗೂ ಅಂಗನವಾಡಿ ಮತ್ತು ಬೀದಿ ದೀಪ ಇವುಗಳನ್ನು ಗಣನೆಗೆ ತೆಗೆದು ಕೊಂಡು 10 ದಿನಗಳ ಒಳಗೆ ಕಾಯಕಲ್ಪ ಕಲ್ಪಿಸಬೇಕು. ಸ್ಥಳೀಯ ನಗರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಮತ್ತು ಅಂಬೇಡ್ಕರ್ ಅಭಿವೃದ್ಧಿ ನಿಗಮ ಈ 3 ಇಲಾಖೆಗಳಿಂದ ಬಡಜನರಿಗೆ ಸಿಗಬೇಕಾದ ಸಮಸ್ತ ಸೌಲಭ್ಯಗಳನ್ನು. ನೀಡಲು ತುರ್ತು ಕ್ರಮ ಕೈಗೊಳ್ಳಬೇಕು ಮತ್ತು ಜಾಗೃತಿ ನಾಮಫಲಕವನ್ನು ಎಲ್ಲಾ ಕೊಳಗೇರಿ ಪ್ರದೇಶಗಳಲ್ಲಿ ಅಳವಡಿಸಬೇಕು ಎಂದು ಆಗ್ರಹಿಸಿದರು.ನಗರಸಭೆ ವತಿಯಿಂದ ಪ್ರತಿ ವರ್ಷವೂ 50ಕ್ಕೂ ಹೆಚ್ಚು ಕೋಟಿ ಬಜೆಟ್ ಮಂಡನೆಯಾಗುತ್ತದೆ ಶ್ರಮಿಕ (ಸ್ಲಂ) ಜನರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಅಲ್ಪ ಪ್ರಮಾಣದ ಮೊತ್ತ ಎರಡು ಕೋಟಿ ರೂಪಾಯಿ ಹಣವನ್ನು ಅಭಿವೃದ್ಧಿಪಡಿಸಲು ನಗರಸಭೆಯು ಪ್ರತಿ ವರ್ಷ ಬಜೆಟ್‌ನಲ್ಲಿ ಮೀಸಲಿಡಬೇಕು. ಬಡಜನರ ಮಕ್ಕಳ ವಿದ್ಯಾಬ್ಯಾಸಕ್ಕೆ ಹಾಗೂ ಉನ್ನತ ಶಿಕ್ಷಣ ಪಡೆಯಲು ವ್ಯಾಸಂಗಕ್ಕಾಗಿ ಎಲ್ಲಾ ರೀತಿಯ ಸೌಲಭ್ಯಗಳನ್ನು ಪಕ್ಷಪಾತವಿಲ್ಲದೆ ಒದಗಿಸಲು ಯೋಜನೆ ರೂಪಿಸಿ ಕ್ರಮ ಕೈಗೊಳ್ಳಬೇಕು ಹಾಗೂ ಜಾಗೃತಿ ಮೂಡಿಸಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯ ಸಿದ್ದರಾಜು, ಮಹಿಳಾ ಮುನ್ನಡೆಯ ಶಿಲ್ಪಾ, ಶ್ರಮಿಕರಾದ ಶಿವ, ವಿಜಿ ಹಾಗೂ ರತ್ನ ಸೇರಿದಂತೆ ಮತ್ತಿತರರು ಹಾಜರಿದ್ದರು.

# ಸಡಗರ ಸಂಭ್ರಮದಿಂದ ನಡೆದ ನಮ್ಮೂರ ಹನುಮೋತ್ಸವ ಬೃಹತ್ ಶೋಭಾಯಾತ್ರೆ

**ಕೆ. ಆರ್. ನಗರ:** ನಮ್ಮೂರ ಹನುಮೋತ್ಸವ ಬೃಹತ್ ಶೋಭಾಯಾತ್ರೆ ನಗರದ ಪ್ರಮುಖ ಬೀದಿಗಳಲ್ಲಿ ಹನುಮ ಮೂರ್ತಿಯೊಂದಿಗೆ ವಿವಿಧ ಜಾನಪದ ಕಲಾತಂಡಗಳು ಮತ್ತು ಮಂಗಳವಾದ್ಯ ಹಾಗೂ ಎಲ್ಲಾ ಹನುಮ ಭಕ್ತ ಸಮೂಹದೊಂದಿಗೆ ಬಹಳ ವಿಜೃಂಭಣೆಯಿಂದ ಸಡಗರ ಸಂಭ್ರಮದಿಂದ ನಡೆಯಿತು

ಶಾಸಕ ಡಿ .ರವಿಶಂಕರ್ ಪೂಜೆ ಸಲ್ಲಿಸುವದರೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು ಬಿಗಿ ಪೊಲೀಸ್ ಭದ್ರತೆ: ಕೆ. ಆರ್. ನಗರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್ಪೆಕ್ಟರ್ ಶಿವಪ್ರಕಾಶ್ ನೇತತ್ವದಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಯಿತು ಈ ವೇಳೆ ಶಾಂತಿ ಸುವ್ಯವಸ್ಥೆ ಕಾಪಾ ಡಲು ಮೂವರು ಡಿವೈಎಸ್ಪಿ, 7 ಮಂದಿ ಸಿಪಿಐ,

26 ಎಸ್‌ಐ, 40 ಎಎಸ್‌ಐ, 285 ಮುಖ್ಯಪೇದೆ, 3 ಕೆಎಸ್‌ಆರ್‌ಪಿ, ಡಿ.ಆರ್ ತುಕಡಿಯನ್ನು ಭದ್ರತೆಗಾಗಿ ನಿಯೋಜಿಸಲಾಗಿತ್ತು. ಅಲ್ಲದೇ ಪಟ್ಟಣದ ಕೆಲವೆಡೆ ಸೂಕ್ಷ್ಮ ಸ್ಥಳಗಳಲ್ಲಿ ಸಿಸಿ ಟಿವಿಗಳನ್ನು ಅಳವಡಿಸಲಾಗಿತ್ತು



ಶೋಭಾಯಾತ್ರೆ ಬಜಾರ್ ರಸ್ತೆ ಮೂಲಕ ಗರುಡ ಗಂಭ ವೃತ್ತದಲ್ಲಿ ಸಾಗಿ ಹಾಸನ–ಮೈಸೂರು ರಸ್ತೆ ಮಾರ್ಗವಾಗಿ ಪುರಸಭೆವೃತ್ತದ ಮೂಲಕ ಸಿ.ಎಂ.ರಸ್ತೆ ಮುಖಾಂತರ ಗರಡಿ ಮನೆ ರಸ್ತೆ ಮೂಲಕ ತಲುಪಿತು

ಈ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿ ಸುರೇಂದ್ರ ಮೂರ್ತಿ. ಎಸ್‌ಐ ಸ್ವಾಮಿಗೌಡ, ಮುಖ್ಯಪೇದೆ ಪರಶುರಾಮ್ ಸಾರ್ವ ಜನಿಕ ಹನುಮ ಜಯಂತಿ ಆಚರಣಾ ಸಮಿತಿ ಅಧ್ಯಕ್ಷ ಕೃಷ್ಣಭಟ್, ಸದಸ್ಯ, ನಂಜುಂಡ, ಶ್ರೀ ಮಾರುತಿ ಯುವಕರ ಸಂಘದ ಅಧ್ಯಕ್ಷ ಗೌತಮ್ ಜಾದವ್ .ಕಾರ್ಯ ದರ್ಶಿ ವಿನಯ್, ಪ್ರಚಾರ ಸಮಿತಿ ಅಧ್ಯಕ್ಷ ದರ್ಶನ್, ಪೂಜಾ ಸಮಿತಿ ಅಧ್ಯಕ್ಷ ಲೋಕಿ, ಖಜಾಂಚಿ ಮಂಜು, ಪದಾಧಿಕಾರಿಗಳಾದ ಧನುಷ್, ನವೀನ್, ಸುಹಾಸ್, ತೇಜಸ್, ಮಹೇಂದ್ರ, ಕನಕ, ಕರುಣಾ, ಪುನೀತ್, ಉಜ್ವಲ್, ಹೇಮಂತ್, ಗಿರೀಶ್ ಹಾಗೂ ಸಂಘ ಸಂಸ್ಥೆಯ ಅಧ್ಯಕ್ಷರು. ಪುರಸಭಾ ಸದಸ್ಯರು. ಹನುಮ ಭಕ್ತರು ಇನ್ನಿತರರು ಹಾಜರಿದ್ದರು.

# ಬಹುತ್ವದ ದನಿಗೆ ವೈಚಾರಿಕತೆ, ಸೌಹಾರ್ದತೆಯ ಮೆರಗು: ಸಜಗೌ

**ಮಂಡ್ಯ:** ಕನ್ನಡ ಸಾಹಿತ್ಯದ ಮಹಾಸಾಗರದ ಪ್ರತಿರೂಪದಂತಿರುವ ಕುವೆಂಪು ಅವರು, ತಮ್ಮ ಸಾಹಿತ್ಯದ ಮೂಲಕ ಭಾರತದ ಬಹುತ್ವದ ದನಿಗೆ ವೈಚಾರಿಕತೆಯ, ಸೌಹಾರ್ದತೆಯ, ವಿಶ್ವಮಾನವತೆಯ ಬನಿಯನ್ನು ತುಂಬಿದ್ದರಿಂದ, ಈ ನೆಲದಲ್ಲಿ ಇನ್ನೂ ಜೀವಪರತೆಯ ಒಲವು–ನಿಲುವು ಉಸಿರಾಡುತ್ತಿದೆ ಎಂದು ಸಾಹಿತಿ ಟಿ. ಸತೀಶ್ ಜವರೇಗೌಡ ನುಡಿದರು.



ಪರಿಚಯ ಪ್ರಕಾಶನದ ವತಿಯಿಂದ ಇಲ್ಲಿನ ಸುಭಾಷ್ ನಗರದ ಶಿವನಂಜಪ್ಪ ಉದ್ಯಾನವನದಲ್ಲಿ 'ಓದಿನ ಹಾದಿ'ಯ ಆರನೆಯ ಸಂಚಿಕೆಯ ಮಾಲೆಯಡಿಯಲ್ಲಿ ನಡೆದ 'ನೆನಪಿನ ದೋಣಿಯಲ್ಲಿ ಕುವೆಂಪು' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾಹಿತ್ಯದ ಬಹುಮುಖಿ ಪ್ರಕಾರದಲ್ಲಿ ಕೃಷಿ ಮಾಡಿರುವ ಕುವೆಂಪು ದರ್ಶನವೆಂದರೆ ಪ್ರಕೃತಿಯ, ಆಧ್ಯಾತ್ಮದ, ಜೀವನಾನುಭವದ, ವೈಚಾರಿಕತೆಯ ದರ್ಶನವೇ ಆಗಿದೆ. ಜೀವಪರತೆಯ ದನಿ ಹೊಂದಿರುವ ಕುವೆಂಪು ಸಾಹಿತ್ಯದಲ್ಲಿ ವರ್ತಮಾನದ ಹಲವು ತಲ್ಲಣಗಳಿಗೆ ಸಿದ್ಧೌಷಧವಿದೆ. ಈ ಕಾರಣದಿಂದ ಹೊಸ ತಲೆಮಾರಿನ ವಿದ್ಯಾರ್ಥಿ ಯುವಜನರಿಗೆ ಕುವೆಂಪು ಸಾಹಿತ್ಯವನ್ನು ಓದಿಸುವ ಮಹತ್ಕಾರ್ಯ ಆಗಬೇಕಿದೆ ಎಂದರು.

ಕುವೆಂಪು ಎಂದರೆ ಚಳವಳಿ. ಅವರು ಕನ್ನಡ ನೆಲದಲ್ಲಿ ನಡೆದ ಹಲವಾರು ಚಳವಳಿಗಳಿಗೆ ತಾಯ್ತನ ಕೊಟ್ಟುವರು. ಸ್ವಾತಂತ್ರ್ಯ ನಂತರ ನಡೆದ ಕರ್ನಾಟಕ ಏಕೀಕರಣ, ಕನ್ನಡ ಭಾಷಾ, ಜಾತಿ ವಿನಾಶ, ರೈತ, ದಲಿತ, ಬೂಸಾ ಹಾಗೂ ವೈಚಾರಿಕ ಚಳವಳಿಗಳಿಗೆ ಕಸುವು ತುಂಬಿದವರು. ಇಂದಿಗೂ ಈ ಎಲ್ಲಾ ಚಳವಳಿಗಳ ಕಾವು ಆರದಂತೆ ಕಾಯುತ್ತಿರುವುದು ಕುವೆಂಪು ಅವರ ಸಾಹಿತ್ಯ ಮಾತ್ರ ಎಂದು ಪ್ರತಿಪಾದಿಸಿದರು.

ಜನ ಸಮುದಾಯದಲ್ಲಿ ವೈಚಾರಿಕ ದೃಷ್ಟಿ, ವೈಜ್ಞಾನಿಕ ಮನೋಭಾವ, ವಿಶ್ವಮಾನವ ಪ್ರಜ್ಞೆಯನ್ನು ಎಚ್ಚರವಾಗಿಡುವ ಅಗತ್ಯವಿದೆ. ಈ ನಿಟ್ಟಿನಲ್ಲಿ ಜೀವಾನುಭವದ ಸಾಂದ್ರತೆಯೊಂದಿಗೆ ವಿಶ್ವಾತ್ಮಕ ದೃಷ್ಟಿಕೋನವನ್ನೂ, ಸೃಜನಶೀಲತೆಯ ದಟ್ಟವಾದ ಸ್ಪರ್ಶವನ್ನೂ ಹೊಂದಿರುವ ಕುವೆಂಪು ಸಾಹಿತ್ಯವನ್ನು ಪ್ರಚಾರ ಮಾಡಬೇಕಿದೆ. ಆಗ ಮಾತ್ರ ಅರಿವಿನ ದೀವಿಗೆ ಬೆಳಗಿ, ಈ ನೆಲದಲ್ಲಿ ಸೌಹಾರ್ದತೆಯು ನೆಲೆಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಪ್ರಗತಿಪರ ಚಿಂತಕ ಮುಕುಂದ ಹಾಲಹಳ್ಳಿ ಮಾತನಾಡಿ, ಸಮಾಜದಲ್ಲಿ ಪುಸ್ತಕ ಓದುವ ಹವ್ಯಾಸದ ಕ್ರಾಂತಿಯಾಗಬೇಕಿದೆ. ಹಿರಿಯರು ತಮ್ಮ ಮಕ್ಕಳನ್ನು ಮೊಬೈಲಿನಿಂದ ದೂರವಿರುವಂತೆ ಮಾಡಬೇಕು. ಅವರನ್ನು ಪುಸ್ತಕ ಓದುವ ಕಡೆಗೆ ಹಚ್ಚಬೇಕು. ಎಲ್ಲರೂ ಓದಿನ ಹಾದಿಯಲ್ಲಿ ಸಾಗಿದಾಗ ಮನಸ್ಸು ಪರಿವರ್ತನೆ ಆಗುತ್ತದೆ. ಓದಿನ ಪ್ರೇರಣೆಗೆ ಶ್ರಮಿಸುತ್ತಿರುವ ಪರಿಚಯ ಪುಸ್ತಕ ಪ್ರಕಾಶನದ ಕಾರ್ಯ ಶ್ಲಾಘನೀಯ ಎಂದರು.

ವಕೀಲ ಜೀರಹಳ್ಳಿ ರಮೇಶ್ ಗೌಡ ಕುವೆಂಪು 'ನೆನಪನ ದೋಣಿಯಲ್ಲಿ' ಆತ್ಮಕಥೆಯ ಆಯ್ದ ಭಾಗಗಳನ್ನು ಓದಿದರು.

ಉಪನ್ಯಾಸಕಿ ಆಶಾ ಹನಿಯಂಬಾಡಿ ಕುವೆಂಪು ವಿರಚಿತ ಕವಿತೆ ವಾಚಿಸಿದರು. ಗಾಯಕರಾದ ಗಾಮನಹಳ್ಳಿ ಸ್ವಾಮಿ, ಡೇವಿಡ್ ಪ್ರತಿಭಾಂಜಲಿ, ಎಚ್.ಎನ್. ದೇವರಾಜ್, ವಿಕಾಸ್, ವೈರಮುಡಿ ಗೀತಗಾಯನ ನಡೆಸಿಕೊಟ್ಟರು.

ಪರಿಚಯ ಪ್ರಕಾಶನದ ಎಂ.ಎನ್. ಶಿವಕುಮಾರ್ ಆರಾಧ್ಯ, ಚಿತ್ರಕೂಟದ ಅರವಿಂದ ಪ್ರಭು ಉಪಸ್ಥಿತರಿದ್ದರು.

# ಅಪೌಷ್ಠಿಕ ಮಕ್ಕಳ ಪುನರ್ವಸತಿ ಕೇಂದ್ರಕ್ಕೆ ಜಿ.ಪಂ. ಸಿಇಒ ಭೇಟಿ



**ಮಂಡ್ಯ:** ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಸಹಕಾರ ಪಡೆದು ಅಪೌಷ್ಠಿಕ ಮಕ್ಕಳನ್ನು ಪುನರ್ವಸತಿ ಕೇಂದ್ರಕ್ಕೆ ಸೇರ್ಪಡೆ ಮಾಡುವ ಮೂಲಕ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳಿಗೆ ಸೂಕ್ತ ಚಿಕಿತ್ಸೆ ದೊರೆಯುವಂತೆ ಮಾಡುವಂತೆ ಮಂಡ್ಯ ಜಿ.ಪಂ. ಸಿಇಓ ನಂದಿನಿ ಕೆ.ಆರ್. ಸೂಚಿಸಿದರು.

ಬುಧವಾರ ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿನ ಅಪೌಷ್ಠಿಕ ಮಕ್ಕಳ ಪುನರ್ವಸತಿ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು, ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಪೌಷ್ಠಿಕಾಂಶ ಪುನರ್ವಸತಿ ಕೇಂದ್ರಕ್ಕೆ ಕರೆತರಲು ಮಕ್ಕಳ ತಾಯಂದಿರಿಗೆ ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಈವರೆಗೆ ಪೌಷ್ಠಿಕಾಂಶ ಪುನರ್ವಸತಿ ಕೇಂದ್ರಕ್ಕೆ ಎಷ್ಟು ಮಕ್ಕಳು ದಾಖಲಾಗಿದ್ದಾರೆ, ಎಷ್ಟು ಮಕ್ಕಳು ಅಪೌಷ್ಠಿಕತೆಯಿಂದ ಹೊರಬಂದಿದ್ದಾರೆ ಎಂಬುದರ ಬಗ್ಗೆ ಆಸ್ಪತ್ರೆಯ ವೈದ್ಯರಿಂದ ಮಾಹಿತಿ ಪಡೆದರು. ಮುಂದಿನ ಸಭೆಯಲ್ಲಿ ಅಂಕಿ– ಅಂಶಗಳೊಂದಿಗೆ ವರದಿ ನೀಡಬೇಕು. ಮಕ್ಕಳು ಹಾಗೂ ತಾಯಿಂದಿರಿಗೆ 14 ದಿನ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಬೇಕು ಎಂದು ತಿಳಿಸಿದರು.

ಪೌಷ್ಠಿಕಾಂಶ ಪುನರ್ವಸತಿ ಕೇಂದ್ರದಲ್ಲಿ ಮಕ್ಕಳಿಗೆ ಹಾಗೂ ತಾಯಂದಿರಿಗೆ ದೊರೆಯುವ ಸೌಲಭ್ಯಗಳ ಬಗ್ಗೆ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆರಿಂದ ವ್ಯಾಪಕ ಅರಿವು ಮೂಡಿಸಲು ಅಗತ್ಯ ಕ್ರಮವಹಿಸುವಂತೆ ಸಿಇಓ ಅವರು ಸೂಚಿಸಿದರು.

ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಯಾಮ್ (ವಿಪರೀತ ಕಡಿಮೆ ತೂಕ ಮಕ್ಕಳು) ಮತ್ತು ಮ್ಯಾಮ್ (ಸಾಧಾರಣ ತೂಕದ ಮಕ್ಕಳು) ಮಕ್ಕಳನ್ನು ಗುರುತಿಸಿ ಮಕ್ಕಳನ್ನು ಎನ್ ಆರ್ ಸಿ ಕೇಂದ್ರಕ್ಕೆ ಕರೆತರುವಂತಹ ಜವಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವಂತೆ ಆಯಾ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಸೂಚಿಸಬೇಕು ಎಂದು ತಿಳಿಸಿದರು.

ಅಪೌಷ್ಠಿಕ ಮಕ್ಕಳನ್ನು ಸ್ಕ್ರೀನಿಂಗ್ ಮಾಡಿ ಸ್ಯಾಮ್ ಹಾಗೂ ಮ್ಯಾಮ್ ಗುರುತಿಸಲಾಗುತ್ತಿದೆ ಆದರೆ ತಾಯಿ ಹಾಗೂ ಮಕ್ಕಳನ್ನು ಒಪ್ಪಿಸಿ ಎನ್ ಆರ್ ಸಿ ಗೆ ಕರೆತರಲು ಕಷ್ಟವಾಗುತ್ತಿದೆ ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಎಲ್ಲರು ಒಟ್ಟಾಗಿ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ಪ್ರತಿ ಸೋಮವಾರ ಕ್ಷೇತ್ರ ಬೇಟಿ ನೀಡುತ್ತಿದ್ದು, ಆ ಸಂದರ್ಭದಲ್ಲಿ ಆಶಾ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯರು ತಮ್ಮ ವ್ಯಾಪ್ತಿಯಲ್ಲಿ ಎಷ್ಟು ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆ ಹಾಗೂ ಎಷ್ಟು ಮಕ್ಕಳನ್ನು ಎನ್ ಆರ್ ಸಿ ಗೆ ದಾಖಲಿಸಲಾಗಿದೆ ಎಂಬ ಬಗ್ಗೆ ಪ್ರಸ್ತುತಪಡಿಸಲು ಕೋರಿದರು. ಎನ್ ಆರ್ ಸಿ ಯಲ್ಲಿ ದಾಖಲಾಗಿರುವ ಸ್ಯಾಮ್ ಮತ್ತು ಮ್ಯಾಮ್ ಮಕ್ಕಳ ತಾಯಿಂದರ ಜೊತೆ ಮಾತನಾಡಿದ ಅವರು ಮಕ್ಕಳಿಗೆ ಮನೆಯಲ್ಲಿ ನೀಡುತ್ತಿರುವ ಪೌಷ್ಠಿಕ ಆಹಾರದ ಬಗ್ಗೆ ತಾಯಿಂದಿರಿಂದ ಮಾಹಿತಿ ಪಡೆದರು. ಅಂಗನವಾಡಿ ಕಾರ್ಯಕರ್ತೆಯರು ನೀಡಿದ ಸಲಹೆಯ ಮೇರೆಗೆ ಎನ್ ಆರ್ ಸಿ ಕೇಂದ್ರಕ್ಕೆ ಬಂದಿರುವುದಾಗಿ ತಾಯಿಂದಿರು ಮಾಹಿತಿ ನೀಡಿದರು. ಇದೇ ವೇಳೆ ಮಿಮ್ಸ್ ಹೆಚ್.ಓ.ಡಿ ಡಾ. ಶ್ರೀಧರ್, ಎನ್ ಆರ್ ಸಿ ನೋಡೆಲ್ ಅಧಿಕಾರಿ ಡಾ. ಮಂಜುಳಾ, ಆರ್. ಸಿ. ಹೆಚ್ ಡಾ. ಅಶ್ವತ್, ಜಿಲ್ಲಾ ಕುಷ್ಠ ರೋಗ ನಿಯಂತ್ರಣಾಧಿಕಾರಿ ಡಾ. ಸೋಮಶೇಖರ್ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ಶಾಲೆಗಳಿಂದ ಬೀದಿ ನಾಯಿಗಳ ಗಣತಿ: ಆಕ್ಷೇಪ ವ್ಯಕ್ತಪಡಿಸಿ ನಗರಸಭೆಗೆ ಉಸ್ಮಾರ್ಡ್ ಪತ್ರ

**ರಾಮನಗರ:** ಬೀದಿ ನಾಯಿಗಳ ಸರ್ವೆ ನಡೆಸುವ ಕುರಿತು ಶಾಲಾ ಕಾಲೇಜುಗಳಿಗೆ ಸ್ಥಳೀಯ ಸಂಸ್ಥೆಗಳಿಂದ ಹೊರೆಡಿಸಿರುವ ಆದೇಶಕ್ಕೆ ಜಿಲ್ಲಾ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟ (ಉಸ್ಮಾರ್ಡ್) ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಈ ಸಂಬಂಧ ಒಕ್ಕೂಟದ ಪದಾಧಿಕಾರಿಗಳು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಅವರಿಗೆ ಪತ್ರವನ್ನು ಸಲ್ಲಿಸಿದ್ದಾರೆ ಗಮನ ಸೆಳೆದಿದ್ದಾರೆ.

ಶೈಕ್ಷಣಿಕ ಸಂಸ್ಥೆಗಳು ತಮ್ಮ ಆವರಣದ ಒಳಗೂ ಹೊರಗೂ ಇರುವ ಬೀದಿ ನಾಯಿಗಳ ಸಂಖ್ಯೆಯನ್ನು ಪರಿಶೀಲಿಸಿ ವರದಿ ಮಾಡುವಂತೆ ನೀಡಿರುವ ನಿರ್ದೇಶನವು ಅನಾವಶ್ಯಕ ಹಾಗೂ ಅನಧಿಕೃತವಾಗಿದೆ. ಶೈಕ್ಷಣಿಕ ಸಂಸ್ಥೆಗಳ ಮೂಲ ಜವಾಬ್ದಾರಿ ಕಾನೂನುಬದ್ಧ ಶೈಕ್ಷಣಿಕ ಮಾನದಂಡಗಳನ್ನು ಪಾಲಿಸುವುದಾಗಿದೆ. ಆದರೆ, ಶಾಲೆಗಳಿಗೆ ಸಂಬಂಧರಹಿತ ಕಾರ್ಯಗಳನ್ನು ಹೇರುವುದು ಸರಿಯಲ್ಲ ಎಂದು ಪತ್ರದಲ್ಲಿ ತಿಳಿಸಲಾಗಿದೆ. ಬೀದಿ ಬದಿ ತ್ಯಾಜ್ಯ ಸುರಿಯುತ್ತಿರುವುದರಿಂದ ಬೀದಿ ನಾಯಿಗಳ ಸಂಖ್ಯೆಯ ಹೆಚ್ಚಳಕ್ಕೆ ಪ್ರಮುಖ ಕಾರಣ ಅಲ್ಲಿ ಶೇಖರಣೆಯಾಗುವ ತ್ಯಾಜ್ಯ. ಕಸ ನಿರ್ವಹಣೆಯನ್ನು ನಿಲ್ಲಿಸಿದರೆ ಬಹುಶಃ ನಾಯಿಗಳ ನಿಯಂತ್ರಣ ಸಾಧ್ಯ ಎಂದು ಪತ್ರದಲ್ಲಿ ಅಭಿಪ್ರಾಯ ವ್ಯಕ್ತಪಡಿಸಲಾಗಿದೆ.



**ಸುಪ್ರೀಂಕೋರ್ಟ್ ಸೂಚನೆಗಳ ವ್ಯಾಪ್ತಿ:** Animal Birth Control (Dogs) Rules, 2023 ಅನ್ನು ಜಾರಿಗೊಳಿಸುವ ಜವಾಬ್ದಾರಿಯನ್ನು ಸುಪ್ರೀಂ ಕೋರ್ಟು ರಾಜ್ಯ ಸರ್ಕಾರಗಳು ಮತ್ತು ಸ್ಥಳೀಯ ಸಂಸ್ಥೆಗಳಿಗೆ ನೀಡಿದೆ. ಇದರಲ್ಲಿ ನಾಯಿಗಳ ಲಸಿಕಾಕರಣ ಮತ್ತು ಅವುಗಳನ್ನು ಸುರಕ್ಷಿತ ಸ್ಥಳಾಂತರವನ್ನು ಮಾಡಬೇಕೆಂದು ಸ್ಪಷ್ಟವಾಗಿ ಹೇಳಿದೆ. ಶೈಕ್ಷಣಿಕ ಸಂಸ್ಥೆಗಳು ನಾಯಿಗಳ ಸರ್ವೆ ನಡೆಸಬೇಕು ಎಂದು ಎಲ್ಲಿಯೂ ಹೇಳಿಲ್ಲ. ಬೀದಿ ನಾಯಿಗಳ ಸಮೀಕ್ಷೆ ನಡೆಸಿ ವರದಿ ಮಾಡುವಂತೆ ಸ್ಥಳೀಯ ಸಂಸ್ಥೆಗಳು ಹೊರೆಡಿಸಿರುವ ಸೂಚನೆಗಳು ಶಿಕ್ಷಣ ಇಲಾಖೆಯ ವಿಧಿ–ವಿಧಾನಗಳ ವ್ಯಾಪ್ತಿಯನ್ನು ಮೀರಿದೆ. ಶಿಕ್ಷಕರು ಮತ್ತು ಶೈಕ್ಷಣಿಕ ಸಿಬ್ಬಂದಿಯವರ ಕಾರ್ಯವ್ಯಾಪ್ತಿಗೆ ಸೇರದ ಕರ್ತವ್ಯಗಳನ್ನು ಹೇರುವುದು ಸರಿಯಲ್ಲ ಎಂದು ಪತ್ರದ ಮೂಲಕ ನಗರಸಭಾಧ್ಯಕ್ಷರ ಗಮನ ಸೆಳೆಯಲಾಗಿದೆ.

**ಸಹಕಾರದ ಭರವಸೆ:** ಬೀದಿ ನಾಯಿಗಳ ನಿಯಂತ್ರಣದ ವಿಚಾರದಲ್ಲಿ ಶಿಕ್ಷಣ ಸಂಸ್ಥೆಗಳು ಸ್ಥಳೀಯ ಸಂಸ್ಥೆಗಳಿಗೆ ಸಹಕಾರ ನೀಡಲು ಬಯಸುತ್ತದೆ. ಆದರೆ, ಬಾಹ್ಯ ಪ್ರದೇಶಗಳಲ್ಲಿ ಸರ್ವೆ ನಡೆಸುವುದು ಅಥವಾ ನಾಯಿಗಳ ಗಣತಿ ಒದಗಿಸುವುದು ನಮ್ಮ ಕಾರ್ಯಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ ಎಂದು ತಿಳಿಸಲಾಗಿದೆ.

**ನಗರಸಭಾಧ್ಯಕ್ಷರ ಪ್ರತಿಕ್ರಿಯೆ:** ಖಾಸಗಿ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟದ (ಉಸ್ಮಾರ್ಡ್) ಅಧ್ಯಕ್ಷ ಪ್ರದೀಪ್ ಮತ್ತು ವಿವಿಧ ಶಾಲಾ ಆಡಳಿತದ ಪ್ರಮುಖರಿಂದ ಪತ್ರ ಸ್ವೀಕರಿಸಿದ ನಗರಸಭಾಧ್ಯಕ್ಷ ಕೆ.ಶೇಷಾದ್ರಿಯವರು ಪ್ರತಿಕ್ರಿಯಿಸಿ ಸರ್ಕಾರದಿಂದ ಬಂದ ಸೂಚನೆಗಳನ್ನು ತಲುಪಿಸಲಾಗಿದೆ. ಬೀದಿ ನಾಯಿಗಳ ನಿಯಂತ್ರಣಕ್ಕೆ ಮಕ್ಕಳ ಹಿತದೃಷ್ಟಿಯಿಂದ ನಗರಸಭೆಯ ಕ್ರಮಗಳಿಗೆ ಶಿಕ್ಷಣ ಸಂಸ್ಥೆಗಳಿಂದ ಸಹಕಾರದ ಅಗತ್ಯವಿದೆ, ಒಕ್ಕೂಟದವತಿಯಿಂದ ನೀಡಿರುವ ಪತ್ರಕ್ಕೆ ಸೂಕ್ತವಾಗಿ ಸ್ಪಂದಿಸುವ ಭರವಸೆ ನೀಡಿದ್ದಾರೆ. ಈ ವೇಳೆ ನಗರಸಭೆ ಉಪಾಧ್ಯಕ್ಷೆ ಆಯಿಷಾಬಾನು, ಸ್ಥಾಯಿ ಸಮಿತಿ ಅಧ್ಯಕ್ಷ ಫೈರೋಜ್ ಪಾಷ, ಆಯುಕ್ತ ಡಾ.ಜಯಣ್ಣ ಉಪಸ್ಥಿತರಿದ್ದರು.

# ಎಸ್.ಎಸ್.ಎಲ್.ಸಿ. ಪರೀಕ್ಷೆ: ಕಡಿಮೆ ಫಲಿತಾಂಶ ದಾಖಲಾಗಿದ್ದ ಶಾಲೆಗಳಿಗೆ ಸಿಇಓ ನಂದಿನಿ ಭೇಟಿ





**ಮಂಡ್ಯ:** ಕಳೆದ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕಡಿಮೆ ಫಲಿತಾಂಶ ದಾಖಲಾಗಿದ್ದ ಶಾಲೆಗಳಿಗೆ ಜಿ.ಪಂ. ಸಿಇಓ ನಂದಿನಿ ಕೆ.ಆರ್. ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಂಗಳವಾರ ಕೃಷ್ಣರಾಜ ಪೇಟೆ ತಾಲ್ಲೂಕಿನ ಸಿಂಧಘಟ್ಟ ಗ್ರಾಮದ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಶಾಲೆಯಲ್ಲಿನ ಸಮಸ್ಯೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಕನ್ನಡ ಬಾಷೆಯ ಪಠ್ಯವನ್ನು ಸರಿಯಾಗಿ ಬೋದನೆ ಮಾಡುತ್ತಿಲ್ಲ ಎಂದು ವಿದ್ಯಾರ್ಥಿಗಳು ಸಿಇಓ ರವರಿಗೆ ತಿಳಿಸಿದರು. ಈ ಬಗ್ಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರು ನಾಳೆಯೇ ಶಾಲೆಗೆ ಭೇಟಿ ನೀಡಿ ವಿದ್ಯಾರ್ಥಿಗಳು ತಿಳಿಸಿರುವ ವಿಷಯದ ಬಗ್ಗೆ ಪರಿಶೀಲಿಸಿ ಒಂದು ವಾರದೊಳಗೆ ಸೂಕ್ತ ಕ್ರಮ ತೆಗೆದುಕೊಂಡು ವರದಿ ಸಲ್ಲಿಸಲು ಸೂಚಿಸಿದರು.

ಮಧ್ಯಾಹ್ನ ಬಿಸಿ ಊಟ ಯೋಜನೆಯಡಿ ಶಾಲೆಗೆ ಸರಬರಾಜು ಮಾಡಿರುವ ಅಡುಗೆ ಎಣ್ಣೆಯ ಅವಧಿ ಮುಕ್ತಾಯವಾಗಿರುವುದನ್ನು ಗಮನಿಸಲಾಗಿದ್ದು, ಈ ಬಗ್ಗೆ ಮಧ್ಯಾಹ್ನ ಬಿಸಿ ಊಟ ಯೋಜನೆಯ ಶಿಕ್ಷಣಾಧಿಕಾರಿ ಮತ್ತು ಸಹಾಯಕ ನಿರ್ದೇಶಕರು ಪರಿಶೀಲಿಸಿ ವರದಿ ನೀಡುವಂತೆ ಜಿ.ಪಂ. ಸಿಇಓ ಸೂಚಿಸಿದರು.

ಅಂಗನವಾಡಿ ಕೇಂದ್ರಗಳಿಗೆ ಭೇಟಿ: ಸಿಂದಘಟ್ಟ ಗ್ರಾಮದಲ್ಲಿನ 3 ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳ ಕಲಿಕೆಯ ವಿಧಾನ, ಪೌಷ್ಠಿಕ ಆಹಾರ ವಿತರಣೆ, ಮೂಲಭೂತ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದರು. ವಿಶೇಷ ಚೇತನ ಅಂಗನವಾಡಿ ಕಾರ್ಯಕರ್ತೆ ತುಳಸಿ ರವರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತಿದ್ದು, ಈ ಬಗ್ಗೆ ಮಕ್ಕಳ ಕಲಿಕಾ ಮಟ್ಟವನ್ನು ಪರಿಶೀಲಿಸಿ ತುಳಸಿರವರ ಕಾರ್ಯವನ್ನು ಪ್ರಶಂಸಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ: ಸಿಂದಘಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಸಾರ್ವಜನಿಕರು ಮತ್ತು ರೋಗಿಗಳೊಂದಿಗೆ ಸಂವಾದ ನಡೆಸಿ ಆಸ್ಪತ್ರೆಯಲ್ಲಿ ದೊರೆಯುವ ಚಿಕಿತ್ಸೆಯ ಬಗ್ಗೆ ಮಾಹಿತಿ ಪಡೆದರು. ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇದೆ. ಆದರೂ ಉತ್ತಮ ಚಿಕಿತ್ಸೆ ದೊರೆಯುತ್ತಿದೆ ಎಂದು ಸಾರ್ವಜನಿಕರು ಮಾಹಿತಿ ನೀಡಿದರು.

ಆಸ್ಪತ್ರೆಯಲ್ಲಿನ ಔಷದಿಗಳು ಮತ್ತು ಇತರೆ ಸೌಲಭ್ಯಗಳ ಬಗ್ಗೆ ವೈದ್ಯರು ಮತ್ತು ಸಿಬ್ಬಂದಿಗಳಿಂದ ಮಾಹಿತಿ ಪಡೆದು ಈ ಬಗ್ಗೆ ಡಿಹೆಚ್ಓ ರವರಿಂದ ಮಾಹಿತಿ ಪಡೆದು ಅಗತ್ಯ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಪಶು ಆಸ್ಪತ್ರೆಯಲ್ಲಿನ ಸೌಲಭ್ಯಗಳ ಪರಿಶೀಲನೆ: ಸಿಂಧಘಟ್ಟ ಗ್ರಾಮದ ಪಶು ಆಸ್ಪತ್ರಗೆ ಭೇಟಿ ನೀಡಿ ಔಷದಿಗಳ ಸಂಗ್ರಹ, ಆಸ್ಪತ್ರೆಯ ಮೂಲಭೂತ ಸೌಲಭ್ಯ ಹಾಗೂ ಲಸಿಕಾಕರಣದ ಬಗ್ಗೆ ಮಾಹಿತಿ ಪಡೆದರು. ಆಸ್ಪತ್ರೆ ವ್ಯಾಪ್ತಿಯಲ್ಲಿ ಗ್ರಾಮಗಳಲ್ಲಿನ ಪಶುಗಳ ಸಂಖ್ಯೆಗೆ ಅನುಗುಣವಾಗಿ ಔಷದಿಗಳ ಸಂಗ್ರಹ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದೆ ಎಂದು ವೈದ್ಯಾಧಿಕಾರಿಗಳು ಮಾಹಿತಿ ನೀಡಿದರು.

ಗ್ರಾ.ಪಂ. ಗ್ರಂಥಾಲಯಕ್ಕೆ ಮೆಚ್ಚುಗೆ: ಸಿಂಧಘಟ್ಟ ಗ್ರಾಮ ಪಂಚಾಯತ್ ಕಚೇರಿಯ ಗ್ರಂಥಾಲಯಕ್ಕೆ ಭೇಟಿ ನೀಡಿ ಪುಸ್ತಕಗಳ ನಿರ್ವಹಣೆ ಮತ್ತು ಗ್ರಂಥಾಲಯದಲ್ಲಿನ ಸೌಲಭ್ಯಗಳನ್ನು ಪರಿಶೀಲಿಸಿ ಪಿಡಿಓ ವಾಣಿರ ಹಾಗೂ ಗ್ರಂಥಪಾಲಕರಾದ ವಸಂತಮ್ಮವರನ್ನು ಪ್ರಶಂಸಿಸಿದರು. ಗ್ರಾ.ಪಂ. ನಲ್ಲಿ 2 ಗ್ರಂಥಾಲಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯತ್ ಕಚೇರಿಯ ಅಭಿಲೇಖಾಲಯಕ್ಕೆ ಭೇಟಿ ನೀಡಿ ಗ್ರಾ.ಪಂ.ನ ಕಡತಗಳು ಮತ್ತು ಇ-ಸ್ವತ್ತು ದಾಖಲೆಗಳನ್ನು ಸಂಗ್ರಹಿಸಿಟ್ಟಿರುವ ಬಗ್ಗೆ ಪರಿಶೀಲಿಸಿದರು. ಅಭಿಲೇಖಾಲಯದ ನಿರ್ವಹಣೆ ಕಾಮಗಾರಿ ಪ್ರಗತಿಯಲ್ಲಿದೆ ಹಾಗೂ ಕಡತಗಳನ್ನು ಎ,ಬಿ,ಸಿ,ಡಿ ಎಂದು ವಿಂಗಡಿಸಲಾಗುತ್ತಿದ್ದು ಒಂದು ತಿಂಗಳೊಳಗಾಗಿ ಅಭಿಲೇಖಾಲಯ ಪೂರ್ಣಗೊಳಿಸಲಾಗುವುದು ಎಂದು ಪಿಡಿಓ ರವರು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿ ತಿಮ್ಮೇಗೌಡ ವೈ.ಕೆ, ಅಲ್ಪ ಸಂಖ್ಯಾತ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರುದ್ರೇಶ್, ಬಿಸಿ ಊಟ ಯೋಜನೆಯ ಸಹಾಯಕ ನಿರ್ದೇಶಕ ಯತೀಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ವಾಣಿ ಸೇರಿದಂತೆ ಇತರರು ಹಾಜರಿದ್ದರು.

## ಸಮಾಜ ಕಲ್ಯಾಣ ಇಲಾಖೆಯ ಬಾಲಕರ ವಸತಿ ನಿಲಯದ ಪರಿಶೀಲನೆ

**ಸಿಂದಘಟ್ಟ ಗ್ರಾಮದ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿ ಹಾಸ್ಟೆಲ್ ನಲ್ಲಿ ನಿಗದಿತ ಮೆನು ಪ್ರಕಾರ ಗುಣಮಟ್ಟದ ಶುಚಿ, ರುಚಿಯಾದ ಊಟೋಪಹಾರ ಒದಗಿಸುತ್ತಿರುವ ಬಗ್ಗೆ ಹಾಗೂ ಶೌಚಾಲಯ, ಮಲಗುವ ಕೋಣೆ ಸೇರಿದಂತೆ ಇತರೆ ಸೌಲಭ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು.**

**ವಸತಿನಿಲಯಗಳಲ್ಲಿನ ಕುಂದು ಕೊರತೆ ಆಲಿಸಲು ನೀಡಲಾಗಿರುವ ಸಹಾಯವಾಣಿ ಸಂಖ್ಯೆಯನ್ನು ಹಾಸ್ಟೆಲ್ ನ ಊಟದ ಹಾಲ್, ನೋಟೀಸ್ ಬೋರ್ಡ್ ಸೇರಿದಂತೆ ಇತರೆ ಕಡೆಗಳಲ್ಲಿ ಅಳವಡಿಸುವಂತೆ ಸೂಚಿಸಿದರು.**

# ಜಿಲ್ಲಾಧಿಕಾರಿಗಳಿಂದ ಗುತ್ತಲು ಕೆರೆ ಭೇಟಿ: ಪರಿಶೀಲನೆ



**ಮಂಡ್ಯ:** ನಗರದ ಗುತ್ತಲು ಕೆರೆಗೆ ತ್ಯಾಜ್ಯ ನೀರು ಹರಿಸಲಾಗುತ್ತಿದ್ದು ಈ ಸಂಬಂಧ ಲೋಕಾಯುಕ್ತದಲ್ಲಿ ಸ್ವಯಂ ಪ್ರೇರಿತ ದೂರು ದಾಖಲಾಗಿದೆ.

ಈ ಹಿನ್ನೆಲೆಯಲ್ಲಿ ಗುತ್ತಲು ಕೆರೆಯಲ್ಲಿರುವ ತ್ಯಾಜ್ಯ ನೀರು ಸಂಸ್ಕರಣ ಘಟಕದ ಉನ್ನತಿ ಕರಣಕ್ಕಾಗಿ (upgradation) 30 ಕೋಟಿ ಟೆಂಡರ್ ಕರೆದು, ಮಾರ್ಚ್ ನಲ್ಲಿ ಗುತ್ತಿಗೆದಾರರಿಗೆ ಕೆಲಸ ಆರಂಭಿಸಲು ಆದೇಶ ನೀಡಲಾಗಿದೆ. ಆದರೂ ಕೆಲಸ ಆರಂಭಿಸಲು ತಡವಾಗಿದೆ. ಕೆಲಸ ಯಾವ ಹಂತಗಳಲ್ಲಿ ತಡವಾಗಿದೆ ಎಂಬುದರ ಬಗ್ಗೆ ಪರಿಶೀಲಿಸಲು ಡಿಸಿ ಕುಮಾರ ಗುತ್ತಲು ಕೆರೆಗೆ ಭೇಟಿ ನೀಡಿ ಪರಿಶೀಲನೆ ಮಾಡಿದರು

ಪರಿಶೀಲನೆ ಸಮಯದಲ್ಲಿ ಗುತ್ತಲು ಕೆರೆಗೆ ಹಾಲಹಳ್ಳಿ ಬಡಾವಣೆ ಹಾಗೂ ಸುತ್ತ ಮುತ್ತಲಿನ ಪ್ರದೇಶದ ಒಳಚರಂಡಿ ಕೊಳವೆ ಮಾರ್ಗವನ್ನು ನೇರವಾಗಿ ತೆರೆದ ಚರಂಡಿಗೆ ಸಂಪರ್ಕ ಕಲ್ಪಿಸಿದ್ದು, ಇದರಿಂದ ತ್ಯಾಜ್ಯ ನೀರು ಕೆರೆಗೆ ತ್ಯಾಜ್ಯ ನೀರು ಹರಿದು ಬರುತ್ತಿದೆ

ಅಲ್ಲದೆ ಮ್ಯಾನ್ಹೋಲ್ಗಳಿಂದ ತ್ಯಾಜ್ಯ ನೀರು ಶುದ್ದೀಕರಣ ಘಟಕಕ್ಕೆ ರೊಚ್ಚು ನೀರನ್ನು ಪಂಪ್ ಮಾಡಿ ಸಂಸ್ಕರಿಸಬೇಕು ಎಂದು ಈಗಾಗಲೇ ಅನುಮೋದನೆಗೊಂಡು ಕಾಮಗಾರಿ ನಿರ್ವಹಿಸಲು ಕಾರ್ಯದೇಶ ನೀಡಿರುವ ಟೆಂಡರ್ ದಾರರಿಗೆ, KUIDFC ಹಾಗೂ ನಗರಸಭೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು. ತ್ಯಾಜ್ಯ ನೀರು ಶುದ್ದೀಕರಣ ಘಟಕಗಳಲ್ಲಿ ಅಳವಡಿಸಿರುವ ಎಸ್.ಟಿ.ಪಿಯನ್ನು ವೈಜ್ಞಾನಿಕ ರೀತಿಯಲ್ಲಿ ನಿರ್ವಹಣೆ ಮಾಡಬೇಕು. ತ್ಯಾಜ್ಯ ನೀರು ಶುದ್ದೀಕರಣ ಘಟಕದಲ್ಲಿ ಶುದ್ದೀಕರಿಸಿದ ನೀರನ್ನು ಮಂಡಳಿಯು ನಿಗಧಿಪಡಿಸಿರುವ ಮಾನಕಗಳಿಗೆ ಅನುಗುಣವಾಗಿ ಸಂಸ್ಕರಣೆ ಮಾಡಿ ಸಮೀಪದಲ್ಲಿರುವ ವ್ಯವಸಾಯ ಭೂಮಿಗೆ ಹಾಗೂ ತೋಟಗಾರಿಕೆಗೆ ಉಪಯೋಗಿಸಲು ಸೂಕ್ತ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಈ ವಿಚಾರದಲ್ಲಿ, ಪ್ರತಿ 15 ದಿನಗಳಿಗೊಮ್ಮೆ ಕೆಲಸದ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ಕರೆಯಬೇಕು ಎಂದು ಸೂಚನೆ ನೀಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾಧಿಕಾರಿ ನರಸಿಂಹಮೂರ್ತಿ, ನಗರಾಭಿವೃದ್ಧಿ ಕೋಶದ ಕಾರ್ಯಪಾಲಕ ಅಭಿಯಂತರ ಪ್ರತಾಪ್, ನಗರಸಭೆ ಪೌರಾಯುಕ್ತೆ ಪಂಪಶ್ರೀ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಎಸ್.ಎಸ್. ಎಲ್.ಸಿ ಫಲಿತಾಂಶ ಸುಧಾರಿತ ವಿಜ್ಞಾನ ಕಾರ್ಯಾಗಾರ



**ಮಂಡ್ಯ:** ಮಂಡ್ಯ ಉತ್ತರ ವಲಯದ ಎಸ್.ಎಸ್. ಎಲ್.ಸಿ ಫಲಿತಾಂಶ ಸುಧಾರಿತ ವಿಜ್ಞಾನ ಕಾರ್ಯಾಗಾರ ದೊಡ್ಡ ಗರುಡನಹಳ್ಳಿ ಪ್ರೌಢಶಾಲೆಯಲ್ಲಿ ಬುಧವಾರ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಹೇಮರಾಜು ವಹಿಸಿದ್ದರು.

ಕಾರ್ಯಗಾರವನ್ನು ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕ ಸಂಘದ ಅಧ್ಯಕ್ಷರಾದ ಎನ್. ಗೋಪಿನಾಥ್ ಗಿಡಕ್ಕೆ ನೀರನ್ನು ಹಾಕುವುದರ ಮೂಲಕ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ದೊಡ್ಡ ಗರಡನಹಳ್ಳಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಬಸವರಾಜು, ಶಿಕ್ಷಣ ಸಂಯೋಜಕ ಪರಶಿವಮೂರ್ತಿ, ಮುಖ್ಯ ಶಿಕ್ಷಕರ ಸಂಘದ ಖಜಾಂಚಿ ಜಯಚಂದ್ರ, ಸಹ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಅಶೋಕ್, ಹಾಗೂ ಎಲ್ಲಾ ವಿಜ್ಞಾನ ಶಿಕ್ಷಕರು ಕಾರ್ಯಗಾರದಲ್ಲಿ ಭಾಗವಹಿಸಿದ್ದರು, ವಿಷಯ ಸಂಪನ್ಮೂಲ ಶಿಕ್ಷಕರಾದ ರವಳಯ್ಯ ಹಾಗೂ ಮಂಜುಳಾ ರವರು ತರಗತಿ ನಡೆಸಿಕೊಟ್ಟರು

# ರೈಲಿನಲ್ಲಿ ನಿದ್ದೆಗೆ ಜಾರಿದ ವ್ಯಾಪಾರಿ; 5.53 ಕೋಟಿ ರೂ ಮೌಲ್ಯದ ಚಿನ್ನಾಭರಣ ಕಳ್ಳತನ!

**ಮುಂಬೈ:** ಮುಂಬೈ ಮೂಲದ ಚಿನ್ನದ ವ್ಯಾಪಾರಿಯೊಬ್ಬರು ಸೋಲಾಪುರದಿಂದ ರಾಜ್ಯ ರಾಜಧಾನಿಗೆ ರೈಲು ಪ್ರಯಾಣ ಮಾಡುವಾಗ ನಿದ್ರೆಗೆ ಜಾರಿದ ನಂತರ ಅವರ ಬಳಿ ಇದ್ದ 5.53 ಕೋಟಿ ರೂ.ಗೂ ಹೆಚ್ಚು ಮೌಲ್ಯದ ಆಭರಣಗಳನ್ನು ಕದ್ದಿದ್ದಾರೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

ಡಿಸೆಂಬರ್ 6 ಮತ್ತು 7 ರ ಮಧ್ಯರಾತ್ರಿ ಚಿನ್ನದ ವ್ಯಾಪಾರಿ, ಸಿದ್ಧೇಶ್ವರ ಎಕ್ಸ್‌ಪ್ರೆಸ್ ರೈಲಿನಲ್ಲಿ ಸೋಲಾಪುರದಿಂದ ಮುಂಬೈಗೆ ಪ್ರಯಾಣಿಸುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಅವರು ಹೇಳಿದ್ದಾರೆ. ಕಲ್ಯಾಣ್ ಸರ್ಕಾರಿ ರೈಲ್ವೆ ಪೊಲೀಸ್(ಜಿಆರ್‌ಪಿ) ಪ್ರಕಾರ, ವ್ಯಾಪಾರಿ 4,456 ಗ್ರಾಂ ಚಿನ್ನದ ಆಭರಣಗಳನ್ನು ಹೊಂದಿರುವ ಎರಡು ಟ್ರಾಲಿ ಬ್ಯಾಗ್‌ಗಳನ್ನು ಸರಪಳಿಯಿಂದ ಭದ್ರಪಡಿಸಿಕೊಂಡು ತನ್ನ ಸೀಟಿನ ಕೆಳಗೆ ಇಟ್ಟಿದ್ದರು. ಅವರು ನಿದ್ರಿಸುತ್ತಿದ್ದಾಗ, ಅಪರಿಚಿತ ಕಳ್ಳನೊಬ್ಬ ಸರಪಳಿ ಮುರಿದು, ಎರಡೂ ಬ್ಯಾಗ್‌ಗಳನ್ನು ಕದ್ದು, ಸೋಲಾಪುರ ಮತ್ತು ಕಲ್ಯಾಣ್(ಥಾಣೆ ಜಿಲ್ಲೆಯಲ್ಲಿ) ನಡುವೆ ಎಲ್ಲೋ ಬೆಲೆಬಾಳುವ ವಸ್ತುಗಳೊಂದಿಗೆ ಪರಾರಿಯಾಗಿದ್ದಾನೆ ಎಂದು ಆರೋಪಿಸಲಾಗಿದೆ. ವ್ಯಾಪಾರಿ ಎಚ್ಚರವಾದಾಗ ಎರಡೂ ಬ್ಯಾಗ್‌ಗಳು ಕಾಣೆಯಾಗಿರುವುದು ಬೆಳಕಿಗೆ ಬಂದಿದೆ. ಸಂತ್ರಸ್ತೆಯ ದೂರಿನ ಆಧಾರದ ಮೇಲೆ ಭಾರತೀಯ ನ್ಯಾಯ ಸಂಹಿತೆ(ಬಿಎನ್‌ಎಸ್) ಸೆಕ್ಷನ್ 305 (ಸಿ) (ವಾಸಸ್ಥಳ, ಸಾರಿಗೆ ಸಾಧನ ಅಥವಾ ಪೂಜಾ ಸ್ಥಳದಲ್ಲಿ ಕಳ್ಳತನ) ಅಡಿಯಲ್ಲಿ ಅಪರಾಧ ದಾಖಲಿಸಲಾಗಿದೆ.

ಪಿಟಿಐ ಜೊತೆ ಮಾತನಾಡಿದ ಕಲ್ಯಾಣ್ ಜಿಆರ್‌ಪಿಯ ಹಿರಿಯ ಇನ್ಸ್‌ಪೆಕ್ಟರ್ ಪಂಢರಿ ಕಾಂಡೆ, "ನಾವು ಎಫ್‌ಐಆರ್ ದಾಖಲಿಸಿದ್ದೇವೆ ಮತ್ತು ತನಿಖೆಯನ್ನು ಪ್ರಾರಂಭಿಸಿದ್ದೇವೆ. ಆರೋಪಿ, ವ್ಯಾಪಾರಿ ನಿದ್ರೆಗೆ ಜಾರಿದ್ದನ್ನು ನೋಡಿಕೊಂಡು ಚಿನ್ನದ ಆಭರಣಗಳಿದ್ದ ಚೀಲಗಳೊಂದಿಗೆ ಪರಾರಿಯಾಗಿದ್ದಾರೆ. ಇಲ್ಲಿಯವರೆಗೆ ಯಾರನ್ನೂ ಬಂಧಿಸಲಾಗಿಲ್ಲ ಮತ್ತು ಶಂಕಿತನನ್ನು ಗುರುತಿಸು ಪ್ರಯತ್ನಗಳು ನಡೆಯುತ್ತಿವೆ" ಎಂದಿದ್ದಾರೆ.

# ಮಹತ್ವಕಾಂಕ್ಷಿ ಕ್ರೀಡಾ ಯೋಜನೆಗಳು ಹಾಗೂ ಕ್ರೀಡೆಯ ಭವಿಷ್ಯ

ನವೆಂಬರ್ 25 ರಿಂದ ಡಿಸೆಂಬರ್ ನಾಲ್ಕರವರೆಗೆ ರಾಜಸ್ಥಾನದ ಜೈಪುರದ ಸವಾಯಿ ಮಾನಸಿಂಗ್ ಕ್ರೀಡಾಂಗಣದಲ್ಲಿ ಖೇಲೋ ಇಂಡಿಯಾ ರಾಷ್ಟ್ರ ಮಟ್ಟದ ಕ್ರೀಡಾ ಕೂಟ ನಡೆಯಿತು. ಭವಿಷ್ಯದ ಕ್ರೀಡಾಪಟುಗಳನ್ನು ಗುರುತಿಸುವ ಗುರುತರ ಜವಾಬ್ದಾರಿಯನ್ನು ಹೊಂದಿರುವ ಈ ಕ್ರೀಡಾಕೂಟದಲ್ಲಿ ಬಹುತೇಕ ರಾಷ್ಟ್ರದ ಎಲ್ಲಾ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಭಾಗವಹಿಸಬೇಕಿತ್ತು. ಆದರೆ ಬೆರಳೆಣಿಕೆಯಷ್ಟು ಜನರು ಮಾತ್ರ ಒಂದೊಂದು ಆಟಗಳಲ್ಲಿ ಭಾಗವಹಿಸಿದ್ದರು. ಮತ್ತೆ ಕೆಲವರು ಆಯ್ಕೆಯಾಗಿದ್ದರು ಕೂಡ ಕ್ರೀಡೆಯಲ್ಲಿ ಭಾಗವಹಿಸಲಿಲ್ಲ. ಈ ಕುರಿತ ವಿಡಿಯೋ ಒಂದನ್ನು ನೋಡಿದಾಗ ತುಸು ಆಶ್ಚರ್ಯದ ಜೊತೆಗೆ ಜಾಗೃತಿಯನ್ನು ಉಂಟುಮಾಡುವ ಅವಶ್ಯಕತೆಯನ್ನು ಮನಗಂಡು ಮಾಹಿತಿಯನ್ನು ಪಡೆದ ನಂತರ ಮೂಡಿದ ಲೇಖನ ನಿಮ್ಮ ಓದಿಗೆ.

ಖೇಲೊ ಇಂಡಿಯಾ ತರಬೇತಿ ಸಂಸ್ಥೆಗಳು ಹಾಗೂ ಕ್ರೀಡಾ ಅಕಾಡೆಮಿಗಳು ಖೇಲೋ ಇಂಡಿಯಾ ಯೋಜನೆಯಡಿ ಆಯ್ಕೆಯಾದ ನಂತರ ಅವರಿಗೆ ತರಬೇತಿಯ ಜೊತೆಗೆ ಆರ್ಥಿಕ ಧನ ಸಹಾಯ ಹಾಗೂ ಪ್ರತಿ ತಿಂಗಳು ನಿಗದಿತ ಮೊತ್ತದ ಪಾಕೆಟ್ ಅಲೋವೆನ್ಸ್ ದೊರೆಯುತ್ತದೆ. ರಾಷ್ಟ್ರಮಟ್ಟದಲ್ಲಿ ನಡೆಯುವ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಮೊದಲ ಮೂರುಸ್ಥಾನ ಗಳಿಸುವವರಿಗೆ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೌಕರಿಯ ಅನುಕೂಲತೆಯನ್ನು ಕೂಡ ಒದಗಿಸಲಾಗುತ್ತದೆ ಹಾಗೂ ಪದಕ ವಿಜೇತರಿಗೆ ನಿಗದಿತ ಮೊತ್ತವನ್ನು ಕೊಡ ಮಾಡಲಾಗುತ್ತದೆ.

ಭಾರತ ದೇಶದಲ್ಲಿ ಕ್ರೀಡಾ ಸಂಸ್ಕೃತಿಯನ್ನು ಉತ್ತೇಜಿಸುವ ಹಾಗೂ ಪ್ರತಿಭೆಗಳನ್ನು ಗುರುತಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮಹತ್ವದ ಯೋಜನೆಯಾಗಿ ಗುರುತಿಸಲ್ಪಟ್ಟ ಖೇಲೋ ಇಂಡಿಯಾ ಕಾರ್ಯಕ್ರಮವು ಕೇಂದ್ರದ ಯುವಜನ ಮತ್ತು ಕ್ರೀಡಾ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತದೆ. ವಿಶಾಲವಾದ ಖೇಲೊ ಇಂಡಿಯಾ ಎಂಬ ಬೃಹತ್ ಪ್ರಮಾಣದ ಕ್ರೀಡಾ ಕೂಟಗಳನ್ನು ಭಾರತದ ಘನ ಸರ್ಕಾರವು ಆಯೋಜಿಸುತ್ತದೆ. ಪ್ರತಿ ಎರಡು ಜಿಲ್ಲೆಗಳಿಗೆ ಒಂದರಂತೆ ಒಟ್ಟು ಇಡೀ ದೇಶದಾದ್ಯಂತ 1041 ಖೇಲೋ ಇಂಡಿಯಾ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಖೇಲೋ ಇಂಡಿಯಾ ಕಾರ್ಯಕ್ರಮದ ಅಡಿಯಲ್ಲಿ ವಿವಿಧ ಹಂತದ ಕ್ರೀಡಾಪಟುಗಳು 2025ರ ಸಾಲಿನಲ್ಲಿ ನಡೆದಿದ್ದು ಮುಖ್ಯವಾಗಿ ಮೂರು ಪ್ರಮುಖ ರೀತಿಯ ಕ್ರೀಡಾಕೂಟಗಳನ್ನು ಆಯೋಜಿಸಲಾಗಿತ್ತು, ಇದರಲ್ಲಿ ಖೇಲೊ ಇಂಡಿಯಾ ಯೂತ್ ಗೇಮ್ಸ್ ಎಂಬುದು ಯುವ ಕ್ರೀಡಾಪಟುಗಳಿಗಾಗಿ ನಡೆಸುವ ಪ್ರಮುಖ ಸ್ಪರ್ಧೆಯಾಗಿದ್ದು ಮೇ ತಿಂಗಳಲ್ಲಿ ಈ ಕ್ರೀಡಾಕೂಟವು ಬಿಹಾರ ರಾಜ್ಯದಲ್ಲಿ ನಡೆಯಿತು. 17 ವರ್ಷ ವಯಸ್ಸಿಗಿಂತ ಕಡಿಮೆ ಹಾಗೂ 21 ವರ್ಷ ವಯಸ್ಸಿಗಿಂತ ಕಡಿಮೆ ಇರುವ ವಿಭಾಗಗಳಲ್ಲಿ ಸ್ಪರ್ಧಿಸುವ ಅವಕಾಶವನ್ನು ಇಲ್ಲಿ ಕಲ್ಪಿಸಲಾಗುತ್ತದೆ. 28 ಬಗೆಯ ವಿವಿಧ ಕ್ರೀಡೆಗಳು ಇದರಲ್ಲಿ ಸೇರ್ಪಡೆಯಾಗಿದ್ದು ಯುವ ಜನತೆಯಲ್ಲಿ ಕ್ರೀಡೆಯ ಕುರಿತಾದ ಆಸಕ್ತಿಯನ್ನು ಹೆಚ್ಚಿಸಲು ಹಾಗೂ ಭವಿಷ್ಯದ ಕ್ರೀಡಾಪಟುಗಳನ್ನು ತಯಾರಿಸುವ ನಿಟ್ಟಿನಲ್ಲಿ ಇದೊಂದು ಅತ್ಯುತ್ತಮ ಪ್ರಯತ್ನವಾಗಿದೆ.

ಖೇಲೋ ಇಂಡಿಯಾ ವಿಂಟರ್ ಗೇಮ್ಸ್ ಎಂಬುದು ಚಳಿಗಾಲದ ಕ್ರೀಡೆಯಾಗಿದ್ದು 2025 ಈ ಆವೃತ್ತಿಯು ಹಾಗೂ ಜಮ್ಮು ಮತ್ತು ಕಾಶ್ಮೀರ, ಹಾಗೂ ಲಡಾಕ್ ಗಳಲ್ಲಿ ಎರಡು ಹಂತಗಳಲ್ಲಿ ನಡೆಯಿತು.

ಖೇಲೋ ಇಂಡಿಯಾ ಬೀಚ್ ಗೇಮ್ಸ್ ಎಂಬ ಮತ್ತೊಂದು ವಿಶೇಷವಾದ ಸ್ಪರ್ಧೆಯು ಕಡಲ ತೀರದ ಕ್ರೀಡೆಗಳಿಗಾಗಿ ಮೀಸಲಾಗಿದ್ದು ದಾದರ್ ಹಾಗೂ ನಗರ ಹವೇಲಿ ಮತ್ತು ದಮನ್ ಮತ್ತು ಡಯು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಯಿತು.

ಕಡಲ ತೀರದಲ್ಲಿ ಆಡುವ ಆಟಗಳಾದ ವಾಲಿಬಾಲ್, ಬಾಸ್ಕೆಟ್ ಬಾಲ್, ಮಲ್ಲಕಂಬ, ಹಗ್ಗ ಜಗ್ಗಾಟ ಹಾಗೂ ಈಜುಗಳು ಇದರಲ್ಲಿ ಸೇರಿದ್ದವು.

ಖೇಲೋ ಇಂಡಿಯಾ ಯೂನಿವರ್ಸಿಟಿ ಗೇಮ್ ಗಳು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ನಡೆಯುವ ಸ್ಪರ್ಧೆಯಾಗಿದ್ದು 2025ರ ಡಿಸೆಂಬರ್ ನಾಲ್ಕರವರೆಗೆ ಸುಮಾರು 11 ದಿನಗಳ ಕಾಲ ರಾಜಸ್ಥಾನದ ಜೈಪುರದಲ್ಲಿ ಈ ಕ್ರೀಡಾಕೂಟವು ನಡೆಯಿತು.

ಸುಮಾರು 23ಕ್ಕೂ ಹೆಚ್ಚು ವಿವಿಧ ಬಗೆಯ ಸ್ಪರ್ಧೆಗಳು

ಈ ಕ್ರೀಡಾಕೂಟದಲ್ಲಿ ನಡೆದಿದ್ದು, ಭಾರತ ದೇಶದ ಇನ್ನೂರಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳಿಂದ ನಾಲ್ಕುವರೆ ಸಾವಿರದಿಂದ ಏಳು ಸಾವಿರ ವಿದ್ಯಾರ್ಥಿಗಳು ಭಾಗವಹಿಸಿರುವ ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ ಬಹುತೇಕ ವಿದ್ಯಾರ್ಥಿಗಳು ಆಟದಲ್ಲಿ ಪಾಲ್ಗೊಳ್ಳದೆ ಹೋಗಿದ್ದಾರೆ.

400 ಮೀಟರ್ ಓಟದಲ್ಲಿ ಕುರುಕ್ಷೇತ್ರ ವಿಶ್ವವಿದ್ಯಾಲಯದಿಂದ ಬಂದ ಕೇವಲ ಓರ್ವ ವಿದ್ಯಾರ್ಥಿನಿ ಓಡಿದ್ದರೆ ಅದೇ 400 ಮೀಟರ್ ಹರ್ಡಲ್ಸ್ ನಲ್ಲಿ ಕೇವಲ ಓರ್ವ ವಿದ್ಯಾರ್ಥಿ ಓಡಿದ್ದು ತನ್ನ ಹಿಂದಿನ ದಾಖಲೆಯನ್ನು ಮುರಿದು ಹೊಸ ದಾಖಲೆಯನ್ನು ಸೃಷ್ಟಿಸಿದ್ದಾನೆ. ಆದರೆ ಈ ಇಬ್ಬರು ಓಟಗಾರರಿಗೂ ಮೆಡಲುಗಳು ದೊರೆತಿಲ್ಲ. ನಿಯಮದ ಪ್ರಕಾರ ಎಲ್ಲಾ ಯುನಿವರ್ಸಿಟಿಗಳ ಭಾಗವಹಿಸಿದ ವಿದ್ಯಾರ್ಥಿಗಳಲ್ಲಿ ಒಂದೊಂದು ಅಥ್ಲೆಟಿಕ್ ಕ್ರೀಡೆಯಲ್ಲಿಯೂ ಅತಿ ಹೆಚ್ಚು ಪಾಯಿಂಟ್ಗಳನ್ನು ಗಳಿಸಿರುವ ಕ್ರೀಡಾಪಟುಗಳಿಗೆ ಆಯ್ಕೆಯಲ್ಲಿ ಅವಕಾಶವಿದ್ದು ಈ ಹಿಂದೆ ನಡೆದಿರುವ ಯೂನಿವರ್ಸಿಟಿ ಮಟ್ಟದ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಅಂತಿಮ ಘಟ್ಟವನ್ನು ತಲುಪಿರುವ ಮೊದಲ ಎಂಟು ಜನ ವಿದ್ಯಾರ್ಥಿಗಳನ್ನು ಇಲ್ಲಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ಹೀಗೆ ರಾಷ್ಟ್ರ ಮಟ್ಟದಲ್ಲಿ ಖೇಲೋ ಇಂಡಿಯಾ ಕಾರ್ಯಕ್ರಮದ ಅಡಿಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಆಟದ ಮೈದಾನಕ್ಕೆ ಬರದೆ ಹೋಗುವುದು ವಿಪರ್ಯಾಸದ ಸಂಗತಿ. ಇದಕ್ಕೆ ಕಾರಣಗಳು ಹಲವಾರು.

* ಈಗಾಗಲೇ ಸರಕಾರಿ ನೌಕರಿ ದೊರೆತಿರುವ ಕಾರಣ ಅಂತಹವರಿಗೆ ಅವಕಾಶವನ್ನು ನಿರಾಕರಿಸಲಾಗುತ್ತದೆ.

*ಮುಂದಿನ ದೊಡ್ಡ ಕ್ರೀಡಾ ಚಟುವಟಿಕೆಗೆ ಸಿದ್ಧತೆ ಮಾಡಿಕೊಳ್ಳುತ್ತಿರುವವರು ಕೂಡ ಈ ಕ್ರೀಡಾಕೂಟದಲ್ಲಿ ಭಾಗವಹಿಸುವುದನ್ನು ನಿರಾಕರಿಸಬಹುದು.

*ಮಾದಕ ವಸ್ತು ಸೇವನೆಯ ಪರೀಕ್ಷೆ. ರಾಷ್ಟ್ರೀಯ ಮಾದಕ ದ್ರವ್ಯ ಸೇವನೆ ವಿರೋಧಿ ಸಂಸ್ಥೆಯಾದ 'ನ್ಯಾಷನಲ್ ಆಂಟಿ ಡೋಪಿಂಗ್ ಏಜೆನ್ಸಿ'ಯಿಂದ ನಡೆಸಲ್ಪಡುವ ಮಾದಕ ದ್ರವ್ಯ ಸೇವನೆಯ ಪರೀಕ್ಷೆಯ ಭಯದಿಂದ ಕ್ರೀಡಾಕೂಟದಿಂದಲೇ ಹೊರ ನಡೆಯುವುದು. ಇಲ್ಲಾಗಿದ್ದೂ ಅದೇ. ಎಷ್ಟೋ ಬಾರಿ ಆಹಾರ ಸೇವನೆಯ ವ್ಯತ್ಯಾಸದಿಂದಾಗಿ ಕೂಡ ಹಾರ್ಮೋನುಗಳಲ್ಲಿ ಬದಲಾವಣೆಯನ್ನು ಕಂಡುಕೊಳ್ಳಬಹುದು ಅಥವಾ ವೈದ್ಯರು ಹೇಳಿರುವ ಔಷಧಿಗಳಲ್ಲಿ, ಕೆಲ ನಿಷೇಧಿತ ವಸ್ತುಗಳಲ್ಲಿ ನಾಡಾ ಸಂಸ್ಥೆಯು ಅಂಗೀಕರಿಸದೆ ಇರುವ

ಹಾರ್ಮೋನುಗಳನ್ನು ಹಾಗೂ ದೈಹಿಕ ಬಲವನ್ನು ಪ್ರಚೋದಿಸುವ ಔಷಧಿಗಳನ್ನು ಸೇವಿಸಿದ ಕುರಿತು ಕ್ರೀಡಾಪಟುವಿನ ರಕ್ತ ಮತ್ತು ಮೂತ್ರದ ಸ್ಯಾಂಪಲ್ ಗಳನ್ನು ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸಲಾಗುತ್ತದೆ. ಅಂತರಾಷ್ಟ್ರೀಯ ಗುಣಮಟ್ಟದ ಪ್ರಯೋಗಾಲಯಗಳಲ್ಲಿ ಪರೀಕ್ಷಿಸಲ್ಪಡುವ ರಕ್ತ ಹಾಗೂ ಮೂತ್ರದ ಮಾದರಿಗಳಲ್ಲಿ ಸಂಸ್ಥೆಯು ನಿಷೇಧಿಸಿರುವ ಯಾವುದಾದರೂ ಒಂದು ಮಾದಕ ದ್ರವ್ಯವನ್ನು ಹೊಂದಿದ್ದರೆ ಆಟಗಾರರನ್ನು ಕೆಲ ತಿಂಗಳು ಇಲ್ಲವೇ ಕೆಲ ವರ್ಷಗಳ ಕಾಲ ಆಟದಿಂದ ಹೊರಗಿಡಬಹುದು. ಕ್ರೀಡೆಯಿಂದಲೇ ನಿಷೇಧಿಸಬಹುದು. ನೋವು ಅಪಮಾನಗಳು ಅವರನ್ನು ಬೆನ್ನಟ್ಟಬಹುದಾದ ಸಾಧ್ಯತೆಗಳು ಬಹಳ.

ಬಹುತೇಕ ಕ್ರೀಡಾಪಟುಗಳು ತಮ್ಮ ದೈಹಿಕ ಸಾಮರ್ಥ್ಯವನ್ನು, ಶಕ್ತಿಯನ್ನು ಹೆಚ್ಚಿಸಿಕೊಳ್ಳಲು ಕೂಡ ಇಂತಹ ಮಾದಕ ದ್ರವ್ಯಗಳ ಸೇವನೆಯಲ್ಲಿ ತೊಡಗಿಕೊಂಡಿರುತ್ತಾರೆ, ಮತ್ತೆ ಕೆಲವೊಮ್ಮೆ ಬಹು ರಾಷ್ಟ್ರೀಯ ಕಂಪನಿಗಳ ತಯಾರಿಕೆಯ ಆಹಾರ ಪದಾರ್ಥ ಹಾಗೂ ಕೂಲ್ ಡ್ರಿಂಕ್ ಗಳಲ್ಲಿ ಹೆಚ್ಚಿನ ಮಟ್ಟದ ನಿಷೇಧ ಪದಾರ್ಥಗಳು ಇರುವುದು ಇವುಗಳ ಸೇವನೆಯಿಂದಲೂ ಕೂಡ ಕ್ರೀಡಾಪಟುಗಳು ತೊಂದರೆಯನ್ನು ಅನುಭವಿಸುತ್ತಾರೆ. ಎಷ್ಟೋ ಬಾರಿ ಯಾವ ಆಹಾರವನ್ನು ಸೇವಿಸಬೇಕು ಯಾವುದನ್ನು ಸೇವಿಸಬಾರದು ಎಂಬ ಅರಿವಿನ ಕೊರತೆಯಿಂದಲೂ ಇಂತಹ ತೊಂದರೆಗಳು ಉದ್ಭವಿಸುತ್ತವೆ...ಆದ್ದರಿಂದಲೇ ಬಹಳಷ್ಟು ವಿದ್ಯಾರ್ಥಿಗಳು ಈ ಪರೀಕ್ಷೆಯನ್ನು ತಪ್ಪಿಸುವ ಸಲುವಾಗಿ ಕ್ರೀಡೆಯಿಂದಲೇ ಹೊರಗೆ ಉಳಿಯುತ್ತಾರೆ.

ಇಲ್ಲಾದದ್ದು ಕೂಡ ಅದೇ. ಬಹುತೇಕ ರಾಷ್ಟ್ರಮಟ್ಟದ ಅಥ್ಲೆಟಿಕ್ ಕ್ರೀಡಾಕೂಟಗಳಲ್ಲಿ ಮೂರು ಇಲ್ಲವೇ ಅದಕ್ಕಿಂತಲೂ ಹೆಚ್ಚಿನ ಪ್ರಮಾಣದ ಕ್ರೀಡಾಪಟುಗಳು ಇರಲೇಬೇಕು ಎಂಬುದು ನಿಯಮ.... ಹಾಗಿದ್ದರೆ ಮಾತ್ರ ಅವರಿಗೆ ಸ್ಥಾನಮಾನ ಹಾಗೂ ಪದಕ ಗೆಲ್ಲಲು ಅವಕಾಶ. ಆದರೆ ಖೇಲೋ ಇಂಡಿಯಾದಲ್ಲಿ ಕ್ರೀಡಾಕೂಟದ ಆರಂಭದ ದಿನ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಭಾಗವಹಿಸದೇ ಇರುವುದು ಇದೇ ಕಾರಣಕ್ಕೆ. ಇದೊಂದು ಅಪಾಯಕಾರಿ ಬೆಳವಣಿಗೆ ಅಲ್ಲವೇ?? ಇದೇ ರೀತಿ ಪರಿಸ್ಥಿತಿ ಮುಂದುವರೆದರೆ ಮುಂದಿನ ದಿನಗಳಲ್ಲಿ ಭಾರತ ದೇಶದಲ್ಲಿ ಕ್ರೀಡೆಗಳಲ್ಲಿ ಭಾಗವಹಿಸುವವರ ಸಂಖ್ಯೆ ಗಣನೀಯವಾಗಿ ಇಳಿಮುಖವಾಗುತ್ತದೆ. ಮೌಲ್ಯಗಳೇ ಬದುಕು ಎಂದು ಉಸಿರಾಡುವ ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಅಜ್ಞಾನ ಮತ್ತು ಅರಿವಿನ ಕೊರತೆಯ ಕಾರಣದಿಂದಾಗಿ ಬಹಳಷ್ಟು ಕ್ರೀಡಾಪಟುಗಳು ತಮ್ಮ ಕ್ರೀಡಾ ಬದುಕಿಗೆ ವಿದಾಯ ಹೇಳಿದ್ದಾರೆ. ಮತ್ತೆ ಕೆಲವರು ಪುಟಿದೆದ್ದ ಚಂಡಿನಂತೆ, ಸುಟ್ಟ ಬೂದಿಯಲ್ಲಿ ಮರು ಹುಟ್ಟು ಪಡೆದುಕೊಳ್ಳುವ ಫೀನಿಕ್ಸ್ ನಂತೆ ಮರಳಿ ಅಂಗಳಕ್ಕೆ ಇಳಿದು ಯಶಸ್ಸು ಕಂಡುಕೊಂಡಿದ್ದಾರೆ.

ಈ ನಿಟ್ಟಿನಲ್ಲಿ ಸರ್ಕಾರ ಗಂಭೀರವಾಗಿ ಯೋಚಿಸಬೇಕಾಗಿದೆ. ಕ್ರೀಡಾಪಟುಗಳಲ್ಲಿ ಕ್ರೀಡೆಗೆ ಅತ್ಯವಶ್ಯಕವಾದ ಶಿಸ್ತು, ಪರಿಶ್ರಮ, ಶ್ರದ್ಧೆ, ಸ್ಥಿರತೆಯ ಜೊತೆ ಜೊತೆಗೆ ಮೌಲ್ಯಗಳನ್ನು ಕೂಡ ಅಭಿವೃದ್ಧಿಪಡಿಸಬೇಕಾದ ಅವಶ್ಯಕತೆಯನ್ನು ಮನಗಂಡು ಅವರಿಗೆ ತರಬೇತಿ ಕೊಡಬೇಕು.

ಜಾಗತಿಕ ಜನಸಂಖ್ಯೆಯಲ್ಲಿ ಎರಡನೇ ಸ್ಥಾನವನ್ನು ಪಡೆದಿದ್ದರೂ ಕೂಡ ಕ್ರೀಡೆಯ ವಿಷಯದಲ್ಲಿ ಪ್ರಪಂಚದ 190ಕ್ಕೂ ಹೆಚ್ಚು ದೇಶಗಳ ಕ್ರೀಡಾಪಟ್ಟಿಯಲ್ಲಿ ಅತ್ಯಂತ ಕೆಳಗಿನ ಸ್ಥಾನವನ್ನು ಗಳಿಸಿರುವ ಭಾರತ ಮುಂದಿನ ದಿನಗಳಲ್ಲಿ ಮತ್ತಷ್ಟು ಶೋಚನೀಯ ಪರಿಸ್ಥಿತಿಗೆ ಇಳಿಯುವುದನ್ನು ತಪ್ಪಿಸಬೇಕು. ಇದು ನಮ್ಮ ಭಾರತ ಘನ ಸರ್ಕಾರದ ಆದ್ಯತೆಯ ಪಟ್ಟಿಯಲ್ಲಿ ಮಂಚೂಣಿಯಲ್ಲಿ ಇರಬೇಕಾದ ವಿಷಯವಾಗಿದ್ದು ಈ ನಿಟ್ಟಿನಲ್ಲಿ ವಿವಿಧ ಕ್ರೀಡಾ ಸಂಸ್ಥೆಗಳು ಹಾಗೂ ಸರ್ಕಾರದ ಯುವಜನ ಮತ್ತು ಕ್ರೀಡಾ ಇಲಾಖೆ ಸಂಯುಕ್ತವಾಗಿ ಯೋಜನೆಗಳನ್ನು ರೂಪಿಸುವ, ಅವುಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ಭಾರತದಲ್ಲಿ ಕ್ರೀಡೆಗಳ ಅಭಿವೃದ್ಧಿಗೆ ನಾಂದಿ ಹಾಡಲಿ ಎಂಬ ಆಶಯದೊಂದಿಗೆ







ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ ಗದಗ್

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,